ಸಂಪುಟ: 14 Volume | ಸಂಚಿಕೆ: 66 Issue | ಪುಟಗಳು 08 Pages | ಭಾನುವಾರ 14 ಜೂನ್ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**
ದೊಡ್ಡ ಯೋಚನೆಗಳೊಡನೆ ಇರುವವರು ಎಂದೂ ಏಕಾಂಗಿಗಳಲ್ಲ.
–ಸರ್.ಫಿಲಿಪ್ ಸಿಡ್ನಿ

## ಅಪಘಾತ ಇಬ್ಬರ ಸಾವು

**ಬಾಗಲಕೋಟೆ:** ಜಿಲ್ಲೆಯ ಬೀಳಗಿ ತಾಲ್ಲೂಕಿನ ಅನಗವಾಡಿ ಸಮೀಪ ಶನಿವಾರ ಬೆಳಿಗ್ಗೆ 11 ಗಂಟೆಗೆ ಲಾರಿ ಹಾಗೂ ಬಸ್ ನಡುವೆ ಡಿಕ್ಕಿ ಸಂಭವಿಸಿ ಇಬ್ಬರು ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ಬಾಗಲಕೋಟೆ ತಾಲ್ಲೂಕಿನ ಸಿಮಿಕೇರಿಯ ವೀಣಾ ದೇಸಾಯಿ (29) ಹಾಗೂ ಗದಗ ಜಿಲ್ಲೆಯ ನರಗುಂದ ತಾಲ್ಲೂಕಿನ ಬನಟ್ಟಿ ಗ್ರಾಮದ ಶಿವಾನಂದ ಕೊಡ್ಲಿವಾಡ (28) ಮೃತ ಬಸ್ ಪ್ರಯಾಣಿಕರು. 5 ಜನ ಪ್ರಯಾಣಿಕರು ಗಾಯಗೊಂಡಿದ್ದು ಬಾಗಲಕೋಟೆಯ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಲಾರಿ ಚಾಲಕನ ವಿರುದ್ಧ ಪ್ರಕರಣ ದಾಖಲಾಗಿದ್ದು ಆರೋಪಿಯನ್ನು ಬೀಳಗಿ ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ. ಹಿರಿಯ ಪೊಲೀಸ್ ಅಧಿಕಾರಿಗಳು ಘಟನಾ ಸ್ಥಳಕ್ಕೆ ಭೇಟಿ ನೀಡಿದ್ದರು.



ಸಚಿವ ಸತೀಶ್ ಜಾರಕಿಹೊಳಿ ಅವರ ನೇತೃತ್ವದ ವಾಲ್ಮೀಕಿ ಸಮುದಾಯದ ನಿಯೋಗವು ಸಿಎಂ ಡಿ ಕೆ ಶಿವಕುಮಾರ್ ಅವರನ್ನು ವಿಧಾನಸೌಧದ ಕಚೇರಿಯಲ್ಲಿ ಶನಿವಾರ ಭೇಟಿ ಮಾಡಿ ಮನವಿ ಸಲ್ಲಿಸಿತು. ಶ್ರೀ ವಾಲ್ಮೀಕಿ ಗುರುಪೀಠ ಮಹಾ ಸಂಸ್ಥಾನದ ಪೀಠಾಧ್ಯಕ್ಷ ಶ್ರೀ ಪ್ರಸನ್ನಾನಂದ ಪುರಿ ಸ್ವಾಮೀಜಿ, ಶಾಸಕರಾದ ಬಸನಗೌಡ ದದ್ದಲ್, ಕಂಪ್ಲಿ ಗಣೇಶ್, ಕೂಡ್ಲಿಗಿ ಶ್ರೀನಿವಾಸ್, ರಘುಮೂರ್ತಿ ಮತ್ತಿತರರು ಉಪಸ್ಥಿತರಿದ್ದರು.



ಶಾಲಾ ಶೈಕ್ಷಣಿಕ ವರ್ಷ ಆರಂಭದ ಹಿನ್ನೆಲೆಯಲ್ಲಿ ಸಿಎಂ ಡಿ ಕೆ ಶಿವಕುಮಾರ್ ಅವರು ವಿಧಾನಸೌಧದ ತಮ್ಮ ಕಚೇರಿಯಲ್ಲಿ ಶನಿವಾರ ಶಿಕ್ಷಣ ಇಲಾಖೆ ಅಧಿಕಾರಿಗಳ ಸಭೆ ನಡೆಸಿದರು. ಸಚಿವ ಯುಟಿ ಖಾದರ್, ಮುಖ್ಯ ಕಾರ್ಯದರ್ಶಿ ಡಾ ಶಾಲಿನಿ ರಜನೀಶ್, ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಎಲ್ ಕೆ ಅತೀಕ್, ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ರಶ್ಮಿ ಮಹೇಶ್, ಸಿಎಂ ಕಾರ್ಯದರ್ಶಿ ರಾಜೇಂದ್ರ ಚೋಳನ್ ಮತ್ತಿತರರು ಭಾಗವಹಿಸಿದ್ದರು.



ಬೆಂಗಳೂರು: ಕೇಂದ್ರ ಹಣಕಾಸು ಖಾತೆ ಸಚಿವರಾದ ಶ್ರೀಮತಿ ನಿರ್ಮಲಾ ಸೀತಾರಾಮನ್ ಅವರನ್ನು ಬೆಂಗಳೂರು ಗ್ರಾಮಾಂತರ ಜಿಲ್ಲಾಧ್ಯಕ್ಷ ರಾಮಕೃಷ್ಣಪ್ಪ, ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್. ಹರೀಶ್ ಮತ್ತು ದೇವನಹಳ್ಳಿ ಮಂಡಲ ಅಧ್ಯಕ್ಷ ಅಂಬರೀಷ್ ಗೌಡ ಅವರು ಇಂದು ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬರಮಾಡಿಕೊಂಡರು.

## ರಸಗೊಬ್ಬರ ಪೂರೈಸುವುದು ಕೇಂದ್ರದ ಜವಾಬ್ದಾರಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರೈತರ ಅವಶ್ಯಕತೆಗೆ ಅನುಗುಣವಾಗಿ ರಾಜ್ಯಗಳಿಗೆ ರಸಗೊಬ್ಬರ ಪೂರೈಸಬೇಕಾದ್ದು ಕೇಂದ್ರ ಸರ್ಕಾರದ ಜವಾಬ್ದಾರಿಯಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಹೇಳಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ರಾಜ್ಯಕ್ಕೆ ಬೇಡಿಕೆಗೆ ಪ್ರತಿಯಾಗಿ ಕೇವಲ 30ರಷ್ಟು ಮಾತ್ರ ರಸಗೊಬ್ಬರ ಪೂರೈಸಿದ್ದು, ಇದರಿಂದ ರಾಜ್ಯದಲ್ಲಿ ರಸಗೊಬ್ಬರದ ತೀವ್ರ ಕೊರತೆ ಉದ್ಭವಿಸಿದೆ ಎಂದರು.

ಕೇಂದ್ರ ಸರ್ಕಾರ ತಾರತಮ್ಯ ಮಾಡದೆ ಕರ್ನಾಟಕ ರಾಜ್ಯದ ರೈತರ ಹಿತಕಾಯಲು ಪೂರ್ಣ ಪ್ರಮಾಣದಲ್ಲಿ ರಸಗೊಬ್ಬರ ಪೂರೈಕೆ ಮಾಡುವಂತೆ ಅವರು ಒತ್ತಾಯಿಸಿದರು.



ಬೀದರ್ ಜಿಲ್ಲೆಯಲ್ಲಿ ರಸಗೊಬ್ಬರವನ್ನು ಹೆಚ್ಚಿನ ದರಕ್ಕೆ ಮತ್ತು ಕಾಳಸಂತೆಯಲ್ಲಿ ಮಾರಾಟ ಮಾಡುವವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲು ಮತ್ತು ಅಂತಹ ಮಳಿಗೆಗಳ ಮೇಲೆ ದಾಳಿ ಮಾಡಲು ಜಿಲ್ಲಾಡಳಿತಕ್ಕೆ ಸೂಚನೆ ನೀಡಿರುವುದಾಗಿಯೂ ಈಶ್ವರ ಖಂಡ್ರೆ ತಿಳಿಸಿದರು.

## ನರೇಂದ್ರ ಮೋದಿ ನೇತೃತ್ವದಲ್ಲಿ ಅಭಿವೃದ್ಧಿ ಪರ್ವ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಭಾರತವು ಪ್ರಧಾನಮಂತ್ರಿ ಆದರಣೀಯ ನರೇಂದ್ರ ಮೋದಿಜೀ ಅವರ ನೇತೃತ್ವದಲ್ಲಿ ಅಭಿವೃದ್ಧಿಯಲ್ಲಿ ವಿಶೇಷ ಸಾಧನೆ ಮಾಡಿದೆ ಎಂದು ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಹಾಗೂ ಬಿಜೆಪಿ ಕರ್ನಾಟಕ ರಾಜ್ಯದ ಪ್ರಭಾರಿ ಡಾ. ರಾಧಾಮೋಹನ್ ದಾಸ್ ಅಗ್ರವಾಲ್ ಅವರು ಮೆಚ್ಚುಗೆ ಸೂಚಿಸಿ ಪ್ರಧಾನಿಯವರನ್ನು ಅಭಿನಂದಿಸಿದರು.

ಇಂದು ಭಾರತೀಯ ಜನತಾ ಪಾರ್ಟಿ, ದಕ್ಷಿಣ ಕನ್ನಡ ಜಿಲ್ಲಾ ವತಿಯಿಂದ ಪಾಲೆಮಾರ್ ಗಾರ್ಡನಲ್ಲಿ ನಡೆದ ವಿಕಸಿತ ಭಾರತ ಸಂಕಲ್ಪ ಸಮಾವೇಶದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಪಕ್ಷ ಸಂಘಟನೆ ಬಲವರ್ಧನೆ, ಕಾರ್ಯಕರ್ತರ ಮಾರ್ಗದರ್ಶನ ಹಾಗೂ ವಿಕಸಿತ ಭಾರತದ ಸಂಕಲ್ಪ ಸಾಕಾರಗೊಳಿಸುವ ನಿಟ್ಟಿನಲ್ಲಿ ಮೋದಿಜೀ ಅವರ ನಾಯಕತ್ವ ಮತ್ತು ಕೊಡುಗೆಗಳು ಪ್ರೇರಣಾದಾಯಕವಾಗಿವೆ ಎಂದರಲ್ಲದೇ, ಅವನ್ನು ಕಾರ್ಯಕರ್ತರು ಮತ್ತು ಮುಖಂಡರು ಅಳವಡಿಸಿಕೊಳ್ಳಬೇಕೆಂದು ತಿಳಿಸಿದರು.

ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವ ನಿಜವಾದ ಸಾಧಕರನ್ನು ಗುರುತಿಸಿ ಗೌರವಿಸಲಾಯಿತು. ಭಾರತೀಯ ಸೇನೆಯಲ್ಲಿ ದೇಶಸೇವೆ ಮಾಡಿದ ಯೋಧರು, ನಿವೃತ್ತಿಯ ನಂತರವೂ ಸಮಾಜ ಮತ್ತು ಪಕ್ಷಕ್ಕಾಗಿ ಶ್ರಮಿಸಿದ ಹಿರಿಯರು, ಸ್ಮಶಾನ ಸೇವಕರು, ಪೌರ ಕಾರ್ಮಿಕರು, ಕ್ರೀಡಾಪಟುಗಳು, ಮೀನುಗಾರರು, ತಾರಸಿ ಕೃಷಿ ಹಾಗೂ ಕೃಷಿ ಕ್ಷೇತ್ರದಲ್ಲಿ ಸಾಧನೆಗೈದ ಹಲವಾರು ಗಣ್ಯರನ್ನು ರಾಜ್ಯ ಪ್ರಭಾರಿ ಡಾ. ರಾಧಾಮೋಹನ್ ದಾಸ್ ಅಗ್ರವಾಲ್ ಅವರ ಸಮ್ಮುಖದಲ್ಲಿ ಸತೀಶ್ ಕುಂಪಲ ಮತ್ತು ಇತರ ಗಣ್ಯರು ಸನ್ಮಾನಿಸಿದರು.

# ಬೀಜದ ಕೊರತೆಗೆ ಬ್ರೇಕ್

## ಕೃಷಿ ಚಟುವಟಿಕೆಗೆ ಯಾವುದೇ ತೊಂದರೆ ಆಗಬಾರದು: ಅಧಿಕಾರಿಗಳಿಗೆ ಸಿಎಂ ಡಿಕೆಶಿ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕೃಷಿ ಚಟುವಟಿಕೆಗೆ ರಸಗೊಬ್ಬರ ಹಾಗೂ ಬಿತ್ತನೆ ಬೀಜದ ಕೊರತೆಯಾಗಬಾರದು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೂಚನೆ ನೀಡಿದ್ದಾರೆ. ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿಂದು ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ಮುಖ್ಯಾಧಿಕಾರಿ ಸೇರಿದಂತೆ ಹಿರಿಯ ಅಧಿಕಾರಿಗಳ ಜೊತೆ ಸಭೆ ನಡೆಸಿದ ಅವರು, ಆಡಳಿತ ಯಂತ್ರವನ್ನು ಮತ್ತಷ್ಟು ಚುರುಕುಗೊಳಿಸಲು ಪ್ರಾಮಾಣಿಕ ಪ್ರಯತ್ನ ಮಾಡುವಂತೆ ನಿರ್ದೇಶನ ನೀಡಿದ್ದಾರೆ.

**ನೀರಿನ ಕೊರತೆ, ಎಚ್ಚರಿಕೆ:** ಜಲಾಶಯಗಳಲ್ಲಿ ನೀರಿನ ಸಂಗ್ರಹವನ್ನು ಸಮರ್ಪಕವಾಗಿ ಕಾಯ್ದುಕೊಳ್ಳುವ ಮೂಲಕ ಕುಡಿಯುವ ನೀರಿಗೆ ಕೊರತೆಯಾಗದಂತೆ ಎಚ್ಚರಿಕೆ ವಹಿಸಬೇಕು. ಶೈಕ್ಷಣಿಕ ಚಟುವಟಿಕೆಗಳ ವಿಚಾರದಲ್ಲಿ ನಿಗಾವಹಿಸಬೇಕೆಂದು ಆದೇಶಿಸಿದ್ದಾರೆ.

**ಜಿಲ್ಲಾಧಿಕಾರಿಗಳಿಗೆ ಸೂಚನೆ:** ಇತ್ತೀಚೆಗೆ ಸರ್ಕಾರದ ವಿವಿಧ ಇಲಾಖೆಗಳ ಅಪರ ಮುಖ್ಯಕಾರ್ಯದರ್ಶಿ, ಕಾರ್ಯದರ್ಶಿಗಳ ಜೊತೆ ಸಭೆ ನಡೆಸಿದ ಸಿಎಂ, ಹಲವು ರೀತಿಯ ಸೂಚನೆಗಳನ್ನು ನೀಡಿದ್ದರು. ಮುಂದುವರೆದು ಇಂದು ಜಿಲ್ಲಾ ಕೇಂದ್ರಗಳ ಮುಖ್ಯಸ್ಥರಾಗಿರುವ ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ಮುಖ್ಯಾಧಿಕಾರಿಗಳ ಜೊತೆ ಮಹತ್ವದ ಚರ್ಚೆ ನಡೆಸಿದ್ದಾರೆ.




### ಮುಂಗಾರು ಮುನಿಸು..!

ಪರಿಸ್ಥಿತಿಯನ್ನು ಜಿಲ್ಲಾಡಳಿತ ಸೂಕ್ಷ್ಮವಾಗಿ ನಿಭಾಯಿಸಬೇಕು. ಕಾನೂನು ಸುವ್ಯವಸ್ಥೆಗೆ ಧಕ್ಕೆಯಾಗದಂತೆ ಎಚ್ಚರಿಕೆ ವಹಿಸಬೇಕೆಂದು ಸಲಹೆ ನೀಡಿದ್ದಾರೆ. ಪ್ರಸಕ್ತ ಸಾಲಿನಲ್ಲಿ ಮುಂಗಾರು ಕೊರತೆಯ ಮುನ್ಸೂಚನೆ ಇದೆ. ಹವಾಮಾನ ವರದಿಗೆ ಅನುಗುಣವಾಗಿ ಕೃಷಿ ಬೆಳೆಗಳನ್ನು ಬೆಳೆಯಲು ಕೃಷಿಕರಿಗೆ ಮಾರ್ಗದರ್ಶನ ನೀಡಬೇಕು ಎಂದು ಸಲಹೆ ನೀಡಿದ್ದಾರೆ.

### ಸಮಸ್ಯೆಗೆ ತುರ್ತು ಸ್ಪಂದನೆ

ಜನರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸುವ ಮೂಲಕ ಆಡಳಿತ ಜನ ಪರವಾಗಿದೆ ಎಂಬುದನ್ನು ಖಚಿತಪಡಿಸಬೇಕು. ಸರ್ಕಾರದ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವ ಜೊತೆಗೆ ಸಮಸ್ಯೆಗಳಿಗೂ ತ್ವರಿತವಾಗಿ ಸ್ಪಂದಿಸಬೇಕು. ರಸ ಗೊಬ್ಬರದ ಪೂರೈಕೆಯಲ್ಲಿ ವ್ಯತ್ಯಯವಾಗಿದೆ. ಕೆಲವು ಕಡೆ ರೈತರು ಪ್ರತಿಭಟನೆ ನಡೆಸುತ್ತಿದ್ದಾರೆ ಎಂದು ಸಿಎಂ ತಿಳಿಸಿದ್ದಾರೆ.

### ನೆಪ, ವಿಳಂಬ ಬೇಡ

ಕೈಗಾರಿಕೆಗಳಿಗೆ ಪೂರಕವಾದ ವಾತಾವರಣ ನಿರ್ಮಾಣವಾಗಬೇಕು. ಅನಗತ್ಯವಾಗಿ ನಿಯಮಗಳ ನೆಪ ಹೇಳಿ ತೊಂದರೆ ಕೊಡಬಾರದು, ಭೂ ಪರಿವರ್ತನೆ, ಮಂಜೂರಾತಿ ಸೇರಿದಂತೆ ಹಲವಾರು ವಿಚಾರಗಳಲ್ಲಿ ವಿಳಂಬ ಸರಿಯಲ್ಲ. ಸರ್ಕಾರದ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪಬೇಕು. ಅನರ್ಹರನ್ನು ಪತ್ತೆಹಚ್ಚಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದ್ದಾರೆ.

### ಗಣ್ಯರ ಉಪಸ್ಥಿತಿ

ರಸ್ತೆ ಸುಧಾರಣೆ, ಮೂಲ ಸೌಲಭ್ಯಗಳ ಸೃಷ್ಟಿ, ಮಳೆ ಅನಾಹುತಗಳ ಮುನ್ನೆಚ್ಚರಿಕೆ ಸೇರಿದಂತೆ ಹಲವಾರು ವಿಚಾರಗಳಲ್ಲಿ ಕಾಳಜಿವಹಿಸುವಂತೆ ಆದೇಶಿಸಿದ್ದಾರೆ. ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಸಚಿವರಾದ ಪ್ರಿಯಾಂಕ್ ಖರ್ಗೆ, ಕೃಷ್ಣಭೈರೇಗೌಡ, ಯು.ಟಿ.ಖಾದರ್ ಸೇರಿದಂತೆ ಹಲವಾರು ಮಂದಿ ಸಭೆಯಲ್ಲಿ ಭಾಗವಹಿಸಿದ್ದರು.

## ರಸ್ತೆ ಸುರಕ್ಷತೆಗೆ ಹೆಲ್ಮೆಟ್ ಕಡ್ಡಾಯ: ಡಿವೈಎಸ್ಪಿ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ರಸ್ತೆ ಅಪಘಾತಗಳಿಂದ ಜೀವಹಾನಿ ತಪ್ಪಿಸಲು ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು ಎಂದು ಡಿವೈಎಸ್ಪಿ ಜೆ.ಎಸ್. ನ್ಯಾಮಗೌಡರ್ ಸಾರ್ವಜನಿಕರಿಗೆ ಕರೆ ನೀಡಿದರು.



ಮಾಧ್ಯಮನೊಂದಿಗೆ ಮಾತನಾಡಿದ ಅವರು, ದ್ವಿಚಕ್ರ ವಾಹನ ಸವಾರರು ಹಾಗೂ ಹಿಂಬದಿ ಸವಾರರೂ ಹೆಲ್ಮೆಟ್ ಧರಿಸುವುದರಿಂದ ಗಂಭೀರ ಗಾಯಗಳು ಮತ್ತು ಜೀವಹಾನಿಯನ್ನು ತಡೆಗಟ್ಟಬಹುದು ಎಂದು ಹೇಳಿದರು. ವಾಹನ ಚಲಾಯಿಸುವ ವೇಳೆ ಸಂಚಾರ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಅತಿವೇಗ, ಮೊಬೈಲ್ ಬಳಕೆ ಹಾಗೂ ನಿರ್ಲಕ್ಷ್ಯದಿಂದ ವಾಹನ ಚಲಾಯಿಸುವುದನ್ನು ತಪ್ಪಿಸಬೇಕು ಎಂದು ಸಲಹೆ ನೀಡಿದರು. "ಹೆಲ್ಮೆಟ್ ಧರಿಸುವುದು ಕೇವಲ ಕಾನೂನು ಪಾಲನೆಯಷ್ಟೇ ಅಲ್ಲ, ಅದು ಜೀವ ರಕ್ಷಣೆಗೆ ಅತ್ಯಗತ್ಯವಾಗಿದೆ. ಪ್ರತಿಯೊಬ್ಬರೂ ಜವಾಬ್ದಾರಿಯಿಂದ ನಡೆದುಕೊಂಡು ಸುರಕ್ಷಿತ ಸಂಚಾರಕ್ಕೆ ಸಹಕರಿಸಬೇಕು" ಎಂದು ಡಿವೈಎಸ್ಪಿ ಜೆ.ಎಸ್. ನ್ಯಾಮಗೌಡರ್ ತಿಳಿಸಿದರು.

## ಕೈ ಕಳೆದುಕೊಂಡ ಬಾಲಕನಿಗೆ ಪರಿಹಾರ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಇತ್ತೀಚೆಗೆ ನಡೆದ ವಿದ್ಯುತ್ ಅವಘಡದಲ್ಲಿ ದುರದೃಷ್ಟವಶಾತ್ ತನ್ನ ಕೈ ಕಳೆದುಕೊಂಡ ಬಾಲಕನ ಕುಟುಂಬಕ್ಕೆ ಜೆಸ್ಕಾಂ ಸಂಸ್ಥೆಯು ಆಸರೆಯಾಗಿ ನಿಂತಿದೆ. ಜೆಸ್ಕಾಂ ಮುಖ್ಯ ಕಚೇರಿಯಲ್ಲಿ ಬಾಲಕ ಹಾಗೂ ಆತನ ಕುಟುಂಬದವರನ್ನು ಭೇಟಿಯಾಗಿ, ಸಂಸ್ಥೆಯ ವತಿಯಿಂದ ಜೆಸ್ಕಾಂ ಅಧ್ಯಕ್ಷ ಪ್ರವೀಣ್ ಪಾಟೀಲ್ ಹರವಾಳ್ ಅವರು 3.5 ಲಕ್ಷ ರೂಪಾಯಿಗಳ ಪರಿಹಾರ ಧನದ ಚೆಕ್‌ನ್ನು ಕುಟುಂಬಸ್ಥರಿಗೆ ಹಸ್ತಾಂತರಿಸಿದರು.



ಬಾಲಕನ ಭವಿಷ್ಯಕ್ಕೆ ಭಗವಂತನು ಶಕ್ತಿ ನೀಡಲಿ ಎಂದು ಪ್ರವೀಣ್ ಪಾಟೀಲ್ ಅವರು ಪ್ರಾರ್ಥಿಸಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಕೋಡಂಬಲ್‌ನಲ್ಲಿ ಡೆಂಗೆ ಸ್ಟ್ರೈಕ್, ಚರಂಡಿಯಲ್ಲಿ ಪ್ಲಾಸ್ಟಿಕ್..!

• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ತಾಲೂಕಿನ ಕೋಡಂಬಲ್ ಗ್ರಾಮ ಪಂಚಾಯಿತಿಯಲ್ಲಿ ಸ್ವಚ್ಛತೆಯ ಸಮಸ್ಯೆ ತೀವ್ರವಾಗಿದ್ದು, ಸೊಳ್ಳೆ, ಡೆಂಗೆ ಬಾಧೆ ತಡೆಯಲಾಗದು ಎಂದು ಸ್ಥಳೀಯರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕೋಡಂಬಲ್ ಗ್ರಾಮ ಜಿಲ್ಲಾ ಪಂಚಾಯತ್ ಕ್ಷೇತ್ರವಾಗಿದ್ದು, ಆದರೆ ಇಲ್ಲಿ ಮೂಲಭೂತ ಸೌಕರ್ಯಗಳೆ ಕಣ್ಮರೆಯಾಗಿವೆ. ಗ್ರಾಮದ ವಾರ್ಡ್ ಸಂಖ್ಯೆ4, 5ರಲ್ಲಿ ಚರಂಡಿಗಳು ತುಂಬಿದ್ದು, ಹಲವು ವರ್ಷಗಳೇ ಕಳೆದಿವೆ. ಪ್ಲಾಸ್ಟಿಕ್, ಇತರೆ ತ್ಯಾಜ್ಯವೆಲ್ಲವೂ ಚರಂಡಿಯಲ್ಲಿ ಸಂಗ್ರಹಗೊಂಡು, ನೀರು ಮುಂದಕ್ಕೆ ಹೋಗದಂಥ ಸ್ಥಿತಿ ನಿರ್ಮಾಣವಾಗಿದೆ.

**ಮನವಿಗೆ ಇಲ್ಲ ಕಿಮ್ಮತ್ತು:** ಚರಂಡಿಯ ಅಕ್ಕಪಕ್ಕದ ಮನೆಯಲ್ಲಿ ವಾಸವಿರುವ ಜನರು, ದುರ್ವಾಸನೆಯಿಂದ ಬೇಸತ್ತಿದ್ದಾರೆ. ಚರಂಡಿ ಸ್ವಚ್ಛತೆಗಾಗಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಮನವಿ ಮಾಡಿದರೂ ಕೂಡ ಅಧಿಕಾರಿಗಳಿಂದ ಮನವಿಗೆ ಸ್ಪಂದನೆ ಸಿಗುತ್ತಿಲ್ಲವೆಂದು ಗ್ರಾಮಸ್ಥರು ಬೇಸರ ವ್ಯಕ್ತಪಡಿಸುತ್ತಿದ್ದಾರೆ.

**ಎಲ್ಲೆಲ್ಲೂ ದುರ್ವಾಸನೆ:** ಮಳೆಗಾಲದಲ್ಲಿ ಜೋರು ಮಳೆಯಾದರೆ, ರಭಸವಾಗಿ ನೀರು ಹರಿದು ಚರಂಡಿ ತಾನಾಗಿಯೇ ಸ್ವಚ್ಛವಾಗುತ್ತದೆ. ಆದರೆ, ಬೇಸಿಗೆ ಕಾಲದಲ್ಲಿ ನೀರು ನಿಂತಲ್ಲೇ ನಿಲ್ಲುತ್ತದೆ. ಈ ನೀರು ದಿನ ಕಳೆದಂತೆ ಕಪ್ಪು ನೀರಾಗಿ ಮಾರ್ಪಟ್ಟು, ದುರ್ವಾಸನೆ ಬೀರುತ್ತಿದೆ. ಚರಂಡಿ ಅಕ್ಕ?ಪಕ್ಕದ ರಸ್ತೆಗಳಲ್ಲಿ ಜನರು ಮೂಗು ಮುಚ್ಚಿಕೊಂಡು ಓಡಾಡಬೇಕಾದ ಸ್ಥಿತಿಯಿದೆ.



ಪಂಚಾಯಿತಿ ಫಜೀತಿ





2025–26ನೇ ಸಾಲಿನಲ್ಲಿ ಒಟ್ಟು 5 ಲಕ್ಷ ರೂಪಾಯಿ ತೆರಿಗೆ ಸಂಗ್ರವಾಗಿದೆ. ಕಳೆದ ವರ್ಷದಿಂದ 15ನೇ ಹಣಕಾಸಿನ ಅನುದಾನ ಬಂದಿಲ್ಲ ತೆರಿಗೆ ಹಣದಲ್ಲೇ ಸಿಬ್ಬಂದಿಗಳ ವೇತನ ನೀಡಿ ಸಾಧ್ಯವಾದಷ್ಟು ಮೂಲಭೂತ ಸೌಕರ್ಯ ಒದಗಿಸಲಾಗುತ್ತಿದೆ. ಮೋಟಾರ್ ಕೆಟ್ಟು ಹೋಗಿವೆ. 2ದಿನದಲ್ಲಿ ಸರಿಪಡಿಸಿ ನೀರಿನ ಸಮಸ್ಯೆ ಬಗ್ಗೆ ಹರಿಸುವೆ.

–ಮಲ್ಲಪ್ಪ ಸೊನ್ನದ, ಅಭಿವೃದ್ಧಿ ಅಧಿಕಾರಿಗಳು ಕೋಡಂಬಲ್

ನಾನು ಈಗಾಗಲೇ ಹಲವು ಗ್ರಾ.ಪಂ. ಗಳಿಗೆ ಭೇಟಿ ನೀಡಿದ್ದೇನೆ, ಸ್ವಚ್ಛತೆ, ವಿದ್ಯುತ್ ದೀಪ, ಕುಡಿಯುವ ನೀರು ಸೇರಿದಂತೆ ಮೂಲಭೂತ ಸೌಕರ್ಯಗಳಿಗೆ ಪ್ರಥಮ ಆದ್ಯತೆ ನೀಡಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ. ಸಾರ್ವಜನಿಕರ ಯಾವುದೇ ದೂರುಗಳು ಬಂದರೆ ಕೂಡಲೇ ಸ್ಪಂದಿಸಿ ಆ ಸಮಸ್ಯೆಗಳು ಬಗ್ಗೆ ಹರಿಸಲು ಕಟ್ಟುನಿಟ್ಟಿನ ಸೂಚನೆ ನೀಡಿರುವೆ.

–ಲಿಂಗರಾಜ ಪಾಟೀಲ್, ಇಒ ಚಿಟಗುಪ್ಪ

### ಟ್ಯಾಂಕ್ ಇದೆ ಆದರೆ ನೀರೇ ಇರದು..!

ಜೆಜೆಎಂ ಯೋಜನೆಯಡ್ಡಿಯಲ್ಲಿ ಮನೆ ಮನೆಗೆ ನಳ ಕುಡಿಸಿದ್ದಾರೆ ಆದರೆ ಅವುಗಳಿಗೆ ಸಮರ್ಪಕವಾಗಿ ನೀರೇ ಬರಲ್ಲ. ಶುದ್ಧ ಕುಡಿಯುವ ನೀರಿನ ಘಟಕದ ಪಕ್ಕದಲ್ಲಿ ನೀರಿನ ಟ್ಯಾಂಕ್ ಅಳವಡಿಸಿದ್ದಾರೆ. ಆ ಟ್ಯಾಂಕ್ ನಲ್ಲಿ ನೀರೆ ಇರುವುದಿಲ್ಲ. ಅದು ಕೇವಲ ಹಂದಿಗಳ ತಾಣವಾಗಿ ಮಾರ್ಪಟ್ಟಿದೆ ಎನ್ನುತ್ತಾರೆ. ಇಲ್ಲಿ ಸಾರ್ವಜನಿಕ ಹಾಗೂ ವೈಯಕ್ತಿಕ ಶೌಚಾಲಯಗಳು ಇಲ್ಲದ ಕಾರಣ ಗ್ರಾಮಸ್ಥರಿಗೆ ಜಾಲಿ ಮರಗಳೇ ಮಲ ವಿಸರ್ಜನೆಯ ತಾಣವಾಗಿವೆ ಎನ್ನುತ್ತಾರೆ.




## ಪ್ರಧಾನಿ ಮೋದಿ 'ಅಘೋರಿ', ಔರಂಗಜೇಬನ ನಾಡಿನಿಂದ ಬಂದವರು: ಸಂಜಯ್ ರಾವತ್

# ಕೈಕೊಟ್ಟ ಮಳೆರಾಯ– ಆತಂಕದಲ್ಲಿ ರೈತರು, ನೆರವಿಗೆ ಸರ್ಕಾರ ಮುಂದೆ ಬರಲಿ

ಬಿದರ್ ಜಿಲ್ಲೆಯಲ್ಲಿ ಈ ಬಾರಿ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದೆ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಮುಂಗಾರು ಮಳೆಯ ಮೇಲೆ ಅವಲಂಬಿತವಾಗಿರುವ ಸಾವಿರಾರು ರೈತರು ಬಿತ್ತನೆ ಕಾರ್ಯ ಆರಂಭಿಸಿದ್ದರೂ, ಮಳೆಯ ಕೊರತೆಯಿಂದ ಬೆಳೆಗಳು ಒಣಗುವ ಭೀತಿಯಲ್ಲಿವೆ. ಮಳೆ ಕೈಕೊಟ್ಟ ಪರಿಣಾಮ ಕೃಷಿ ಚಟುವಟಿಕೆಗಳು ಕುಂಠಿತಗೊಂಡಿದ್ದು, ರೈತರಲ್ಲಿ ಆತಂಕ ಮನೆಮಾಡಿದೆ.

## ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**

ಬೀಜ, ಗೊಬ್ಬರ ಹಾಗೂ ಕೃಷಿ ಕಾರ್ಯಗಳಿಗೆ ಈಗಾಗಲೇ ಸಾಕಷ್ಟು ಹಣ ಖರ್ಚು ಮಾಡಿರುವ ರೈತರು ಉತ್ತಮ ಮಳೆಯ ನಿರೀಕ್ಷೆಯಲ್ಲಿದ್ದರು. ಆದರೆ ಮಳೆಯ ಅಭಾವದಿಂದ ಬೆಳೆಗಳ ಬೆಳವಣಿಗೆ ಕುಂಠಿತವಾಗಿದ್ದು, ಮುಂದಿನ ದಿನಗಳಲ್ಲಿ ಪರಿಸ್ಥಿತಿ ಮತ್ತಷ್ಟು ಗಂಭೀರವಾಗುವ ಸಾಧ್ಯತೆ ಇದೆ. ಕೃಷಿಯನ್ನೇ ಜೀವನಾಧಾರವಾಗಿಸಿಕೊಂಡಿರುವ ರೈತ ಕುಟುಂಬಗಳು ಆರ್ಥಿಕ ಸಂಕಷ್ಟ ಎದುರಿಸುತ್ತಿವೆ.

ಇಂತಹ ಸಂದರ್ಭದಲ್ಲಿ ರಾಜ್ಯ ಸರ್ಕಾರ ಹಾಗೂ ಜಿಲ್ಲಾಡಳಿತ ರೈತರ ನೆರವಿಗೆ ತಕ್ಷಣ ಧಾವಿಸಬೇಕು. ಬೆಳೆ ಹಾನಿಯ ಸಮೀಕ್ಷೆ ನಡೆಸಿ ಅಗತ್ಯ ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು. ಕೃಷಿ ಇಲಾಖೆಯ ಅಧಿಕಾರಿಗಳು ರೈತರೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಬೆಳೆ ಸಂರಕ್ಷಣೆ ಕುರಿತು ಸೂಕ್ತ ಮಾರ್ಗದರ್ಶನ ನೀಡಬೇಕು. ಅಗತ್ಯವಿದ್ದಲ್ಲಿ ಬಿತ್ತನೆ ಮರುಪ್ರಾರಂಭಕ್ಕೆ ವಿಶೇಷ ಪ್ಯಾಕೇಜ್ ಹಾಗೂ ಕೃಷಿ ಸಾಲ ಮರುಪಾವತಿಗೆ ವಿನಾಯಿತಿ ನೀಡುವ ಬಗ್ಗೆ ಸರ್ಕಾರ ಚಿಂತನೆ ನಡೆಸಬೇಕು.

ರೈತರು ದೇಶದ ಅನ್ನದಾತರು. ಅವರ ಸಂಕಷ್ಟದ ಸಮಯದಲ್ಲಿ ಸರ್ಕಾರ ಬೆಂಬಲವಾಗಿ ನಿಲ್ಲುವುದು ಅತ್ಯಗತ್ಯ. ಬಿದರ್ ಜಿಲ್ಲೆಯ ರೈತರ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ತಕ್ಷಣ ನೆರವು ನೀಡುವ ಮೂಲಕ ಅವರಲ್ಲಿ ಆತ್ಮವಿಶ್ವಾಸ ತುಂಬುವ ಕೆಲಸ ಸರ್ಕಾರ ಮಾಡಬೇಕಾಗಿದೆ. ರೈತರ ಬದುಕು ಉಳಿದರೆ ಮಾತ್ರ ಕೃಷಿ ಉಳಿಯುತ್ತದೆ, ಕೃಷಿ ಉಳಿದರೆ ದೇಶದ ಆರ್ಥಿಕತೆಯೂ ಸದೃಢವಾಗಿರುತ್ತದೆ.



# ವಿಶ್ವ ತಂಬಾಕು ರಹಿತ ದಿನಾಚರಣೆ ಕಾರ್ಯಕ್ರಮ




**ಬೀದರ್:** ಯುವಜನತೆ ಹಾಗೂ ವಿದ್ಯಾರ್ಥಿಗಳು ತಂಬಾಕು ವ್ಯಸನದಿಂದ ದೂರವಿದ್ದು ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ. ಧ್ಯಾನೇಶ್ವರ ನಿರಗುಡೆ ಕರೆ ನೀಡಿದರು.

ಜೂ.12ರಂದು ಜಿಲ್ಲಾ ಆರೋಗ್ಯಾಧಿಕಾರಿಗಳ ಕಚೇರಿ ಆವರಣದಿಂದ ವಿಶ್ವ ತಂಬಾಕು ರಹಿತ ದಿನಾಚರಣೆಯ ಅಂಗವಾಗಿ ಬೀದರ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೀದರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಹಾಗೂ ಬೋಧಕ ಆಸ್ಪತ್ರೆ. ದಂತ ಮಹಾವಿದ್ಯಾಲಯ ಎಸ್.ಬಿ. ಪಾಟೀಲ್, ಬೀದರ್ ನೌಬಾದ್ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಶ್ರೀ ಸಿದ್ದರಾಮೇಶ್ವರ, ಬೀದರ್ ವಸಂತ ನರ್ಸಿಂಗ್ ಕಾಲೇಜು ಹಾಗೂ ಸರ್ಕಾರಿ ಬ್ರಿಮ್ಸ್ ನರ್ಸಿಂಗ್ ಕಾಲೇಜು ಇವರ ಸಹಯೋಗದೊಂದಿಗೆ ಭವ್ಯವಾದ ತಂಬಾಕು ವಿರೋಧಿ ಜಾಗೃತಿ ಜಾಥಾಕ್ಕೆ ಅವರು ಹಸಿರು ನಿಶಾನೆ ತೋರಿಸಿ ಹಾಗೂ ರಿಬ್ಬನ್ ಕತ್ತರಿಸುವ ಮೂಲಕ ಚಾಲನೆ ನೀಡಿದರು ಅವರು ಮಾತನಾಡಿದರು.

ತಂಬಾಕು ಸೇವನೆಯು ಮಾನವನ ಆರೋಗ್ಯದ ಮೇಲೆ ಗಂಭೀರ ದುಷ್ಪರಿಣಾಮಗಳನ್ನು ಉಂಟುಮಾಡುವುದಲ್ಲದೆ, ಕ್ಯಾನ್ಸರ್, ಹೃದಯ ಸಂಬಂಧಿ ಕಾಯಿಲೆಗಳು, ಪಾರ್ಶ್ವವಾಯು, ಉಸಿರಾಟದ ಕಾಯಿಲೆಗಳು ಸೇರಿದಂತೆ ಅನೇಕ ಸಾಂಕ್ರಾಮಿಕವಲ್ಲದ ರೋಗಗಳಿಗೆ ಪ್ರಮುಖ ಕಾರಣವಾಗುತ್ತಿದೆ ಎಂದು ಹೇಳಿದರು. ಜಾಥಾದ ಸಂದರ್ಭದಲ್ಲಿ ವಿದ್ಯಾರ್ಥಿಗಳು ತಂಬಾಕು ಸೇವನೆಯ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸುವ ಫಲಕಗಳನ್ನು ಪ್ರದರ್ಶಿಸಿದರು. ಸಾರ್ವಜನಿಕರ ಗಮನ ಸೆಳೆಯುವ ಜಾಗೃತಿ ಘೋಷಣೆಗಳು, ಜಿಂಗಲ್ಸ್ ಹಾಗೂ ಸಂದೇಶಗಳ ಮೂಲಕ ತಂಬಾಕು ಸೇವನೆಯಿಂದ ಉಂಟಾಗುವ ಆರೋಗ್ಯ ಸಮಸ್ಯೆಗಳು ಮತ್ತು ಸಾಮಾಜಿಕ ಪರಿಣಾಮಗಳ ಬಗ್ಗೆ ಅರಿವು ಮೂಡಿಸಲಾಯಿತು ಎಂದು ತಿಳಿಸಿದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು ಡಿಎಸ್ಓ ತಂಬಾಕು ಸೇವನೆಯಿಂದ ಉಂಟಾಗುವ ಆರೋಗ್ಯ ಹಾನಿಗಳ ಕುರಿತು ವಿವರವಾಗಿ ಮಾಹಿತಿ ನೀಡಿ, ತಂಬಾಕು ನಿಯಂತ್ರಣ ಕಾರ್ಯಕ್ರಮಗಳ ಯಶಸ್ಸಿಗೆ ಸಾರ್ವಜನಿಕರ ಸಹಭಾಗಿತ್ವ ಅತ್ಯಗತ್ಯವಾಗಿದೆ, ತಂಬಾಕು ಮುಕ್ತ ಸಮಾಜ ನಿರ್ಮಾಣಕ್ಕಾಗಿ ಪ್ರತಿಯೊಬ್ಬರೂ ಸಂಕಲ್ಪ ಮಾಡಬೇಕು ಎಂದರು.

ವಿಶ್ವ ಆರೋಗ್ಯ ಸಂಸ್ಥೆಯ ಅಂದಾಜಿನ ಪ್ರಕಾರ ತಂಬಾಕು ಸೇವನೆಯು ವಿಶ್ವದಾದ್ಯಂತ ಲಕ್ಷಾಂತರ ಜನರ ಸಾವಿಗೆ ಕಾರಣವಾಗುತ್ತಿದ್ದು, ಇದರ ಬಳಕೆಯನ್ನು ತಡೆಗಟ್ಟುವುದು ಸಾರ್ವಜನಿಕ ಆರೋಗ್ಯದ ಪ್ರಮುಖ ಆದ್ಯತೆಯಾಗಿದೆ. ತಂಬಾಕು ಸೇವನೆಯಿಂದ ಬಾಯಿ ಕ್ಯಾನ್ಸರ್, ಶ್ವಾಸಕೋಶ ಕ್ಯಾನ್ಸರ್, ಹೃದಯಾಘಾತ ಹಾಗೂ ಇತರ ಗಂಭೀರ ಕಾಯಿಲೆಗಳ ಅಪಾಯ ಹೆಚ್ಚಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಬೀದರ ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಜಿಲ್ಲಾ ಕಾರ್ಯಕ್ರಮ ಅಧಿಕಾರಿ ಡಾ.ಶಂಕರೆಪ್ಪಾ ಬೋಮ್ಮಾ, ವಿವಿಧ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳು, ಅಧ್ಯಾಪಕರು, ಆರೋಗ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಕ್ರಿಯವಾಗಿ ಭಾಗವಹಿಸಿದರು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ಕಾನೂನು ಅರಿವು ಮತ್ತು ಪರಿಸರ ಜಾಗೃತಿ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಜಿಲ್ಲಾ ಕಾರಾಗೃಹ ಬೀದರ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಜಿಲ್ಲಾ ವಕೀಲರ ಸಂಘದ ಸಂಯುಕ್ತ ಆಶ್ರಯದಲ್ಲಿ ಶನಿವಾರ ಕಾರಾಗೃಹದಲ್ಲಿರುವ ವಿಚಾರಣಾಧೀನ ಮತ್ತು ಶಿಕ್ಷಾಬಂದಿಗಳಿಗಾಗಿ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮ ಆಯೋಜಿಸಲಾಯಿತು.

ಕಾರ್ಯಕ್ರಮವನ್ನು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ರಾಘವೇಂದ್ರ ಉಪಾಧ್ಯೆ ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಅವರು, ಕಾರಾಗೃಹವು ಕೇವಲ ಶಿಕ್ಷೆ ನೀಡುವ ಸ್ಥಳವಲ್ಲ, ವ್ಯಕ್ತಿಯ ಸುಧಾರಣೆ, ಪುನರ್ವಸತಿ ಮತ್ತು ಸಮಾಜದ ಮುಖ್ಯವಾಹಿನಿಗೆ ಮರಳಿ ತರುವ ಕೇಂದ್ರವಾಗಿದೆ ಎಂದು ಹೇಳಿದರು. ಉಚಿತ ಕಾನೂನು ನೆರವು ಪ್ರತಿಯೊಬ್ಬರ ಕಾನೂನುಬದ್ಧ ಹಕ್ಕಾಗಿದ್ದು, ವಿಚಾರಣಾಧೀನ ಹಾಗೂ ಶಿಕ್ಷಾಬಂದಿಗಳಿಗೆ ಜಾಮೀನು, ಮೇಲ್ಮನವಿ ಮತ್ತು ಪ್ರಕರಣಗಳ ಪ್ರಗತಿ ಕುರಿತು ಮಾಹಿತಿ ನೀಡಲು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ




ಸದಾ ಸಿದ್ಧವಾಗಿದೆ ಎಂದು ತಿಳಿಸಿದರು.

ಜಿಲ್ಲಾ ಕಾರಾಗೃಹ ಅಧೀಕ್ಷಕ ದತ್ತಾತ್ರಿ ಆರ್. ಮೇದಾ ಮಾತನಾಡಿ, ಬಂಧಿಗಳಿಗೆ ಕಾನೂನು ಅರಿವು, ಆರೋಗ್ಯ, ಊಟ, ವಸತಿ ಹಾಗೂ ಇತರೆ ಸಮಸ್ಯೆಗಳ ಕುರಿತು ನೆರವು ನೀಡಲು ಕಾರಾಗೃಹ ಆಡಳಿತ ಸದಾ ಸಿದ್ಧವಿದೆ ಎಂದು ಹೇಳಿದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಸಂಜಯ ಮಠಪತಿ ಮಾತನಾಡಿ, ಅನೇಕರು ಕೋಪ, ಅಜ್ಞಾನ ಅಥವಾ ಪ್ರತಿಕೂಲ ಪರಿಸ್ಥಿತಿಗಳಿಂದ ಕಾರಾಗೃಹಕ್ಕೆ ಬರುತ್ತಾರೆ. ಇಲ್ಲಿಂದ ಹೊರಹೋಗುವಾಗ ಉತ್ತಮ ನಾಗರಿಕರಾಗಿ ಸಮಾಜದಲ್ಲಿ ಬದುಕುವ ಸಂಕಲ್ಪ ಮಾಡಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಂಗವಾಗಿ ಪರಿಸರ ಜಾಗೃತಿ ಹಾಗೂ ಮಾಲಿನ್ಯ ನಿಯಂತ್ರಣ ಅಭಿಯಾನದಡಿ ಕಾರಾಗೃಹ ಆವರಣದಲ್ಲಿ ಸಸಿ ನೆಡುವ ಕಾರ್ಯ ನಡೆಯಿತು. ವಿಶ್ವ ಪರಿಸರ ದಿನಾಚರಣೆಯ ನೆನಪಿಗಾಗಿ ನೆಟ್ಟ ಗಿಡಗಳನ್ನು ಹೆಮ್ಮರಗಳಾಗಿ ಬೆಳೆಸುವಂತೆ ಹಾಗೂ ಇರುವ ಮರಗಳನ್ನು ಸಂರಕ್ಷಿಸುವಂತೆ ಕರೆ ನೀಡಲಾಯಿತು.

ಜೈಲರ್ ವಿಜಯಲಕ್ಷ್ಮಿ ಮಾತನಾಡಿ, ಕಾರಾಗೃಹದಲ್ಲಿ ಸುಂದರ ತೋಟ ನಿರ್ಮಿಸಲಾಗಿದ್ದು, ವಿವಿಧ ಅಲಂಕಾರಿಕ ಸಸಿಗಳನ್ನು ಸಂರಕ್ಷಿಸಲಾಗುತ್ತಿದೆ ಎಂದು ತಿಳಿಸಿದರು. ಪರಿಸರ ಜಾಗೃತಿ ಮತ್ತು ಕಾನೂನು ಅರಿವು ಕುರಿತು ವಕೀಲರಾದ ಸಂಜೀವಕುಮಾರ ಹಾಗೂ ವಿದ್ಯಾಸಾಗರ ಉಪನ್ಯಾಸ ನೀಡಿದರು. ಶಿಕ್ಷಕ ಸುರೇಶ ಟಾಳೆ ಕಾರ್ಯಕ್ರಮ ನಿರೂಪಿಸಿ, ಶಿವಪ್ಪ ಬಿ. ಅಂಗಡಿ ವಂದನಾರ್ಪಣೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ವೈದ್ಯಾಧಿಕಾರಿ ಡಾ. ಶರಣಯ್ಯ ಸ್ವಾಮಿ, ಜೈಲರ್ ವಿಜಯಲಕ್ಷ್ಮಿ, ಸಹಾಯಕ ಜೈಲರ್ ಎಂ.ಎಲ್. ಕಂಬಾರ, ಆನಂದ ಮಿರಗಿ, ಕಾರಾಗೃಹ ಸಿಬ್ಬಂದಿ ಹಾಗೂ ಅನೇಕ ಬಂಧಿಗಳು ಭಾಗವಹಿಸಿದ್ದರು.


# ರಹೀಮ್ ಖಾನ್‌ಗೆ ಸಚಿವ ಸ್ಥಾನ ನೀಡುವಂತೆ ಕಾರ್ಯಕರ್ತರ ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ರಾಜ್ಯ ಸಚಿವ ಸಂಪುಟ ವಿಸ್ತರಣೆಯ ಚರ್ಚೆಗಳು ನಡೆಯುತ್ತಿರುವ ಹಿನ್ನೆಲೆಯಲ್ಲಿ ಬೀದರ್ ಜಿಲ್ಲೆಯ ಹಿರಿಯ ಕಾಂಗ್ರೆಸ್ ನಾಯಕ ಹಾಗೂ ನಾಲ್ಕು ಬಾರಿ ಶಾಸಕರಾಗಿರುವ ರಹೀಮ್ ಖಾನ್ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಮತ್ತು ಅಭಿಮಾನಿಗಳು ಒತ್ತಾಯಿಸಿದ್ದಾರೆ.

ನಗರದಲ್ಲಿ ಶುಕ್ರವಾರ ಸಂಜೆ ನಡೆದ ಕಾರ್ಯಕ್ರಮದಲ್ಲಿ ರಹೀಮ್ ಖಾನ್ ಅವರ ಭಾವಚಿತ್ರಗಳನ್ನು ಪ್ರದರ್ಶಿಸಿ, ಘೋಷಣೆಗಳನ್ನು ಕೂಗಿದ ಕಾಂಗ್ರೆಸ್ ಕಾರ್ಯಕರ್ತರು ಸಚಿವ ಸಂಪುಟದಲ್ಲಿ ಅವರಿಗೆ ಸೂಕ್ತ ಸ್ಥಾನಮಾನ ನೀಡುವಂತೆ ಆಗ್ರಹಿಸಿದರು. ಕಾರ್ಯಕ್ರಮದಲ್ಲಿ ಪಕ್ಷದ ವಿವಿಧ ಘಟಕಗಳ ಪದಾಧಿಕಾರಿಗಳು, ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿ ಬೆಂಬಲ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಸಾಮಾಜಿಕ ಜಾಲತಾಣ ವಿಭಾಗದ ಜಿಲ್ಲಾ ಉಪಾಧ್ಯಕ್ಷ ಜೈರಾಜ್ ಮರಖಲ್ ಮಾತನಾಡಿ, ಬೀದರ್





ಜಿಲ್ಲೆಯ ರಾಜಕೀಯ ಹಾಗೂ ಅಭಿವೃದ್ಧಿ ಕ್ಷೇತ್ರದಲ್ಲಿ ರಹೀಮ್ ಖಾನ್ ಅವರ ಸೇವೆ ಗಮನಾರ್ಹವಾಗಿದೆ ಎಂದು ಹೇಳಿದರು. ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಅವರು ಜಿಲ್ಲೆಯ ಜನರ ಸಮಸ್ಯೆಗಳನ್ನು ಸಮರ್ಥವಾಗಿ ಸರ್ಕಾರದ ಗಮನಕ್ಕೆ ತಂದು ಪರಿಹರಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ ಎಂದು ತಿಳಿಸಿದರು.

ಹಿಂದಿನ ಸಿದ್ದರಾಮಯ್ಯ ಸರ್ಕಾರದಲ್ಲಿ ಪೌರಾಡಳಿತ ಸಚಿವರಾಗಿ ಕಾರ್ಯನಿರ್ವಹಿಸಿದ್ದ ರಹೀಮ್ ಖಾನ್ ಅವರು ರಾಜ್ಯದ ನಗರಾಭಿವೃದ್ಧಿ ಕ್ಷೇತ್ರದಲ್ಲಿ ಹಲವು ಯೋಜನೆಗಳನ್ನು ಜಾರಿಗೊಳಿಸಿದ್ದರು. ಜೊತೆಗೆ ಬೀದರ್ ಜಿಲ್ಲೆಯಲ್ಲಿ ರಸ್ತೆ, ಕುಡಿಯುವ ನೀರು, ನಗರ ಮೂಲಸೌಕರ್ಯ ಹಾಗೂ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ವಿಶೇಷ ಒತ್ತು ನೀಡಿದ್ದರು ಎಂದು ಜೈರಾಜ್ ಮರಖಲ್ ಹೇಳಿದರು.

ಕಲ್ಯಾಣ ಕರ್ನಾಟಕ ಭಾಗದ ಪ್ರಮುಖ ಅಲ್ಪಸಂಖ್ಯಾತ ನಾಯಕರಾಗಿರುವ ರಹೀಮ್ ಖಾನ್ ಅವರಿಗೆ ಸಚಿವ ಸ್ಥಾನ ನೀಡುವುದರಿಂದ ಈ ಭಾಗದ ಜನರ ಆಶೋತ್ತರಗಳಿಗೆ ಸ್ಪಂದಿಸಿದಂತಾಗುತ್ತದೆ. ಅಲ್ಲದೆ ಹಿಂದುಳಿದ ಜಿಲ್ಲೆಗಳ ಅಭಿವೃದ್ಧಿಗೆ ಮತ್ತಷ್ಟು ವೇಗ ಸಿಗಲಿದೆ ಎಂದು ಅವರು ಅಭಿಪ್ರಾಯಪಟ್ಟರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿರುವ ಸಂದರ್ಭದಲ್ಲಿ ಹಿರಿಯ ನಾಯಕರು, ಅನುಭವಿಗಳಿಗೂ ಸೂಕ್ತ ಅವಕಾಶ ಕಲ್ಪಿಸಬೇಕಾಗಿದೆ. ಆ ನಿಟ್ಟಿನಲ್ಲಿ ರಹೀಮ್ ಖಾನ್ ಅವರಿಗೆ ಸಚಿವ ಸ್ಥಾನ ನೀಡುವಂತೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಮಾಡಿದರು.

ಬೀದರ್ ಜಿಲ್ಲೆಗೆ ಸಚಿವ ಸಂಪುಟದಲ್ಲಿ ಪ್ರಾತಿನಿಧ್ಯ ದೊರಕುವುದು ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಸಹಕಾರಿಯಾಗಲಿದೆ ಎಂದು ಕಾರ್ಯಕರ್ತರು ಅಭಿಪ್ರಾಯ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಹಲವಾರು ಮುಖಂಡರು, ಕಾರ್ಯಕರ್ತರು ಹಾಗೂ ರಹೀಮ್ ಖಾನ್ ಅವರ ಅಭಿಮಾನಿಗಳು ಉಪಸ್ಥಿತರಿದ್ದರು.

# ಜಿಲ್ಲಾ ಪಂಚಾಯತ್ ಕ್ಷೇತ್ರಗಳಿಗೆ ಉಸ್ತುವಾರಿಗಳ ನೇಮಕ ಶೀಘ್ರ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಮುಂಬರುವ ಗ್ರಾಮ ಪಂಚಾಯತ್, ತಾಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್ ಚುನಾವಣೆಗಳನ್ನು ಗಮನದಲ್ಲಿಟ್ಟುಕೊಂಡು ಆಲ್ ಇಂಡಿಯಾ ಬಹುಜನ ಸಮಾಜ ಪಕ್ಷ (ಎಐಬಿಎಸ್‌ಪಿ) ಸಂಘಟನೆ ಬಲಪಡಿಸುವ ಕಾರ್ಯಕ್ಕೆ ವೇಗ ನೀಡಿದೆ. ಪಕ್ಷದ ಕಾರ್ಯಕರ್ತರು ಗ್ರಾಮ ಮಟ್ಟದಿಂದ ಬೂತ್ ಮಟ್ಟದವರೆಗೆ ಸಕ್ರಿಯವಾಗಿ ಕಾರ್ಯನಿರ್ವಹಿಸಿ ಪಕ್ಷದ ತತ್ವ–ಸಿದ್ಧಾಂತಗಳನ್ನು ಜನರಿಗೆ ತಲುಪಿಸಬೇಕು ಎಂದು ಪಕ್ಷದ ರಾಜ್ಯ ಉಪಾಧ್ಯಕ್ಷ ದತ್ತು ಸೂರ್ಯವಂಶಿ ಕರೆ ನೀಡಿದರು.

ನಗರದ ಮಯೂರ ಬರಿದ್‌ಶಾಹಿ ಹೋಟೆಲ್‌ನಲ್ಲಿ ಆಲ್ ಇಂಡಿಯಾ ಬಹುಜನ ಸಮಾಜ ಪಕ್ಷದ ಜಿಲ್ಲಾಧ್ಯಕ್ಷ ಯೋಹಾನ ಡಿಸೋಜ ಚಿಲ್ಲರ್ಗಿ ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕರ್ತರ ಸಭೆಯಲ್ಲಿ ಅವರು ಮಾತನಾಡಿದರು.



ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗಳು ಪಕ್ಷದ ಬಲವನ್ನು ಪ್ರದರ್ಶಿಸಲು ಉತ್ತಮ ಅವಕಾಶವಾಗಿದ್ದು, ಪ್ರತಿಯೊಬ್ಬ ಕಾರ್ಯಕರ್ತರೂ ಚುನಾವಣಾ ಸಿದ್ಧತೆಯಲ್ಲಿ ತೊಡಗಿಕೊಳ್ಳಬೇಕು ಎಂದು ತಿಳಿಸಿದರು. ಜಿಲ್ಲೆಯ ಪ್ರತಿಯೊಂದು ಜಿಲ್ಲಾ ಪಂಚಾಯತ್ ಕ್ಷೇತ್ರಕ್ಕೂ ಒಂದು ವಾರದೊಳಗೆ ಉಸ್ತುವಾರಿಗಳನ್ನು ನೇಮಕ ಮಾಡಲಾಗುವುದು. ನೇಮಕಗೊಂಡ ಉಸ್ತುವಾರಿಗಳು ತಮ್ಮ ಕ್ಷೇತ್ರಗಳಲ್ಲಿ ಪಕ್ಷದ ಸಂಘಟನೆಯನ್ನು ಬಲಪಡಿಸುವುದು, ಹೊಸ ಸದಸ್ಯರ ಸೇರ್ಪಡೆ ಹಾಗೂ ಮತದಾರರೊಂದಿಗೆ ನಿರಂತರ ಸಂಪರ್ಕ ಸಾಧಿಸುವ ಕಾರ್ಯವನ್ನು ಕೈಗೊಳ್ಳಲಿದ್ದಾರೆ ಎಂದು ಹೇಳಿದರು.

ಪಕ್ಷದ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರಕಾಶ ಕೋಟೆ ಮಾತನಾಡಿ, ಬಹುಜನ ಸಮಾಜದ ಹಕ್ಕುಗಳು ಮತ್ತು ಅಭಿವೃದ್ಧಿಗಾಗಿ ಪಕ್ಷ ಹೋರಾಟ ನಡೆಸುತ್ತಿದ್ದು, ಗ್ರಾಮೀಣ ಮಟ್ಟದಲ್ಲಿ ಪಕ್ಷದ ಸಂಘಟನೆ ವಿಸ್ತರಣೆ ಅಗತ್ಯವಾಗಿದೆ ಎಂದು ತಿಳಿಸಿದರು. ರಾಜ್ಯ ಕಾರ್ಯದರ್ಶಿ ಜಿ. ಆಸ್ಕರ್ ಅವರು ಕಾರ್ಯಕರ್ತರು ಪಕ್ಷದ ಕಾರ್ಯಕ್ರಮಗಳನ್ನು ಜನರಿಗೆ ತಲುಪಿಸುವ ಮೂಲಕ ಪಕ್ಷದ ನೆಲೆಯನ್ನು ಮತ್ತಷ್ಟು ಗಟ್ಟಿಗೊಳಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಸಂಯೋಜಕ ಪಾಸ್ಟರ್ ಶಾದ್ರಕ್, ಜಿಲ್ಲಾ ಉಪಾಧ್ಯಕ್ಷ ಗುಣವಂತ ಶಿಂದೆ, ಜಿಲ್ಲಾ ಕಾರ್ಯದರ್ಶಿ ಸುಭಾಷ್, ಬೀದರ್ ತಾಲೂಕು ಉಪಾಧ್ಯಕ್ಷ ಸಾಲೋಮನ್ ರಾಯ್ ಮಂಗಲ್ಪೆಟ್ ಹಾಗೂ ಶಂಕರ ಅಂಕಾರೆ ಸೇರಿದಂತೆ ಹಲವಾರು ಮುಖಂಡರು ಮತ್ತು ಕಾರ್ಯಕರ್ತರು ಭಾಗವಹಿಸಿದ್ದರು.

ಸಭೆಯಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣಾ ತಂತ್ರಗಾರಿಕೆ, ಪಕ್ಷ ಸಂಘಟನೆ ವಿಸ್ತರಣೆ, ಸದಸ್ಯತ್ವ ಅಭಿಯಾನ ಹಾಗೂ ಬೂತ್ ಮಟ್ಟದ ಕಾರ್ಯಚಟುವಟಿಕೆಗಳ ಕುರಿತು ಚರ್ಚೆ ನಡೆಸಲಾಯಿತು.

# ಎಸ್‌ಐಆರ್ ವಿರೋಧಿ ಜನಜಾಗೃತಿ ಜಾಥಾಕ್ಕೆ ಚಾಲನೆ





• ಮಲ್ಲಮ್ಮ ನುಡಿ ವಾರ್ತೆ ಬೀದರ್

ರಾಜ್ಯದಲ್ಲಿ ಎಸ್‌ಐಆರ್ ಜಾರಿಯನ್ನು ವಿರೋಧಿಸಿ ರಾಜ್ಯದ ಐದು ಸ್ಥಳಗಳಿಂದ ಜನಜಾಗೃತಿ ಜಾಥಾ ಆಯೋಜಿಸಿದ್ದು, ಕಲ್ಯಾಣ ಕರ್ನಾಟಕ ಭಾಗದಿಂದ ಹೊರಡಲಿರುವ ಎಸ್‌ಐಆರ್ ವಿರೋಧಿ ಜನಜಾಗೃತಿ ಜಾಥಾಕ್ಕೆ ಶನಿವಾರ ಬೀದರ್ ನಗರದ ಅಂಬೇಡ್ಕರ್ ವೃತ್ತದಲ್ಲಿ ಚಾಲನೆ ದೊರೆಯಿತು.

ಎಸ್‌ಐಆರ್ ವಿರೋಧಿ ಕರ್ನಾಟಕ ಹಾಗೂ ಎದ್ದೇಳು ಕರ್ನಾಟಕ, ಜಾತ್ಯಾತೀತ ಪಕ್ಷಗಳು ಹಾಗೂ ಪ್ರಗತಿಪರ ಸಂಘಟನೆಗಳ ನೇತ್ರತ್ವದಲ್ಲಿ ನಡೆಯಲಿರುವ ಜಾಥಾವು ಜೂ.13ರಂದು ಆರಂಭವಾಗಿ ಕಲ್ಯಾಣ ಕರ್ನಾಟಕದ ಎಲ್ಲ ಜಿಲ್ಲೆಗಳ ಮುಖಾಂತರ ಜೂ.20ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಸಮಾವೇಶಗೊಳ್ಳಲಿದೆ

ಎದ್ದೇಳು ಕರ್ನಾಟಕದ ಮುಖಂಡ ಜೆ.ಎಂ.ವೀರಸಂಗಯ್ಯ ಅವರು ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿ, "ದೇಶದೆಲ್ಲೆಡೆ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಜಾರಿ ಮಾಡುವ ಮೂಲಕ ಲಕ್ಷಾಂತರ ಅರ್ಹ ಮತದಾರರ ಸಾಂವಿಧಾನಿಕವಾದ ಮತದಾನದ ಹಕ್ಕು ಕಸಿದುಕೊಳ್ಳಲಾಗುತ್ತಿದೆ. ಇದೀಗ ಕರ್ನಾಟಕದಲ್ಲಿ ಎಸ್‌ಐಆರ್ ಜಾರಿಯಾಗಿದ್ದು, ಅರ್ಹ ಮತದಾರರನ್ನು ಯಾವುದೇ ಕಾರಣಕ್ಕೂ ಕೈಬಿಡಬಾರದು" ಎಂದು ಆಗ್ರಹಿಸಿದರು.

ಚುನಾವಣಾ ಆಯೋಗವು ದೇಶದೆಲ್ಲೆಡೆ ನಡೆಸಿದಂತೆ ಅವೈಜ್ಞಾನಿಕ ಲಾಜಿಕಲ್ ಡಿಸ್ಕ್ರಿಪ್ಷನ್ ಮಾನದಂಡವನ್ನು ಕರ್ನಾಟಕದಲ್ಲಿ ಅನುಸರಿಸಬಾರದು. ಕರ್ನಾಟಕ ಸರ್ಕಾರವು ಗ್ರಾಮ ಸಭೆಗಳನ್ನು ನಡೆಸಿ ಯಾರೆಲ್ಲ ಅರ್ಹ ಮತದಾರರ ಬಳಿ ದಾಖಲೆಗಳಿಲ್ಲವೋ ಅಂತಹ ವ್ಯಕ್ತಿಗಳಿಗೆ ಕೂಡಲೇ ಅಗತ್ಯ ದಾಖಲೆಗಳನ್ನು ಮಾಡಿಕೊಡಬೇಕು. ಸಣ್ಣ ಮಾಹಿತಿ ಇಲ್ಲದಿರುವುದಕ್ಕೆ ಮತದಾರರ ಪಟ್ಟಿಯಿಂದ ಹೊರಗಿಡುವ ಷಡ್ಯಂತ್ರ ನಡೆಯಬಾರದು" ಎಂದು ಆಗ್ರಹಿಸಿದರು.

ಬೀದರ್ ಬಸವ ಮಂಟಪದ ಸತ್ಯದೇವಿ, ಸಿಪಿಐ ಮುಖಂಡ ಬಾಬುರಾವ್ ಹೊನ್ನಾ, ದಸಂಸ ಮುಖಂಡ ಮಾರುತಿ ಬೌದ್ಧೆ, ಕೆಪಿಸಿಸಿ ಮಹಿಳಾ ಘಟಕ ರಾಜ್ಯ ಉಪಾಧ್ಯಕ್ಷೆ ರಾಜಶ್ರೀ ಸ್ವಾಮಿ, ಆಮ್ ಆದ್ಮಿ ಪಾರ್ಟಿ ಜಿಲ್ಲಾಧ್ಯಕ್ಷ ಸಿದ್ದಪ್ಪ ಫುಲಾರಿ ಇತರರು ಮಾತನಾಡಿ, "ಮತದಾನವೆಂಬುದು ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಕೊಟ್ಟಿರುವ ಸಾಂವಿಧಾನಿಕ ಹಕ್ಕು, ಈ ಹಕ್ಕನ್ನು ಯಾರಿಗೂ ಕಸಿಯಲು ಬಿಡುವುದಿಲ್ಲ. ಎಸ್‌ಐಆರ್ ಎಂಬುದು ಭಾರತದ ಪ್ರಜಾಪ್ರಭುತ್ವ ಹಾಗೂ ಜನವಿರೋಧಿಯಾಗಿದೆ. ಹಾಗಾಗಿ ಎಸ್‌ಐಆರ್ ರದ್ದಾಗಬೇಕು. ಎಸ್‌ಐಆರ್ ಹೆಸರಿನಲ್ಲಿ ಅರ್ಹ ಮತದಾರರ ಮತದಾರರ ಪಟ್ಟಿಯಿಂದ ಕೈಬಿಡಬಾರದು" ಎಂದು ಎಚ್ಚರಿಸಿದರು.

ಎಸ್‌ಐಆರ್ ಪ್ರಕ್ರಿಯೆಯನ್ನು ಅಸಂವಿಧಾನಿಕ, ಅವೈಜ್ಞಾನಿಕ, ದೋಷಪೂರಿತ ಹಾಗೂ ದುರುದ್ದೇಶಪೂರಿತ ಕ್ರಮವೆಂದು ಆರೋಪಿಸಿದರು. ಮತದಾರರ ಪಟ್ಟಿಯ ಪರಿಷ್ಕರಣೆ ಹೆಸರಿನಲ್ಲಿ ಬಡವರು, ಕಾರ್ಮಿಕರು, ಗ್ರಾಮೀಣ ಜನರು, ಅಲ್ಪಸಂಖ್ಯಾತರು, ಲೈಂಗಿಕ ಅಲ್ಪಸಂಖ್ಯಾತರು ಹಾಗೂ ಹಿಂದುಳಿದ ವರ್ಗಗಳ ಮತದಾನದ ಹಕ್ಕುಗಳನ್ನು ದುರ್ಬಲಗೊಳಿಸುವ ಪ್ರಯತ್ನ ನಡೆಯುತ್ತಿದೆ" ಎಂದು ಆತಂಕ ವ್ಯಕ್ತಪಡಿಸಿದರು.

ಎದ್ದೇಳು ಕರ್ನಾಟಕದ ಸಂಯೋಜಕರಾದ ಓಂಪ್ರಕಾಶ್ ರೊಟ್ಟೆ, ಜಗದೀಶ್ವರ ಬಿರಾದರ್, ನಿಜಾಮುದ್ದೀನ್, ಲಕ್ಷ್ಮಣ್ ಮಂಡಲಗೇರಾ, ದುರ್ಗೇಶ, ಚಂದ್ರು ತರಹುಣಸೆ ಸೇರಿದಂತೆ ಎಸ್‌ಐಆರ್ ವಿರೋಧಿ ಸಮಿತಿಯ ವಿಠಲದಾಸ ಪ್ಯಾಗೆ, ಶ್ರೀಕಾಂತ್ ಸ್ವಾಮಿ, ಮಹೇಶ್ ಗೊರನಾಳಕರ್, ಮಲ್ಲಿಕಾರ್ಜುನ್ ಸ್ವಾಮಿ, ಕಾಶಿನಾಥ್ ಚೆಲವಾ, ಬಸವರಾಜ ಅಷ್ಟೂರೆ, ಸಂತೋಷ ಗುದಗೆ, ಶಾಂತಮ್ಮ ಮೂಲಗೆ, ಉಮಾಕಾಂತ ವಿಳಾಸಪುರೆ, ಶರಣು ಫುಲೆ, ಮುಹಮ್ಮದ್ ಆರಿಫೋದ್ದೀನ್, ಸೈಯದ್ ಇಬ್ರಾಹಿಂ, ಫಿರಾಜತ್ ಅಲಿ, ಅಸ್ಮಾ ಸುಲ್ತಾನ್, ಸಬೀಯಾ ಖಾನ್, ಮುಹಮ್ಮದ್ ಜಫರುಲ್ಲಾ ಖಾನ್, ಸೇರಿದಂತೆ ಆರ್‌ಪಿಐ, ಸಿಪಿಐ, ಕರ್ನಾಟಕ ರಾಜ್ಯ ರೈತ ಸಂಘ, ಸಂಯುಕ್ತ ಕಿಸಾನ್ ಮೋರ್ಚಾ, ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ, ವಿಶ್ವಕ್ರಾಂತಿ ದಿವ್ಯಪೀಠ, ಜಮಾಅತ್ ಇಸ್ಲಾಮಿ ಹಿಂದ್, ಲೈಂಗಿಕ ಅಲ್ಪಸಂಖ್ಯಾತರ ಹಕ್ಕುಗಳ ಸಂಘ, ಅಖಿಲ ಭಾರತ ಲಿಂಗಾಯತ ಮಹಾಸಭೆ ಸೇರಿದಂತೆ ವಿವಿಧ ಸಂಘ–ಸಂಸ್ಥೆಗಳ ಪ್ರಮುಖರು ಜಾಥಾದಲ್ಲಿ ಭಾಗವಹಿಸಿದ್ದರು.

# ಕಾಳಗಿ: ಮಾದರ ಮಹಾಸಭಾಗೆ ನೇಮಕ



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಕಾಳಗಿ ತಾಲೂಕಿನ ಮಾದರ ಮಹಾಸಭಾ ದ ಕಾಳಗಿ ತಾಲೂಕು ಅಧ್ಯಕ್ಷರನ್ನಾಗಿ ರೇವಣಸಿದ್ದಪ್ಪ ಕಟ್ಟಿಮನಿ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ರವಿ ಸಿಂಗೆ ಅರಣಕಲ್ ಅವರನ್ನು ನೇಮಕ ಮಾಡಲಾಗಿದೆ ಎಂದು ಜಿಲ್ಲಾಧ್ಯಕ್ಷರಾದ ಗೋಪಾಲರಾವ ಕಟ್ಟಿಮನಿ ಅವರು ಆದೇಶ ಪತ್ರದಲ್ಲಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು,ಮುಂದಿನ ದಿನಗಳಲ್ಲಿ ಜಿಲ್ಲಾ ಮಟ್ಟದಲ್ಲಿ, ತಾಲೂಕು ಮಟ್ಟದಲ್ಲಿ ಬೃಹತ್ ಸದಸ್ಯತ್ವ ನೋಂದಣಿ ಅಭಿಯಾನ ನಡೆಸಲಾಗುವುದು.ತಾಲೂಕು ಅಧ್ಯಕ್ಷರು,ಪ್ರಧಾನ ಕಾರ್ಯದರ್ಶಿಗಳು ಇತರೆ ಪದಾಧಿಕಾರಿಗಳನ್ನು ನೇಮಕಾತಿ ಮಾಡಿ ಇತರೆ ಪದಾಧಿಕಾರಿಗಳನ್ನು ಆಯ್ಕೆ ಮಾಡಬೇಕು ಎಂದು ಅವರು ತಿಳಿಸಿದರು.ತಾಲೂಕು ಪದಾಧಿಕಾರಿಗಳು ಜಿಲ್ಲಾದ್ಯಂತ ಸಂಚರಿಸಿ ಸದಸ್ಯತ್ವ ನೋಂದಣಿ ಮಾಡಿಸಬೇಕು.ಕರ್ನಾಟಕ ರಾಜ್ಯದಲ್ಲಿ ಮಾದಾರ ಸಮುದಾಯ ಜನರ ಸರ್ವತೋಮುಖ ಅಭಿವೃದ್ಧಿಗಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ ಇರುವ ಸೌಲಭ್ಯಗಳನ್ನು ಸಮುದಾಯದ ಜನರಿಗೆ ತಲುಪಿಸಲು ಪ್ರಾಮಾಣಿಕವಾಗಿ ಶ್ರಮಿಸಬೇಕು ಎಂದು ಅವರು ಅವರು ಹೇಳಿದರು.

# ಹಾರವಾಡ ಸಮುದ್ರದಲ್ಲಿ ಮೀನುಗಾರಿಕೆಗೆ ತೆರಳಿದ ವ್ಯಕ್ತಿ ಸಾವು



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಸಮುದ್ರದಲ್ಲಿ ನಾಡದೋಣಿಯ ಮೂಲಕ ಮೀನುಗಾರಿಕೆಗೆ ತೆರಳಿದ ಹಾರವಾಡದ ಗಾಬೀತವಾಡ ನಿವಾಸಿ ಸಹದೇವ ಮೇಥಾ ಕಡಲ ಅಲೆಗೆ ಸಿಲುಕಿ ದೋಣಿ ಮುಗುಚಿದ ಪರಿಣಾಮ ಸಾವನ್ನಪ್ಪಿದ ಘಟನೆ ಶನಿವಾರ ನಡೆದಿದೆ.

ಆಳ ಮೀನುಗಾರಿಕೆಗೆ ಎರಡು ತಿಂಗಳು ನಿಷೇಧ ಇರುವುದರಿಂದ ಸಾಂಪ್ರದಾಯಿಕ ಮೀನುಗಾರಿಕೆಗೆ ಸಿಗುವ ಮೀನಿಗೆ ಅಪಾರ ಬೇಡಿಕೆಯಿದೆ. ಹೀಗಾಗಿ ಕೆಲವು ಮೀನುಗಾರರು ನಾಡದೋಣಿಯ ಮೂಲಕ ಸಮುದ್ರದ ಸಮೀಪ ಮೀನುಗಾರಿಕೆ ನಡೆಸುತ್ತಾರೆ. ಹಾಗೇ ಸಹದೇವ ಮೇಥಾ ಅವರು ಕೂಡ ಮೀನುಗಾರಿಕೆಗೆ ತೆರಳಿದ್ದರು. ಆದರೆ ಅವರ ದೋಣಿ ನೀರಿನ ಅಲೆಗೆ ಮುಗುಚಿತ್ತಿದ್ದಂತೆ ಅಕ್ಕಪಕ್ಕದಲ್ಲಿದ್ದ ದೋಣಿಯವರು ರಕ್ಷಣೆ ಮಾಡಿ ದಡಕ್ಕೆ ತರುವಷ್ಟರಲ್ಲಿ ಪ್ರಾಣಪಕ್ಷಿ ಹಾರಿಹೋಗಿತ್ತು. ಈ ಕುರಿತು ಅಂಕೋಲಾ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

# ವಿಧಾನ ಪರಿಷತ್‌ನ ಕಾರ್ಯದರ್ಶಿ ಜ್ಯೋತಿಗೆ ಸನ್ಮಾನ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ವಿಧಾನ ಪರಿಷತ್‌ನ ನೂತನ ಕಾರ್ಯದರ್ಶಿಯಾಗಿ ಅಧಿಕಾರ ವಹಿಸಿ ಕೊಂಡ ಶ್ರೀಮತಿ ಜ್ಯೋತಿ ಓಂಕಾರ ಮುಚಳಂಬ ಅವರನ್ನು ಅಭಿನಂದಿಸಲಾಯಿತು.ಬೆಂಗಳೂರಿನ ವಿಧಾನಸೌಧದ ಕಚೇರಿಯಲ್ಲಿ ಈಚೆಗೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನಿಕಟಪೂರ್ವ ಅಧ್ಯಕ್ಷ ಶಶಿಧರ ಕೋಸಂಬೆ ಅವರು ಭೇಟಿ ನೀಡಿ ನೂತನ ಕಾರ್ಯದರ್ಶಿಗಳನ್ನು ಸನ್ಮಾನಿಸಿ, ಅಭಿನಂದನೆ ಸಲ್ಲಿಸಿದರು.ನೂತನ ಕಾರ್ಯದರ್ಶಿ ಜ್ಯೋತಿ ಓಂಕಾರ ಅವರು ಮೂಲತಃ ಗಡಿ ಜಿಲ್ಲೆ ಬೀದರ್‌ನ ಬಸವಕಲ್ಯಾಣ ತಾಲೂಕಿನ ಮುಚಳಂಬ ಗ್ರಾಮದ ನಿವಾಸಿ ಆಗಿದ್ದಾರೆ. ಕಳೆದ 25-30 ವರ್ಷಗಳಿಂದ ವಿಧಾನ ಪರಿಷತ್‌ನ ಕಚೇರಿಯಲ್ಲಿ ವಿವಿಧ ಹುದ್ದೆಗಳನ್ನು ನಿಭಾಯಿಸಿದ್ದಾರೆ.ಈ ಸಂದರ್ಭದಲ್ಲಿ ಯುವ ಮುಖಂಡ ಪವನ ಬಿರಾದಾರ್ ಇದ್ದರು.

# ಮಳೆಗಾಗಿ ಎಲ್ಹೇರಿ ಗ್ರಾಮದಲ್ಲಿ ಸಪ್ತ ಭಜನೆ



• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ತಾಲ್ಲೂಕಿನ ಎಲ್ಹೇರಿ ಗ್ರಾಮದಲ್ಲಿ ಮಳೆಗಾಲ ಆರಂಭವಾಗಿದ್ದರೂ ಸಮರ್ಪಕ ಮಳೆಯಾಗದ ಹಿನ್ನೆಲೆಯಲ್ಲಿ ಗ್ರಾಮದ ಸಮಸ್ತ ಗ್ರಾಮಸ್ಥರು ಒಗ್ಗೂಡಿ ಮಳೆರಾಯನ ಕೃಪೆಗಾಗಿ ಗ್ರಾಮದ ಶ್ರೀ ಆಂಜನೇಯ ದೇವಸ್ಥಾನದಲ್ಲಿ ಏಳು ದಿನಗಳ ಕಾಲ ಸಪ್ತ ಭಜನೆ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ.ಈ ಭಾಗದಲ್ಲಿ ಇನ್ನೂ ಬಹುತೇಕ ರೈತರು ಬಿತ್ತನೆ ಕಾರ್ಯ ಆರಂಭಿಸದೇ ಮಳೆಯ ನಿರೀಕ್ಷೆಯಲ್ಲಿದ್ದು ಸಪ್ತ ಭಜನೆ ಹಾಗೂ ದೇವರ ನಾಮಸ್ಮರಣೆಯನ್ನು ಉತ್ತಮ ಮಳೆಯಾಗಿ ರೈತರಿಗೆ ಅನುಕೂಲವಾಗಲೆಂದು ವಿಶೇಷ ಪ್ರಾರ್ಥನೆ ಸಲ್ಲಿಸುತ್ತಿದ್ದಾರೆ.ಗ್ರಾಮದ ಹಿರಿಯರು, ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮಕ್ಕೆ ಭಕ್ತಿ ಮತ್ತು ಶ್ರದ್ಧೆಯಿಂದ ಸಹಕರಿಸುತ್ತಿದ್ದಾರೆ. ಮಳೆರಾಯನ ಕೃಪೆಯಿಂದ ಉತ್ತಮ ಮಳೆಯಾಗಿ ಕೃಷಿ ಚಟುವಟಿಕೆಗಳು ಆರಂಭವಾಗಲಿ ಎಂಬುದು ಗ್ರಾಮಸ್ಥರ ಆಶಯವಾಗಿದೆ.


# ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಕರ್ತವ್ಯ : ರವಿ ನಾಯಕ



• ಮಲ್ಲಮ್ಮ ನುಡಿ ವಾರ್ತೆಗೋಕರ್ಣ

ಪರಿಸರಸಂರಕ್ಷಣೆಪ್ರತಿಯೊಬ್ಬರಜವಾಬ್ದಾರಿಯಾಗಿದ್ದು, ಪ್ರಕೃತಿಯನ್ನು ಉಳಿಸುವ ಮೂಲಕವೇ ಮುಂದಿನ ಪೀಳಿಗೆಗೆ ಉತ್ತಮ ಭವಿಷ್ಯವನ್ನು ನೀಡಲು ಸಾಧ್ಯ ಎಂದು ನಿವೃತ್ತ ಡಿ.ಎಫ್.ಓ. ರವಿ ಎಚ್. ನಾಯಕ ಹನೇಹಳ್ಳಿ ಹೇಳಿದರು.ಹಿರೇಗುತ್ತಿಯ ಸೆಕೆಂಡರಿ ಹೈಸ್ಕೂಲ್‌ನಲ್ಲಿ ಸವಿ ಫೌಂಡೇಶನ್ ಮೂಡಬಿದಿರೆ, ಆಶ್ರಯ ಫೌಂಡೇಶನ್ ಹಿರೇಗುತ್ತಿ, ಶ್ರೀ ಬ್ರಹ್ಮ ಜಟಗ ಯುವಕ ಸಂಘ ಹಿರೇಗುತ್ತಿ, ಎಫ್.ಬಿ.ಎ ಬೆಂಗಳೂರು-ಚೆನ್ನೈ ಹಾಗೂ ಪ್ರಕೃತಿ ಇಕೋ ಕ್ಲಬ್ ಸೆಕೆಂಡರಿ ಹೈಸ್ಕೂಲ್ ಇವರ ಆಶ್ರಯದಲ್ಲಿ ಆಯೋಜಿಸಲಾದ 'ಪರಿಸರ ಜಾಗೃತಿ ಮತ್ತು ಅರಿವು' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಮಹಾತ್ಮಗಾಂಧಿ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಹೊನ್ನಪ್ಪ ಎನ್. ನಾಯಕ ಮಾತನಾಡಿ, ಪರಿಸರ ಸಂರಕ್ಷಣೆ ಶಾಲಾ ಹಂತದಿಂದಲೇ ವಿದ್ಯಾರ್ಥಿಗಳಲ್ಲಿ ಬೆಳೆಸಬೇಕಾದ ಮೌಲ್ಯವಾಗಿದೆ. ಪರಿಸರದ ಬಗ್ಗೆ ಕಾಳಜಿ ಮತ್ತು ಜವಾಬ್ದಾರಿಯ ಮನೋಭಾವವನ್ನು ಮಕ್ಕಳಲ್ಲಿ ಮೂಡಿಸುವುದು ಶಿಕ್ಷಣದ ಪ್ರಮುಖ ಉದ್ದೇಶವಾಗಬೇಕು ಎಂದರು.ಸವಿ ಫೌಂಡೇಶನ್‌ನ ಸಂದೀಪ ನಾಯಕ, ಆಶ್ರಯ ಫೌಂಡೇಶನ್ ಅಧ್ಯಕ್ಷ ರಾಜೀವ ಗಾಂವಕರ, ಕುಮಟಾ ಡಿಪ್ಲೊಮಾ ಕಾಲೇಜಿನ ನಿವೃತ್ತ ಪ್ರಿನ್ಸಿಪಾಲ್ ರತನ್ ಗಾಂವಕರ, ನಿವೃತ್ತ ಉಪನ್ಯಾಸಕ ಮಹೇಶ ನಾಯಕ, ನಿವೃತ್ತ ಶಿಕ್ಷಕರಾದ ಎನ್. ಟಿ. ನಾಯಕ, ಎನ್. ಆರ್. ಗಜು ಮಾತನಾಡಿದರು. ಈ ಸಂದರ್ಭದಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ 90ಕ್ಕಿಂತ ಹೆಚ್ಚು ಅಂಕಗಳನ್ನು ಗಳಿಸಿ ಸಾಧನೆ ಮಾಡಿದ ವಿದ್ಯಾರ್ಥಿಗಳಾದ ಸೃಜನ್ ಗೌಡ, ಕಾರ್ತಿಕ ಗೌಡ, ಭೂಮಿಕಾ ಹರಿಕಂತ್ರ ಹಾಗೂ ಭವ್ಯ ಗೌಡ, ಮಾನ್ವಿ ಮೂಡಂಗಿ ಅವರನ್ನು ಸವಿ ಫೌಂಡೇಶನ್ ವತಿಯಿಂದ ಸನ್ಮಾನಿಸಿ ಬಹುಮಾನ ವಿತರಿಸಲಾಯಿತು. ಅದೇ ರೀತಿ ಪ್ರತಿಭಾವಂತ ವಿದ್ಯಾರ್ಥಿ ಪ್ರೀತಮ್ ಪಾಲನಕರ್ ಅವರಿಗೆ ಶಿಕ್ಷಣ ಪ್ರೋತ್ಸಾಹಕ್ಕಾಗಿ ಎನ್. ಟಿ. ನಾಯಕ ಅವರು 5,000 ಪ್ರೋತ್ಸಾಹಧನ ನೀಡಿ ಅಭಿನಂದಿಸಿದರು.ಆಡಳಿತ ಮಂಡಳಿಯ ಉಪಾಧ್ಯಕ್ಷ ಶ್ರೀಕಾಂತ ಎನ್ ನಾಯಕ, ಉದ್ದಂಡ ಗಾಂವಕರ, ಯುವಕ ಸಂಘದ ಅಧ್ಯಕ್ಷ ಆಕಾಶ ನಾಯಕ ಉಪಾಧ್ಯಕ್ಷ ಪ್ರೀತಮ್ ಗಾಂವಕರ, ಹರೀಶ ನಾಯಕ, ಸುರೇಂದ್ರ ನಾಯಕ, ಸುಭಾಶ ನಾಯಕ. ಹೊನ್ನಪ್ಪ ನಾಯಕ ಮೊಗಟಾ, ಗಣಪತಿ ನಾಯಕ ಶ್ರೀನಿವಾಸ ಪಾಲನಕರ್ ಉಪಸ್ಥಿತರಿದ್ದರು. ಶಿವಾನಿ ಗುನಗಾ ಪ್ರಾರ್ಥಿಸಿದರು. ಶಿಕ್ಷಕಿ ಜಾನಕಿ ಗೊಂಡ ಸ್ವಾಗತಿಸಿದರು. ಎನ್.ರಾಮು ಹಿರೇಗುತ್ತಿ ನಿರೂಪಿಸಿದರು. ಮಹಾದೇವ ಗೌಡ ವಂದಿಸಿದರು.

# ಎಸ್‌ಐಆರ್ ಅಭಿಯಾನ ಯಶಸ್ವಿಗೊಳಿಸಿ: ಶಾಸಕ ಪ್ರಭು ಚವ್ಹಾಣ



ಮಲ್ಲಮ್ಮ ನುಡಿ ವಾರ್ತೆ ಔರಾದ

ಕೇಂದ್ರ ಸರ್ಕಾರ ಹಮ್ಮಿಕೊಂಡಿರುವ ಎಸ್‌ಐಆರ್ (ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ) ಅಭಿಯಾನವನ್ನು ಯಶಸ್ವಿಗೊಳಿಸಲು ಕಾರ್ಯಕರ್ತರು ಸಹಕರಿಸಬೇಕೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ. ಚವ್ಹಾಣ ಅವರು ತಿಳಿಸಿದರು.ಭಾರತೀಯ ಜನತಾ ಪಾರ್ಟಿ ಔರಾದ(ಬಿ) ಮಂಡಲದ ವತಿಯಿಂದ ಜೂನ್ 12ರಂದು ಪಟ್ಟಣದ ಖಾಸಗಿ ಕಲ್ಯಾಣ ಮಂಟಪದಲ್ಲಿ ಆಯೋಜಿಸಲಾಗಿದ್ದ ಕಾರ್ಯಕರ್ತರ ಸಮಾವೇಶದಲ್ಲಿ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದರು. ಎಸ್‌ಐಆರ್ ಕೇವಲ ಸಾಮಾನ್ಯ ಯೋಜನೆಯಲ್ಲ. ಪ್ರಜಾಪ್ರಭುತ್ವವನ್ನು ಮತ್ತಷ್ಟು ಬಲಪಡಿಸುವ ಅಭಿಯಾನವಾಗಿದೆ. ಮತದಾರರ ಪಟ್ಟಿಯ ಶುದ್ದೀಕರಣ, ಅರ್ಹ ಮತದಾರರ ಹೆಸರು ಸೇರ್ಪಡೆ, ನಕಲಿ ಹಾಗೂ ಅನರ್ಹ ಹೆಸರುಗಳ ತೆರವು ಮತ್ತು ಮತದಾರರ ಪಟ್ಟಿಯನ್ನು ಪಾರದರ್ಶಕ ಹಾಗೂ ವಿಶ್ವಾಸಾರ್ಹವಾಗಿಸುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದರು.

ಸಶಕ್ತ ಭಾರತ ನಿರ್ಮಾಣದ ಸಂಕಲ್ಪದೊಂದಿಗೆ ಸೇವೆ ಸಲ್ಲಿಸುತ್ತಿರುವ ಪ್ರಧಾನಿ ನರೇಂದ್ರ ಮೋದಿಯವರು ದೇಶದ ರಾಜಕೀಯ ಇತಹಾಸದಲ್ಲಿ ಅತಿ ಹೆಚ್ಚು ಅವಧಿಯ ಪ್ರಧಾನಿಯಾದ ದಾಖಲೆಯನ್ನು ಮುರಿದಿದ್ದಾರೆ. ಅವರ 12 ವರ್ಷಗಳ ಸೇವೆಯಲ್ಲಿ ಭಾರತ ಸಾಕಷ್ಟು ಸುಧಾರಣೆ ಕಂಡಿದೆ. ಆಪರೇಷನ್ ಸಿಂಧೂರ್ ಕಾರ್ಯಾಚರಣೆ ನಡೆಸಿ ಉಗ್ರರನ್ನು ಮಟ್ಟ ಹಾಕಿದ್ದಾರೆ. ಪದೇ ಪದೇ ಜಗಳಕ್ಕೆ ಕಾಲು ಕೆರೆದುಕೊಂಡು ಬರುತ್ತಿದ್ದ ಪಾಕಿಸ್ತಾನಕ್ಕೆ ಸರ್ಜಿಕಲ್ ಸ್ಟ್ರೈಕ್ ಮೂಲಕ ಪಾಠ ಕಲಿಸಿದ್ದಾರೆ. ಜಮ್ಮು ಕಾಶ್ಮೀರಕ್ಕೆ ಸಂಬಂಧಿಸಿದಂತೆ ಆರ್ಟಿಕಲ್ 370 ರದ್ದುಗೊಳಿಸಿ ಐತಿಹಾಸಿಕ ಕೆಲಸ ಮಾಡಿದ್ದಾರೆ. ಡಿಜಿಟಲ್ ಇಂಡಿಂ-ಯಾ, ಮೇಕ್ ಇನ್ ಇಂಡಿಯಾ, ಜನಧನ್ ಯೋಜನೆಯಂತಹ ಅನೇಕ ಯೋಜನೆಗಳನ್ನು ಜಾರಿಗೊಳಿಸಿದ್ದಾರೆ. ದೇಶ ಕಂಡ ಅಪರೂಪದ ಪ್ರಧಾನಿಯಾಗಿ ಹೊರಹೊಮ್ಮಿದ್ದಾರೆ ಎಂದರು.

ಪ್ರಜಾಪ್ರಭುತ್ವವನ್ನು ಬಲಪಡಿಸಬೇಕೆಂಬ ಉದ್ದೇಶದಿಂದ ಮತದಾರರ ಪಟ್ಟಿಯ ಶುದ್ದೀಕರಣಕ್ಕೆ ಮುಂದಾಗಿದ್ದು, ದೇಶದ ಅಭಿವೃದ್ಧಿಯಲ್ಲಿ ಇದೊಂದು ಮಹತ್ವದ ಹೆಜ್ಜೆಯಾಗಿದ್ದು,ತಮ್ಮ ಗ್ರಾಮದಲ್ಲಿ ಮತದಾರರ ಪಟ್ಟಿಯಲ್ಲಿ ಆಗಿರುವ ದೋಷಗಳನ್ನು ಸರಿಪಡಿಸಲು ಅವಕಾಶ ನೀಡಿದ್ದಾರೆ. ಇದರ ಸದುಪಯೋಗ ಪಡೆಯಬೇಕು ಎಂದು ಹೇಳಿದರು.

ಬಿಜೆಪಿ ಜಿಲ್ಲಾಧ್ಯಕ್ಷರಾದ ಸೋಮನಾಥ ಪಾಟೀಲ ಮಾತನಾಡಿ, ಎಸ್‌ಐಆರ್ ಅಭಿಯಾನವನ್ನು ಯಶಸ್ವಿಗೊಳಿಸುವ ನಿಟ್ಟಿನಲ್ಲಿ ಪ್ರತಿಯೊಬ್ಬ ಕಾರ್ಯಕರ್ತರೂ ಜವಾಬ್ದಾರಿಯಿಂದ ಕೆಲಸ ಮಾಡಬೇಕು. ಗ್ರಾಮಸ್ಥರಲ್ಲಿ ಯಾರಾದರೂ ತೀರಿ-ಕೊಂಡರೆ ಅನೇಕ ವರ್ಷಗಳ ವರೆಗೆ ಅವರ ಹೆಸರು ರದ್ದುಪಡಿಸುವುದೇ ಇಲ್ಲ. ಅನೇಕರ ಹೆಸರುಗಳು ತಪ್ಪು ತಪ್ಪಾಗಿ ಮುದ್ರಣಗೊಂಡಿರುತ್ತವೆ. ಕೆಲವರು ತಮ್ಮ ವಾಸಸ್ಥಳವನ್ನು ಬದಲಾಯಿಸಿರುತ್ತಾರೆ. ಇವುಗಳನ್ನು ಸರಿಪಡಿಸಲು ಪ್ರಾಧಾನಿಯವರು ಉತ್ತಮ ಅವಕಾಶ ನೀಡಿದ್ದಾರೆ ಎಂದರು. ಮುಖಂಡರಾದ ಬಾಬುರಾವ ಕಾರಬಾರಿ, ಸಂಜಯ ನಿಷ್ಕಿನ್, ಶಿವರಾಜ ಗಂದಗೆ ಅವರು ಮಾತನಾಡಿ ಪಕ್ಷವನ್ನು ಸಂಘಟಿಸಲು ಕಾರ್ಯಕರ್ತರ ಪಾತ್ರದ ಬಗ್ಗೆ ತಿಳಿಸಿದರು.

ಬಿಜೆಪಿ ಮಂಡಲ ಅಧ್ಯಕ್ಷ ರಾಮಶೆಟ್ಟಿ ಪನ್ನಾಳೆ, ಮುಖಂಡರಾದ ಅರಹಂತ ಸಾವಳೆ, ಸುಭಾಷ ಬಿರಾದಾರ, ರಾಜಶೇಖರ ನಾಗಮೂರ್ತಿ, ವಸಂತ ಬಿರಾದಾರ, ಧೊಂಡಿಬಾ ನರೋಟೆ, ಶಿವಾಜಿರಾವ ಪಾಟೀಲ ಮುಂಗನಾಳ, ಸುರೇಶ ಭೋಸ್ಲೆ, ಸತೀಷ ಪಾಟೀಲ, ಪ್ರವೀಣ್ ಕಾರಬಾರಿ, ಖಂಡೋಬಾ ಕಂಗಟೆ, ಪ್ರತೀಕ ಚವ್ಹಾಣ, ವಿಜಯಲಕ್ಷ್ಮಿ ಕೌಟಗೆ, ನಿಲೇಷ ರಕ್ಷಾಳೆ, ಬಸವರಾಜ ಪಾಟೀಲ, ರಮೇಶ ಉಪಾಸೆ, ಖಾಜಾಮಿಯ್ಯಾ, ಝಾಕೀರ ಹುಸೇನ್, ರಾಜಕುಮಾರ ಶೆಳ್ಕೆ, ಮಾರುತಿರೆಡ್ಡಿ ಪಟ್ನೆ, ಅಶೋಕ ಅಲ್ಮಾಜೆ, ಬಸವರಾಜ ಹಳ್ಳೆ, ದಯಾನಂದ ಘೂಳೆ, ಸಂತೋಷ ಪೋಕಲವಾರ, ಸಂಜು ವಡೆಯಾರ, ಚೇತನ ಕಪ್ಪಿಕೇರೆ, ಯಾದು ಮೇತ್ರೆ, ಪ್ರಕಾಶ ಜೀರ್ಗೆ, ಬಂಟಿ ರಾಂಪೂರೆ, ರವೀಂದ್ರ ರೆಡ್ಡಿ, ಸಚಿನ ಬಿರಾದಾರ, ಸಂಜು ಮುರ್ಕೆ, ಉದಯ ಸೋಲಾಪೂರೆ, ರಾಜಕುಮಾರ ಸೋರಾಳೆ, ಪ್ರದೀಪ ಪವಾರ, ಧನಾಜಿ ರಾಠೋಡ ಸೇರಿದಂತೆ ಪಕ್ಷದ ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಅಭಿಮಾನಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ವಿವಿಧ ಗ್ರಾಮಗಳಿಂದ ಆಗಮಿಸಿದ್ದ ಸುಮಾರು 5 ಸಾವಿರಕ್ಕೂ ಹೆಚ್ಚು ಕಾರ್ಯಕರ್ತರು ಭಾಗವಹಿಸಿದರು.

# ವಿಧಾನಸಭಾ ಚುನಾವಣೆಯಲ್ಲಿ ಕುಲದ್ರೋಹಿಗಳಿಗೆ ತಕ್ಕಪಾಠ : ಡಾ. ಪ್ರಣವಾನಂದ ಸ್ವಾಮೀಜಿ




• ಮಲ್ಲಮ್ಮ ನುಡಿ ವಾರ್ತೆಗೋಕರ್ಣ

ರಾಷ್ಟ್ರೀಯಈಡಿಗಮಹಾಮಂಡಳಿಯರಾಜ್ಯಮಟ್ಟದ5 ನೇ ವಾರ್ಷಿಕೋತ್ಸವ,ಚಿಂತನಾಶಿಬಿರ ಪುಣ್ಯಾಶ್ರಮದಲ್ಲಿ ಎರಡು ದಿನ ನಡೆಯಿತು.ಸಭೆಯಲ್ಲಿ ಮುಂಬರುವ ವಿಧಾನಸಭಾ ಚುನಾವಣೆಯನ್ನು ಗುರಿಯಾಗಿಸಿ ಸಮಾಜದ ಸಂಘನೆಗೆ ಒತ್ತು ನೀಡುವುದು, ಸಾಗರ ಶಾಸಕ ಬೇಳೂರು ಗೋಪಾಲಕೃಷ್ಣ ಅವರಿಗೆ ಸಚಿವಸ್ಥಾನ ನೀಡುವುದು ಹಾಗೂ ಸಂಘದ ನೂತನ ಪದಾಧಿಕಾರಿಗಳ ಆಯ್ಕೆಯ ಕುರಿತು ಸಭೆಯಲ್ಲಿ ಸಮಗ್ರ ಚರ್ಚೆ ನಡೆಯಿತು. ರಾಷ್ಟ್ರೀಯ ಈಡಿಗ ಮಹಾಮಂಡಳಿಯ ಡಾ. ಶ್ರೀ ಪ್ರಣವಾನಂದ ಸ್ವಾಮೀಜಿ ಅವರು ಮಾತನಾಡಿ, ರಾಜ್ಯದಲ್ಲಿ ಈಡಿಗ ಮಹಾಮಂಡಳಿಯನ್ನು ಬಲಪಡಿಸುವ ನಿಟ್ಟಿನಲ್ಲಿ ಸಂಘಟಕರು ಹೆಚ್ಚಿನ ಒತ್ತು ನೀಡಬೇಕು. ಸಮಾಜದ ಮತದಿಂದ ಆಯ್ಕೆಯಾದ ಜನಪ್ರತಿನಿಧಿಗಳು ನಂತರ ಸಮಾಜವನ್ನು ಮರೆಯುತ್ತಾರೆ. ಅಂತವರು ಕೂಡ ಚುನಾವಣೆಯಲ್ಲಿ ಪಾಠ ಕಲಿಸಬೇಕು. ಅಗತ್ಯಬಿದ್ದರೆ ಚುನಾವಣೆಗೂ ನಮ್ಮವರನ್ನು ನಿಲ್ಲಿಸಲಾಗುವುದು ಎಂದರು. ಜನಪ್ರತಿನಿಧಿಗಳು ವಿಧಾನಸಭೆಯಲ್ಲಿ ಸಮಾಜದ ಪರವಾಗಿ ಧ್ವನಿ ಎತ್ತುತ್ತಿಲ್ಲ. ಧ್ವನಿ ಎತ್ತುವ ಶಾಸಕ ಬೇಳೂರು ಗೋಪಾಲಕೃಷ್ಣ ಅವರಿಗೆ ಸಚಿವಸ್ಥಾನ ನೀಡಿದರೆ ಸಮಾಜಕ್ಕೆ ಅನುಕೂಲವಾಗಲಿದೆ. ಈಡಿಗರ ಸಮಗ್ರ ಈಡಿಗರ ಅಭಿವೃದ್ಧಿಗಾಗಿ ಮುಂದಿನ ದಿನದಲ್ಲಿ ಮಹತ್ವದ ಚಿಂತನೆಯನ್ನು ಮಾಡಬೇಕಿದೆ. ನೂತನ ಮುಖ್ಯಮಂತ್ರಿಗಳನ್ನು ಸಂಪರ್ಕಿಸಿ ನಾರಾಯ-ಣಗುರು ನಿಗಮಕ್ಕೆ ಅನುದಾನ ಬಿಡುಗಡೆಗೆ ಪ್ರಯತ್ನಿಸಲಾಗುವುದು. ಸಮಾಜದ ಗೆದ್ದ ಜನಪ್ರತಿನಿಧಿಗಳು ನಮ್ಮವರನ್ನು ಕಡೆಗಣಿಸಿದರೆ ಅಂತವರನ್ನು ಕಿತ್ತೊಗೆಯಲು ಪ್ರತಿಯೊಬ್ಬರು ಶಪತ ಮಾಡಬೇಕು ಎಂದರು. ರಾಷ್ಟ್ರೀಯ ಈಡಿಗ ಮಹಾಮಂಡಳಿಯ ರಾಜ್ಯಾಧ್ಯಕ್ಷರಾಗಿ ತಿಪ್ಪೇಶ ಪುನರಾಯ್ಕೆಯಾದರು. ಈ ಸಂದರ್ಭದಲ್ಲಿ ಪ್ರಮುಖರಾದ ಲಕ್ಷ್ಮೀನರಸಯ್ಯ, ಮಂಚೇಗೌಡ, ದೇವರಾಜ ನಾಯ್ಕ, ಜಗದೀಶ ಇಳಿಗೇರ, ಪರಶುರಾಮ ಇಳಿಗೇರ, ದಾಮೋದರಜಿ. ನಾಯ್ಕ, ಶ್ರೀಧರ ನಾಯ್ಕ, ರಾಜೇಶ ನಾಯ್ಕ, ಸತೀಶ ನಾಯ್ಕ, ಮಂಜುಳಾ ನಾಯ್ಕ, ತೇಜಸ್ವಿ ನಾಯ್ಕ, ವರ್ಧನ ನಾಯ್ಕ, ನಾಗರಾಜ ಮಂಜಗುಣಿ ಸೇರಿದಂತೆ ರಾಜ್ಯದ ವಿವಿಧ ಭಾಗಗಳಿಂದ ಹಲವುಗಣ್ಯರು ಆಗಮಿಸಿದ್ದರು.

**ವಸಂತ ನಾಯ್ಕರಿಗೆ ಕಿರುಕುಳ ನೀಡಿದರೆ ಪ್ರತಿಭಟನೆ**

ಸಿದ್ದಾಪುರದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವಸಂತ ನಾಯ್ಕ ಅವರ ವಿರುದ್ಧ ಬಿಜೆಪಿಯ ಒಬ್ಬ ವ್ಯಕ್ತಿ ಸುಳ್ಳು ಸುಳ್ಳು ಆಪಾದನೆ ಮಾಡುತ್ತಿದ್ದಾನೆ. ಹಾಗೇ ಡಿವೈಎಸ್‌ಪಿ ಗೀತಾ ಪಾಟೀಲ ಕೂಡ ಬಿಜೆಪಿ ವ್ಯಕ್ತಿಯ ತಾಳಕ್ಕೆ ಕುಣಿಯುತ್ತಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷ ವಿಜೇಂದ್ರ ಅವರಿಗೂ ಕೂಡ ನಾನು ಎಚ್ಚರಿಕೆಯನ್ನು ನೀಡುತ್ತಿದ್ದೇನೆ. ಜೊತೆಗೆ ಅಗತ್ಯ ಬಿದ್ದರೆ ಡಿವೈಎಸ್‌ಪಿ ಕಚೇರಿ ಎದುರು ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು.

– ಡಾ. ಪ್ರಣವಾನಂದ ಸ್ವಾಮೀಜಿ

ರಾಷ್ಟ್ರೀಯ ಈಡಿಗ ಮಹಾಮಂಡಳಿ

# ಶಾಲಾ ಸಂಸತ್ ಚುನಾವಣೆ



• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ನಗರ ಪ್ರತಿಷ್ಠಿತ HPBS ಶಾಲೆಯಲ್ಲಿ ಶಾಲಾ ಸಂಸತ್ ಚುನಾವಣೆ ನಡೆಸಲಾಯಿತು. ಶಾಲೆಯ ಹಿರಿಯ ಮುಖ್ಯ ಶಿಕ್ಷಕರಾದ ಶ್ರೀ ಸುರೇಶರವರ ಮಾರ್ಗದರ್ಶನದಲ್ಲಿ ನಡೆದ ಈ ಚುನಾವಣೆಯಲ್ಲಿ ಐದರಿಂದ ಏಳನೇ ತರಗತಿವರೆಗೆ ಒಟ್ಟು 15 ವಿದ್ಯಾರ್ಥಿಗಳು ಚುನಾವಣೆಯಲ್ಲಿ ಸ್ಪರ್ಧಿಸಿದ್ದು 148 ವಿದ್ಯಾರ್ಥಿಗಳು ಮತ ಚಲಾಯಿಸಿದರು. ಎಂದು ಶಾಲೆಯ ಮುಖ್ಯ ಶಿಕ್ಷಕರ ಸುರೇಶ್ ತಿಳಿಸಿದ್ದಾರೆ ಇದರಲ್ಲಿ 3 ಮತಗಳು ಕುಲಗೆಟ್ಟ ಮತಗಳಾಗಿದ್ದವು. ಒಟ್ಟು 23 ಮತ ಪಡೆದು ಅತಿ ಹೆಚ್ಚು ಮತಗಳನ್ನು ಗಳಿಸಿದ 7ನೇ ತರಗತಿ ವಿದ್ಯಾರ್ಥಿನಿ ಸುಮೇರ ಬಾನು ಮುಖ್ಯಮಂತ್ರಿ ಆಗಿ, 20 ಮತಗಳನ್ನು ಪಡೆದ ಆರನೆಯ ತರಗತಿ ವಿದ್ಯಾರ್ಥಿನಿ ರಿಶಿತ ಉಪಮುಖ್ಯಮಂತ್ರಿಯಾಗಿ, 18 ಮತಗಳನ್ನು ಪಡೆದ 7ನೇ ತರಗತಿ ವಿದ್ಯಾರ್ಥಿ ವಿನಯ್ ಸಾಗರ್ ನಿರಾವರಿ ಮಂತ್ರಿಯಾಗಿ ಆಯ್ಕೆಯಾಗಿದ್ದಾರೆ. ಉಳಿದಂತೆ ಸೋನಿಕ ಹಣಕಾಸು ಮಂತ್ರಿ ಲಿಖಿತ್ ವಾರ್ತಾ ಮಂತ್ರಿ ಶೈಲಜಾ ಆರೋಗ್ಯ ಮಂತ್ರಿ ಸಿದ್ದಾರ್ಥ್ ಸ್ವಚ್ಚತಾ ಮಂತ್ರಿ ಪ್ರತ್ಯುಷ್ ಶಿಕ್ಷಣ ಮಂತ್ರಿ ಹೃತಿಕ್ ಗ್ರಂಥಾಲಯ ಮಂತ್ರಿ ಚರಣ್ ತೋಟಗಾರಿಕೆ ಮಂತ್ರಿ ಚಂದನ್ ಕ್ರೀಡಾ ಮಂತ್ರಿ ಸಂಜು ಅಭಿವೃದ್ಧಿ ಮಂತ್ರಿ ದಿಗಂತ್ ರಕ್ಷಣಾ ಮಂತ್ರಿ ವಿನು ಸ್ಟೀಫನ್ ಆಹಾರ ಮಂತ್ರಿ ಇಂದು ಸಾಂಸ್ಕೃತಿಕ ಮಂತ್ರಿ ಆಗಿ ಆಯ್ಕೆಯಾಗಿದ್ದಾರೆ. ಈ ಚುನಾವಣೆ ಪ್ರಕ್ರಿಯೆಯಲ್ಲಿ ಹಿರಿಯ ಶಿಕ್ಷಕರಾದ ವೀಣಾ ವಸಂತಕುಮಾರಿ ಆರೋಕ್ಯ ಮೇರಿ ಜಯರಾಮ್ ಗೌಡ ಟಿ ಸುಧಾ ನರಸಿಂಹ ಕೃಷ್ಣಮೂರ್ತಿ ಸೋಮಸುಂದರ್ ಶೋಭಾ ರಾಣಿ ಡಾಕ್ಟರ್ ಚೆಲುವರಾಜ್ ಕವಿತಾ ಶಿಲ್ಪ ಡಾ ಸಾಹಿತಿ ಮಾದುಪ್ರಸಾದ್ ಅತಿಥಿ ಶಿಕ್ಷಕರಾದ ಮಿಗಿಲ ಸ್ವಾತಿ ಅನ್ನಪೂರ್ಣ ಸುಪ್ರಿಯ ಜಯ ಕುಮಾರಿ ಸಭಾ ಫಾತಿಮ ಗ್ರೂಪ್ ಡಿ ನೌಕರರಾದ ಶ್ರೀಮತಿ ಸುಶೀಲಮ್ಮ ಹಾಗೂ ಪ್ರಮೀಳಾ ರವರು ಪಾಲ್ಗೊಂಡಿದ್ದರು. ವಿಜೇತ ಅಭ್ಯರ್ಥಿಗಳಿಗೆ ಶಾಲೆ ಎಸ್ ಟಿ ಎಂ ಸಿ ಕರ್ನಾಟಕ ರಕ್ಷಣಾ ವೇದಿಕೆ ಹಳೆ ವಿದ್ಯಾರ್ಥಿಗಳ ಸಂಘ ಪೋಷಕರ ಸಮಿತಿಯ ಪರವಾಗಿ ಶಾಲೆ ಹಿರಿಯ ಮುಖ್ಯ ಶಿಕ್ಷಕರಾದ ಸುರೇಶ್ ಹಾಗೂ ಶಾಲೆಯ ಶಿಕ್ಷಕರ ರವರು ಅಭಿನಂದನೆ ಸಲ್ಲಿಸಿದರು.ಈಸಂದರ್ಭದಲ್ಲಿ ಎಸ್ ಡಿ ಎಮ್ ಸಿ ಅಧ್ಯಕ್ಷರು ಶುಭ ಹಾಗೂ ಉಪಾಧ್ಯಕ್ಷರಾದ ಮೊಹಮ್ಮದ್ ರಫೀಕ್ ಸದಸ್ಯರು ಶಿವರಾಂ ಬೆಳ್ತೂರು ವೆಂಕಟೇಶ್ ನಂದಿನಿ ಪಲ್ಲವಿ ವೆಂಕಟೇಶ್ ಕರ್ನಾಟಕ ರಕ್ಷಣಾ ವೇದಿಕೆಯ ಅಧ್ಯಕ್ಷರು ಪುರುಷೋತ್ತಮ್ , ಹಳೇ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷರಾದ ರಮೇಶ್ ಮತ್ತು ಪತ್ರಕರ್ತರಾದ ಶ್ರೀ ಹನುಗುಡ್ ನಟರಾಜ್ ರವರು ಮತಗಟ್ಟೆಗೆ ಅನಿರೀಕ್ಷಿತ ಭೇಟಿ ನೀಡಿ ಅಭ್ಯರ್ಥಿ ಗಳಿಗೆ ಶುಭ ಹಾರೈಸಿದರು.

# ಯುವ ನಾಯಕ ಸೂರಜ್ ಹೆಗಡೆಗೆ ಭಾವಪೂರ್ಣ ನುಡಿನಮನ



• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ಕಾಂಗ್ರೆಸ್ ಪಕ್ಷದ ಯುವ ಮುಖಂಡ ಹಾಗೂ ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಪಕ್ಷನಿಷ್ಠೆಗೆ ಮಾದರಿಯಾಗಿದ್ದ ಸೂರಜ್ ಹೆಗಡೆ ಅವರು ಎಂದಿಗೂ ಪಕ್ಷ ವಿರೋಧಿ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲಿಲ್ಲ ಎಂದು.ಮಾಜಿ ಶಾಸಕ ಹಾಗೂ ಸ್ನೇಹಜೀವಿ ಎಚ್.ಪಿ. ಮಂಜುನಾಥ್, ತಿಳಿಸಿದರು

ನಗರದ ಕನಕ ಭವನದಲ್ಲಿ ಹುಣಸೂರು ತಾಲೂಕು ಕುರುಬರ ಅಭಿವೃದ್ಧಿ ಸಮಿತಿ, ಪ್ರಗತಿಪರ ಚಿಂತಕರು ಹಾಗೂ ಮಾಜಿ ಮುಖ್ಯಮಂತ್ರಿ ದಿವಂಗತ ಡಿ. ದೇವರಾಜ ಅರಸು ಅವರ ಕುಟುಂಬದ ಹಿತೈಷಿಗಳ ವತಿಯಿಂದ ಆಯೋಜಿಸಲಾದ ಸಭೆಯಲ್ಲಿ ವಿವಿಧ ಕ್ಷೇತ್ರಗಳ ಗಣ್ಯರು ಭಾಗವಹಿಸಿ ಸೂರಜ್ ಹೆಗಡೆ ಸ್ಮರಣಾರ್ಥಹ ಶ್ರದ್ಧಾಂಜಲಿ ಸಭೆ ಹಾಗೂ ನುಡಿನಮನ ಕಾರ್ಯಕ್ರಮ ಅವರ ವ್ಯಕ್ತಿತ್ವ, ಸಾಮಾಜಿಕ ಬದ್ಧತೆ ಹಾಗೂ ಪಕ್ಷನಿಷ್ಠೆಯನ್ನು ಸ್ಮರಿಸಿದರು. ಕಾರ್ಯಕ್ರಮದಲ್ಲಿ ಮಾತನಾಡಿದ 2008 ಹಾಗೂ 2013ರ ವಿಧಾನಸಭಾ ಚುನಾವಣೆಯಲ್ಲಿ ಅವರ ಕುಟುಂಬದ ಸದಸ್ಯರೇ ಕಾಂಗ್ರೆಸ್ ವಿರುದ್ಧ ಸ್ಪರ್ಧಿಸಿದ್ದರೂ, ಅವರು ಕುಟುಂಬದ ಪರ ನಿಲ್ಲದೆ ಪಕ್ಷದ ಅಧಿಕೃತ ಅಭ್ಯರ್ಥಿಯಾಗಿದ್ದ ನನ್ನ ಪರವಾಗಿ ದುಡಿದರು. ಅವರ ಈ ನಿಲುವು ಪಕ್ಷದ ಮೇಲಿನ ನಿಷ್ಠೆ, ಪ್ರಾಮಾಣಿಕತೆ ಮತ್ತು ಬದ್ಧತೆಯನ್ನು ಸ್ಪಷ್ಟವಾಗಿ ತೋರಿಸುತ್ತದೆ ಎಂದು ಸ್ಮರಿಸಿದರು

ಸೂರಜ್ ಹೆಗಡೆ ಅವರು ಅಪರೂಪದ ಸಂಘಟನಾ ಚತುರತೆಯನ್ನು ಹೊಂದಿದ್ದ ಯುವ ನಾಯಕರಾಗಿದ್ದರು.ಎಲ್ಲರೊಂದಿಗೆ ಆತ್ಮೀಯ ಬಾಂಧವ್ಯ ಬೆಳೆಸಿಕೊಂಡಿದ್ದ ಅವರು ಅಜಾತಶತ್ರುವಾಗಿದ್ದರು ರಾಜಕೀಯ, ಸಾಮಾಜಿಕ ಹಾಗೂ ಸಮಕಾಲೀನ ವಿಚಾರಗಳ ಕುರಿತು ಅಪಾರ ಜ್ಞಾನ ಹೊಂದಿದ್ದ ಅವರು ಸದಾ ಜನಪರ ಚಿಂತನೆಗಳೊಂದಿಗೆ ಬದುಕಿದರು. ಯುವಕರಿಗೆ ಮಾದರಿಯಾಗಿದ್ದ ಅವರ ಅಗಲಿಕೆ ಸಮಾಜಕ್ಕೆ ಮತ್ತು ಕಾಂಗ್ರೆಸ್ ಪಕ್ಷಕ್ಕೆ ದೊಡ್ಡ ನಷ್ಟವಾಗಿದೆ" ಎಂದು ಹೇಳಿದರು.

ದಸಂಸ ಹಿರಿಯ ಮುಖಂಡ ಹರಿಹರ ಆನಂದ ಸ್ವಾಮಿ ಮಾತನಾಡಿ,ಮಾಜಿ ಮುಖ್ಯಮಂತ್ರಿ ದೇವರಾಜ ಅರಸು ಅವರ ಮೊಮ್ಮಗ ಎಂಬ ಹಮ್ಮು-ಬಿಮ್ಮು ಇಲ್ಲದೆ ಸರಳ, ಸಜ್ಜನಿಕೆಯ ಬದುಕು ನಡೆಸಿದ ವ್ಯಕ್ತಿ ಸೂರಜ್ ಹೆಗಡೆ. ಹೋರಾಟ ಮತ್ತು ಸೇವೆಯೇ ಅವರ ಜೀವನದ ಧ್ಯೇಯವಾಗಿತ್ತು. ಅವರ ಅಕಾಲಿಕ ನಿಧನ ಕಾಂಗ್ರೆಸ್ ಪಕ್ಷಕ್ಕೆ ಮಾತ್ರವಲ್ಲ, ಸಮಾಜಕ್ಕೂ ತುಂಬಲಾರದ ನಷ್ಟವಾಗಿದೆ" ಎಂದು ನುಡಿದರು.

ರಾಜ್ಯ ಕುರುಬರ ಸಂಘದ ಮಾಜಿ ಅಧ್ಯಕ್ಷ ಬಿ. ಸುಬ್ರಮಣ್ಯ ಮಾತನಾಡಿ, ಸೂರಜ್ ಹೆಗಡೆ ಅವರು ರಾಷ್ಟ್ರೀಯ ನಾಯಕ ರಾಹುಲ್ ಗಾಂಧಿ ಅವರ ಕುಟುಂಬದೊಂದಿಗೆ ಆತ್ಮೀಯ ಒಡನಾಟ ಹೊಂದಿದ್ದು,ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಉಪಾಧ್ಯಕ್ಷರಾಗಿ ಜನಪರ ಸೇವೆ ಸಲ್ಲಿಸಿದ್ದರು. ಪಕ್ಷದ ಬೆಳವಣಿಗೆ ಹಾಗೂ ಸಾಮಾಜಿಕ ನ್ಯಾಯದ ಪರವಾದ ಅವರ ಬದ್ಧತೆ ಸದಾ ಸ್ಮರಣೀಯ ಎಂದು ಹೇಳಿದರು.

ಸಭೆಯಲ್ಲಿ ತಾಲೂಕು ಕುರುಬರ ಅಭಿವೃದ್ಧಿ ಸಮಿತಿ ಅಧ್ಯಕ್ಷ ಡಿ.ಕೆ. ಕುನ್ನೇಗೌಡ, ಪ್ರಗತಿಪರ ಚಿಂತಕರಾದ ಎ.ಪಿ. ಸ್ವಾಮಿ, ಕೆ.ಗಣೇಶ್ ಗೌಡ, ಬಿ.ಎನ್. ಜಯರಾಮ್, ಡಾ. ಲೋಹಿತ್, ಸತ್ಯಪ್ಪ, ಅಣ್ಣಯ್ಯನಾಯಕ, ಹಂದನಹಳ್ಳಿ ಸೋಮಶೇಖರ್, ತ್ರಿವೇಣಿ, ಗಣಪತಿರಾವ್ ಇಂಡಲ್ಕರ್, ತರಿಕಲ್ ರಾಜು ಹಾಣಟಿಜಜಜಿಟಿಜಜಗು ಇನ್ನಿತರು ಹಾಜರಿದ್ದರು

# ಮಣ್ಣಿನಲ್ಲಿರುವ ಸೂಕ್ಷ್ಮಜೀವಿಗಳನ್ನು ರಕ್ಷಿಸಿ, ಭೂಮಿಯ ದೀರ್ಘಕಾಲದ ಉತ್ಪಾದಕತೆ ಮರಳಿ ಪಡೆಯಲು ಬಸನಾಯಕ ಕರೆ

• ಮಲ್ಲಮ್ಮ ನುಡಿ ವಾರ್ತೆ ಬೀದರ

ಜೂ 13 : ಅತಿಯಾದ ರಾಸಾಯನಿಕ ಗೊಬ್ಬರಗಳ ಬಳಕೆಯಿಂದಾಗಿ ಮಣ್ಣಿನ ನೈಸರ್ಗಿಕ ಗುಣಮಟ್ಟ ಹಾಳಾಗುತ್ತಿದೆ. ರೈತರು ನಿಯಮಿತವಾಗಿ ಮಣ್ಣು ಪರೀಕ್ಷೆ ಮಾಡಿಸಬೇಕು. ಹಸಿರು ಗೊಬ್ಬರ, ಕಾಂಪೋಸ್ಟ್ ತರಹದ ಸಾವಯವ ಪದ್ಧತಿಗಳನ್ನು ಅಳವಡಿಸಿಕೊಳ್ಳುವುದರಿಂದ ಮಣ್ಣಿನಲ್ಲಿರುವ ಸೂಕ್ಷ್ಮಜೀವಿಗಳನ್ನುರಕ್ಷಿಸಿ,ಭೂಮಿಯ ದೀರ್ಘಕಾಲದ ಉತ್ಪಾದಕತೆಯನ್ನು ಮರಳಿ ಪಡೆಯಬಹುದು ಎಂದು ಬೀದರ ಐಸಿಎಆರ್-ಕೃಷಿ ವಿಜ್ಞಾನ ಕೇಂದ್ರ ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರು ಡಾ.ರಾಜಶೇಖರ್ ಬಸನಾಯಕ್ ಅವರು ರೈತರಿಗೆ ಕಿವಿಮಾತು ಹೇಳಿದರು.

ಬೀದರ ಜಿಲ್ಲೆಯ ಚಿಕಪೇಟ್, ಮರ್ಕಲ್‌ನಲ್ಲಿ ಇತ್ತೀಚಿನ "ಖೇತಿ ಬಚಾವೋ ಆಂದೋಲನ ಅಭಿಯಾನ"ವನ್ನು ರೈತ ಸಮುದಾಯಕ್ಕೆ ವೈಜ್ಞಾನಿಕ, ಸುಸ್ಥಿರ ಮತ್ತು ಕಡಿಮೆ ವೆಚ್ಚದ ಕೃಷಿ ಪದ್ಧತಿಗಳ ಬಗ್ಗೆ ಜಾಗೃತಿ ಮೂಡಿಸಿ ಅವರು ಮಾತನಾಡಿದರು.

ತೀವ್ರವಾಗಿ ಕಾಡುತ್ತಿರುವ ಮಣ್ಣಿನ ಸವೆತ ಹಾಗೂ ಫಲವತ್ತತೆ ಕುಸಿತದ ಸಮಸ್ಯೆಯ ಬಗ್ಗೆ ಅತಿಯಾದ ರಾಸಾಯನಿಕ ಗೊಬ್ಬರಗಳ ಬಳಕೆಯಿಂದಾಗಿ ಮಣ್ಣಿನ ನೈಸರ್ಗಿಕ ಗುಣಮಟ್ಟ



ಹಾಳಾಗುತ್ತಿದೆ. ರೈತರು ನಿಯಮಿತವಾಗಿ ಮಣ್ಣು ಪರೀಕ್ಷೆ ಮಾಡಿಸಬೇಕು. ಹಸಿರು ಗೊಬ್ಬರ, ಕಾಂಪೋಸ್ಟ್ ತರಹದ ಸಾವಯವ ಪದ್ಧತಿಗಳನ್ನು ಅಳವಡಿಸಿಕೊಳ್ಳುವುದರಿಂದ ಮಣ್ಣಿನಲ್ಲಿರುವ ಸೂಕ್ಷ್ಮಜೀವಿಗಳನ್ನುರಕ್ಷಿಸಿ,ಭೂಮಿಯ ದೀರ್ಘಕಾಲದ ಉತ್ಪಾದಕತೆಯನ್ನು ಮರಳಿ ಪಡೆಯಬಹುದು ಎಂದು ಆತಂಕ ವ್ಯಕ್ತಪಡಿಸಿದರು.

ಬಳಿಕ ಸಸ್ಯ ಸಂರಕ್ಷಣೆ ಕುರಿತು ಮಾತನಾಡಿದ ವಿಜ್ಞಾನಿ ಡಾ. ಶಿವಕುಮಾರ್ ಅವರು, ಪರಿಸರ ಸ್ನೇಹಿ ಬೆಳೆ ಸಂರಕ್ಷಣಾ ವಿಧಾನಗಳ ಬಗ್ಗೆ ಸುದೀರ್ಘ ಮಾಹಿತಿ ನೀಡಿದರು. ಕೀಟ ಮತ್ತು ರೋಗಗಳ ನಿಯಂತ್ರಣಕ್ಕಾಗಿ ಜೈವಿಕ ಹಾಗೂ ನೈಸರ್ಗಿಕ ಮಾರ್ಗಗಳನ್ನು ಅನುಸರಿಸಲು ಅವರು ಕರೆ ನೀಡಿದರು. ಸ್ಥಳೀಯವಾಗಿ ಸಿಗುವ ಸಸ್ಯ ಸಾಮಗ್ರಿಗಳಿಂದ ಕಷಯ ಹಾಗೂ ಜೈವಿಕ ಕೀಟನಾಶಕಗಳನ್ನು ತಯಾರಿಸುವ ವಿಧಾನವನ್ನು ವಿವರಿಸಿದ ಅವರು, ದುಬಾರಿ ಹಾಗೂ ವಿಷಕಾರಿ ರಾಸಾಯನಿಕಗಳ ಬಳಕೆಯನ್ನು ಕಡಿಮೆ ಮಾಡಿ, ಜೀವವೈವಿಧ್ಯವನ್ನುರಕ್ಷಿಸುವ ನೈಸರ್ಗಿಕ ಸೂತ್ರಗಳನ್ನು ಅಳವಡಿಸಿಕೊಳ್ಳಲು ಉತ್ತೇಜಿಸಬೇಕು ಎಂದು ತಿಳಿಸಿದರು.

ಬೀದರ ಐಸಿಎಆರ್-ಕೃಷಿ ವಿಜ್ಞಾನ ಕೇಂದ್ರ ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರು ಡಾ.ರಾಜಶೇಖರ್ ಬಸನಾಯಕ್,ಮೊ.9480696318,9711330755ಗೆ ಕರೆ ಮಾಡಿ ಮಾಹಿತಿ ಪಡೆಯಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಸ್ಯ ಸಂರಕ್ಷಣಾ ವಿಜ್ಞಾನಿ ಡಾ.ಶಿವಕುಮಾರ್, ರೈತ ಸಂಘದ ಪ್ರಮುಖ ನಾಯಕರಾದ ಶ್ರೀ ಶಂಕರಣ್ಣ ಪಾರಾ ಮತ್ತು ಶ್ರೀ ವೈಜಿನಾಥ್ ಬುಯ್ಯ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಅಪಾರ ಸಂಖ್ಯೆಯ ಪ್ರಗತಿಪರ ರೈತರು ಉತ್ಸಾಹದಿಂದ ಉಪಸ್ಥಿತರಿದ್ದರು.

## ನಿವೃತ್ತ ಶಿಕ್ಷಕಿಗೆ ಅಭಿನಂದನಾ ಸಮಾರಂಭ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ತಾಲೂಕಿನ ಗಿಣಿಗೇರಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಸತತ 32 ವರ್ಷಗಳ ಕಾಲ ಕನ್ನಡ ಶಿಕ್ಷಕಿಯಾಗಿ ಸೇವೆ ಸಲ್ಲಿಸಿ ಇತ್ತೀಚೆಗೆ ನಿವೃತ್ತಿ ಹೊಂದಿದ ಶಿಕ್ಷಕಿ ಕಾಶಿಬಾಯಿ ಅವರಿಗೆ ಕನ್ನಡ ಸಾಹಿತ್ಯ ಪರಿಷತ್ತು ಗಿಣಿಗೇರಿ ಹೋಬಳಿ ಘಟಕದ ವತಿಯಿಂದ ಸನ್ಮಾನ ಹಾಗೂ ಅಭಿನಂದನಾ ಕಾರ್ಯಕ್ರಮ ಶುಕ್ರವಾರ ನಡೆಯಿತು.

ಕಾರ್ಯಕ್ರಮದಲ್ಲಿ ಗಿಣಿಗೇರಿಯ ಶ್ರೀಮದ್ ಆನೆಗುಂದಿ ಮಹಾಸಂಸ್ಥಾನ ಸರಸ್ವತಿ ಪೀಠದ ಶ್ರೀ ಅಭಿನವ ಶ್ರೀಕಂಠ ಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿ ಮಾತನಾಡಿ, ಯಾವ ವ್ಯಕ್ತಿಯಲ್ಲಿ ಪ್ರೀತಿ, ಕರುಣೆ ಹಾಗೂ ಎಲ್ಲರನ್ನೂ ಸಮಾನವಾಗಿ ಕಾಣುವ ಗುಣ ಇರುತ್ತದೆಯೋ ಅಂತವರು ಮಾತ್ರ ಶ್ರೇಷ್ಠ ಗುರುವಾಗಲು ಸಾಧ್ಯ. ಇಂತಹ ಎಲ್ಲ ಸರ್ವ ಶ್ರೇಷ್ಠ ಗುಣಗಳನ್ನು ಒಳಗೊಂಡು ಸತತ 32 ವರ್ಷಗಳ ಕಾಲ ಸೇವೆ ಸಲ್ಲಿಸಿದ ಕಾಶಿಬಾಯಿ ಶಿಕ್ಷಕಿ ಅವರದು ಸಾರ್ಥಕ ಸೇವೆ. ಸೇವೆಗೆ ನಿವೃತ್ತಿ ಇರಬಹುದು ಆದರೆ ವಿದ್ಯಾರ್ಥಿಗಳ ಮನಸ್ಸಿನಲ್ಲಿ ಶಾಶ್ವತವಾಗಿ ಅವರು ಗುರುವಾಗಿ ನೆಲೆಸುತ್ತಾರೆ ಎಂದರು. ಗಿಣಿಗೇರಿ ಹೋಬಳಿ ಘಟಕದ ಕನ್ನಡ ಸಾಹಿತ್ಯ ಪರಿಷತ್ತಿನ ಹಿರಿಯ ಸದಸ್ಯ ಡಾ. ಪಿ. ಎಂ. ಬಸವರಾಜ ಮಾತನಾಡಿ, ಶಿಕ್ಷಕಿ ಕಾಶಿಬಾಯಿ ಅವರು ಸುಧೀರ್ಘ ವರ್ಷಗಳ ಕಾಲ ಕನ್ನಡ ಶಿಕ್ಷಕಿಯಾಗಿ ಅಪಾರ ಶಿಷ್ಯ ಬಳಗಕ್ಕೆ ಕನ್ನಡದ ಕಂಪನ್ನು ಧಾರೆ ಎರೆಯುವ ಮೂಲಕ ಅತ್ಯಂತ ಶ್ರೇಷ್ಠ ಸೇವೆಗೆದಿದ್ದಾರೆ. ಕನ್ನಡ ಸಾಹಿತ್ಯ ಪರಿಷತ್ತಿನಿಂದ ಇವರಿಗೆ ಸನ್ಮಾನ ಹಾಗೂ ಅಭಿನಂದನಾ ಸಮಾರಂಭ ಹಮ್ಮಿಕೊಳ್ಳುವುದಕ್ಕೆ ಹೆಮ್ಮೆ ಎನಿಸುತ್ತಿದೆ ಎಂದರು. ಶಾಲೆಯ ಹಳೆಯ ವಿದ್ಯಾರ್ಥಿಗಳಾದ ಸಹಾಯಕ ಪ್ರಾಧ್ಯಾಪಕ ಡಾ. ನಿಂಗಪ್ಪ ಕಂಬಳಿ, ಶಿಕ್ಷಕ ಪ್ರಾಣೇಶ ಪೂಜಾರ್, ಹನುಮಂತ ಕೋಲ್ಕಾರ್, ಅನಿಲ್ ಜಾನ, ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕ ಟಿ. ವೈಶಂಪಾಯನ, ಸರ್ಕಾರಿ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಸದಾನಂದಕುಮಾರ, ಜ್ಞಾನಭಾರತಿ ಶಾಲೆಯ ಮುಖ್ಯ ಶಿಕ್ಷಕ ಸೋಮಲಿಂಗಪ್ಪ ಬೆಣ್ಣಿ, ಎಸ್ಡಿಎಂಸಿ ಅಧ್ಯಕ್ಷ ಸುಭಾಸ್ ಚಂದ್ರ ಹಲಿಗೇರಿ ಮಾತನಾಡಿದರು.

ಕೊಪ್ಪಳ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ರಾಮಚಂದ್ರ ಗೊಂಡಬಾಳ ಅಧ್ಯಕ್ಷತೆ ವಹಿಸಿದ್ದರು. ಕಸಾಪ ತಾಲೂಕು ಘಟಕದ ಕಾರ್ಯದರ್ಶಿ ಬಸವರಾಜ ಸಿರುಗುಂಪಿ ಶೆಟ್ಟರ್, ಶಿಕ್ಷಕ ದೇವರಾಜ ಮೇಟಿ, ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ದೇವರಾಜ ಹಲಿಗೇರಿ, ಹಿರಿಯ ಕಲಾವಿದ ವೆಂಕಪ್ಪ ಮೇಟಿ ಶ್ರೀಕಾಂತ ಗೋಡೆಕಾರ, ಮಲ್ಲಿಕಾರ್ಜುನ ಗುಡಿಗೇರಿ, ವೀರಣ್ಣ ಅಂಗಡಿ, ಬಸವರಾಜ ಗದ್ದಿ ಕಸಾಪ ನಿಕಟ ಪೂರ್ವ ಅಧ್ಯಕ್ಷ ಯಮನೂರಪ್ಪ ಗಂಟಿ, ಕಲ್ಲೇಶ ಎತ್ತಿನಮನಿ, ಶಿಲ್ಪ ಗಣಾಚಾರಿ, ಯಮನೂರಪ್ಪ ಚೌಹಾಣ್, ವೆಂಕೋಬ ಇಂದರಗಿ, ಮತ್ತಿತರರು ಉಪಸ್ಥಿತರಿದ್ದರು. ಪುಟ್ಟಣ್ಣವಾರದ ಕಾರ್ಯಕ್ರಮ ನಿರೂಪಿಸಿದರು. ಕಸಾಪ ಗಿಣಿಗೇರಿ ಹೋಬಳಿ ಘಟಕದ ಅಧ್ಯಕ್ಷ ಶಂಕರಗೌಡ ಪಾಟೀಲ್ ಸ್ವಾಗತಿಸಿ ವಂದಿಸಿದರು.

## ಬಾಲಕಾರ್ಮಿಕ ಮುಕ್ತ ಸಮಾಜ ರೂಪಿಸಲು ಕೈಜೋಡಿಸಿ :ಜಿಲ್ಲಾಧಿಕಾರಿ ಇ.ಬಾಲಕೃಷ್ಣ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)

ಜೂ. 13:ನಗರದ ಬಾಲಕಿಯರ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್,ಕಾನೂನು ಸೇವಾ ಪ್ರಾಧಿಕಾರ,ಕಾರ್ಮಿಕ ಇಲಾಖೆ, ಶಾಲಾ ಶಿಕ್ಷಣ ಇಲಾಖೆ,ಪೊಲೀಸ್ ಇಲಾಖೆ, ಮಕ್ಕಳ ರಕ್ಷಣಾ ಘಟಕ,ಜಿಲ್ಲಾ ಬಾಲಕಾರ್ಮಿಕ ಯೋಜನೆ, ವಕೀಲರ ಸಂಘ,ವಿವಿಧ ಇಲಾಖೆ ಮತ್ತು ಸಂಘ ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಲಾಗಿದ್ದ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸಮಾಜದಲ್ಲಿ ಬಡತನವಿದ್ದರೂ ಅದನ್ನು ಹೋಗಲಾಡಿಸಲು ಸರ್ಕಾರ ಪಂಚ ಗ್ಯಾರಂಟಿ ಹಾಗೂ ಸಾಮಾಜಿಕ ಭದ್ರತಾ ಯೋಜನೆಗಳನ್ನು ಜಾರಿಗೆ ತಂದಿದೆ.ಹೀಗಿದ್ದೂ ಬಡತನದ ನೆಪವೊಡ್ಡಿ ಮಕ್ಕಳನ್ನು ಶಾಲೆಗೆ ಕಳುಹಿಸದೆ ಬಾಲಕಾರ್ಮಿಕರನ್ನಾಗಿ ದುಡಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧ.ಪ್ರತಿಯೊಬ್ಬರೂ ಕೈಜೋಡಿಸಿದರೆ ಮಾತ್ರ ಬಾಲಕಾರ್ಮಿಕ ಮುಕ್ತ ಸಮಾಜ ರೂಪಿಸಲು ಸಾಧ್ಯ ಎಂದು ಅಪರ ಜಿಲ್ಲಾಧಿಕಾರಿ ಇ.ಬಾಲಕೃಷ್ಣ ಅವರು ಹೇಳಿದರು.ದೇಶದಲ್ಲಿ ಮಕ್ಕಳ ಹಕ್ಕುಗಳ ರಕ್ಷಣೆಗಾಗಿ 1986 ರಲ್ಲೇ ಬಾಲಕಾರ್ಮಿಕ ವಿರೋಧಿ ಕಾಯ್ದೆ ತರಲಾಗಿದ್ದು,ಕಾಲಕಾಲಕ್ಕೆ ತಿದ್ದುಪಡಿಗಳ ಮೂಲಕ ಇದನ್ನು ಮತ್ತಷ್ಟು ಬಲಪಡಿಸಲಾಗಿದೆ. ಕಾಯ್ದೆಯನ್ವಯ ಮಕ್ಕಳನ್ನು ದುಡಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧ.ಮೊದಲ ಬಾರಿಗೆ ಅಪರಾಧ ಎಸಗಿದರೆ 6 ತಿಂಗಳಿಂದ 2 ವರ್ಷಗಳವರೆಗೆ ಜೈಲು ವಾಸ. ಅದೇ ತಪ್ಪನ್ನು ಪುನರಾವರ್ತಿಸಿದರೆ 2 ವರ್ಷದಿಂದ 3 ವರ್ಷಗಳವರೆಗೆ ಕಠಿಣ ಜೈಲು ಶಿಕ್ಷೆ ವಿಧಿಸಲು ಕಾನೂನಿನಲ್ಲಿ ಅವಕಾಶವಿದೆ ಎಂದರು.

ಈ ವರ್ಷದ ಘೋಷವಾಕ್ಯವಾದ "ಮಕ್ಕಳ ಕಾರ್ಮಿಕತೆಗೆ ರೆಡ್ ಕಾರ್ಡ್ ತೋರಿಸಿ,ಮಕ್ಕಳಿಗೆ ನ್ಯಾಯಯುತ ಬಾಲ್ಯ, ವಯಸ್ಕರಿಗೆ ಘನತೆಯ ಉದ್ಯೋಗ"ಎಂಬುದನ್ನು ಕೇವಲ ಮಾತಿಗೆ ಸೀಮಿತಗೊಳಿಸದೆ, ಪ್ರಾಯೋಗಿಕವಾಗಿ ಜಾರಿಗೆ ತರಬೇಕಿದೆ.ಯಾವುದೇ ಅಪಾಯಕಾರಿ



ಉದ್ಯಮ, ಹೋಟೆಲ್ ಅಥವಾ ಸಂಸ್ಥೆಗಳು ಮಕ್ಕಳನ್ನು ಕೆಲಸಕ್ಕೆ ಇಟ್ಟುಕೊಳ್ಳಬಾರದು. ಮಕ್ಕಳ ಭವಿಷ್ಯ ರೂಪಿಸಲು ಶಿಕ್ಷಣವೇ ಏಕೈಕ ಅಸ್ತ್ರ. ನಾವೆಲ್ಲರೂ ಬಾಲ್ಯದಲ್ಲಿದ್ದಾಗ ನಮ್ಮೊಂದಿಗೆ ಓದಬೇಕಿದ್ದ ಎಷ್ಟೋ ಗೆಳೆಯರು ಶಿಕ್ಷಣದಿಂದ ವಂಚಿತರಾಗಿ ಬಾಲ ಕಾರ್ಮಿಕರಾಗಿರುವುದು ಕಂಡಿದ್ದೇವೆ.ಅಂತಹ ಪರಿಸ್ಥಿತಿ ಇಂದಿನ ಮಕ್ಕಳಿಗೆ ಬರಬಾರದು ಎಂದು ಆಶಯ ವ್ಯಕ್ತಪಡಿಸಿದ ಅವರು, ಮಕ್ಕಳ ಹಕ್ಕುಗಳ ಬಗ್ಗೆ ಪೋಷಕರಲ್ಲಿ ಅರಿವು ಮೂಡಿಸುವುದು ಮತ್ತು ಯಾವುದೇ ಮಗು ಶಿಕ್ಷಣದಿಂದ ವಂಚಿತವಾಗದಂತೆ ನೋಡಿಕೊಳ್ಳುವುದು ಇಂದಿನ ತುರ್ತು ಅಗತ್ಯವಾಗಿದೆ ಎಂದು ಹೇಳಿದರು.ತಮ್ಮ ವ್ಯಾಪ್ತಿಯಲ್ಲಿನ ಹೋಟೆಲ್,ಗ್ಯಾರೇಜ್ ಅಥವಾ ಇನ್ಯಾವುದೇ ಕಡೆಗಳಲ್ಲಿ ಮಕ್ಕಳು ಕಾರ್ಮಿಕರಾಗಿ ಕೆಲಸ ಮಾಡುತ್ತಿರುವುದು ಕಂಡುಬಂದಲ್ಲಿ ತಕ್ಷಣವೇ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಕರೆ ಮಾಡಿ ಮಾಹಿತಿ ನೀಡಬಹುದು. ಮಾಹಿತಿ ನೀಡುವವರ ಹೆಸರನ್ನು ಗೌಪ್ಯವಾಗಿಡಲಾಗುವುದು ಮತ್ತು ಅಧಿಕಾರಿಗಳು ತಕ್ಷಣವೇ ಸ್ಥಳಕ್ಕೆ ಧಾವಿಸಿ ಮಕ್ಕಳಿಗೆ ಸೂಕ್ತ ಪುನರ್ವಸತಿ ಕಲ್ಪಿಸಲಿದ್ದಾರೆ ಎಂದು ಅವರು ಹೇಳಿದರು.

ಬಾಲ ಕಾರ್ಮಿಕ ಮುಕ್ತ ಸಮಾಜ ಕೇವಲ ಸರ್ಕಾರದ ವ್ಯವಸ್ಥೆಯಿಂದ ಮಾತ್ರ ತಡೆಯಲು ಸಾಧ್ಯವಿಲ್ಲ. ಮಕ್ಕಳ ಭವಿಷ್ಯವನ್ನು ಕತ್ತಲೆಗೆ ತಳ್ಳುತ್ತಿರುವ ಬಾಲಕಾರ್ಮಿಕ ಪದ್ಧತಿಯನ್ನು ಹೋಗಲಾಡಿಸಲು ಪಾಲಕರು, ಅಧಿಕಾರಿಗಳು, ನ್ಯಾಯಾಂಗ ವ್ಯವಸ್ಥೆ, ಸಂಘ-ಸಂಸ್ಥೆಗಳು ಹಾಗೂ ಸಾರ್ವಜನಿಕರು ಸಹಕಾರ ನೀಡಬೇಕು.ಜಾಗೃತಿ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಇಡೀ ಸಮಾಜ ಒಟ್ಟಾಗಿ ನಿಂತು ಬಾಲಕಾರ್ಮಿಕ ಪದ್ಧತಿಗೆ ರೆಡ್ ಕಾರ್ಡ್ ತೋರಿಸುವ ಮೂಲಕ ಆ ಮುಗ್ಧ ಮಕ್ಕಳ ಉಜ್ವಲ ಭವಿಷ್ಯಕ್ಕೆ ಮುನ್ನುಡಿ ಬರೆಯಬೇಕಿದೆ ಎಂದು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಕಾರ್ಮಿಕ ಅಧಿಕಾರಿ ಸೂರ್ಯಪ್ಪ ಡೊಂಬರಮತ್ತೂರ ಬಾಲ ಕಾರ್ಮಿಕ ವಿರೋಧಿ ದಿನಾಚರಣೆ ಕುರಿತು ಪ್ರತಿಜ್ಞಾವಿಧಿ ಬೋಧಿಸಿದರು.

ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಂಜುನಾಥ್,ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ಗಂಗಪ್ಪ,ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ರಕ್ಷಣಾಧಿಕಾರಿ ಸುದೀಪ್ ಕುಮಾರ್ ಉಂಕಿ,ಕ್ಷೇತ್ರ ಶಿಕ್ಷಣಾಧಿಕಾರಿ ಉಮಾಪತಿ, ಕಾರ್ಮಿಕ ನಿರೀಕ್ಷಕರಾದ ಜಿ.ಬಿ.ದೂಪದ್,ಶಿವಶಂಕರ್ ಬಿ ತಳವಾರ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಬಾಲಕಾರ್ಮಿಕ ಪದ್ಧತಿ ವಿರೋಧಿಸಿ ಜಾಗೃತಿ ಜಾಥ



• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷ ಕೆ.ಎಂ.ರಾಜಶೇಖರ್, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎನ್.ಸುಬ್ರಮಣ್ಯ, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶ ಪ್ರಶಾಂತ್ ನಾಗಲಾಪುರ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಂಜುನಾಥ್ ನಗರದ ಅಂಬೇಡ್ಕರ್ ವೃತ್ತದಲ್ಲಿ ಬಾಲಕಾರ್ಮಿಕ ಪದ್ಧತಿ ವಿರೋಧಿಸಿ ಜಾಗೃತಿ ಜಾಥಕ್ಕೆ ಚಾಲನೆ ನೀಡಿದರು.

ಜಾಗೃತಿ ಜಾಥವು ಅಂಬೇಡ್ಕರ್ ವೃತ್ತದಿಂದ ಆರಂಭವಾಗಿ ಪುನೀತ್ ರಾಜ್‌ಕುಮಾರ್ ವೃತ್ತ, ಮೂರಂಗಡಿ ಸರ್ಕಲ್, ಜಿಲ್ಲಾ ಆಸ್ಪತ್ರೆ, ನಗರಸಭೆ, ಸಾವಿಗಿ ಮಾರುಕಟ್ಟೆ ಮುಖಾಂತರ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜು ಆವರಣದಲ್ಲಿ ಸಮಾಪ್ತಿಗೊಂಡಿತು.

ಈ ವೇಳೆ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ತ್ರಿವೇಣಿ ಪತ್ತರ್, ಕಾರ್ಮಿಕ ಅಧಿಕಾರಿ ಸೂರ್ಯಪ್ಪ ಐ. ಡೊಂಬರಮತ್ತೂರ, ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ವೆಂಕಟೇಶ್ ರಾಮಚಂದ್ರಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಗಂಗಪ್ಪ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ರಕ್ಷಣಾಧಿಕಾರಿ ಸುದೀಪ್ ಕುಮಾರ್ ಉಂಕಿ ಸೇರಿದಂತೆ ಶಾಲಾ ಹಾಗೂ ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಶ್ರೀ ಸತ್ಯ ಸಾಯಿ ಸೇವಾನಿಕೇತನಂ: ಶಿಕ್ಷಣ, ಸೇವೆ ಮತ್ತು ಸಂಸ್ಕಾರದ ಸಂಗಮ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಯಲಬುರ್ಗಾ ಮೌಲ್ಯಾಧಾರಿತ ಶಿಕ್ಷಣದ ಜೊತೆಗೆ ಸಮಾಜಮುಖಿ ಸೇವಾ ಚಟುವಟಿಕೆಗಳ ಮೂಲಕ ಗ್ರಾಮೀಣ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಕಾರ್ಯದಲ್ಲಿ ತೊಡಗಿರುವ ಶ್ರೀ ಸತ್ಯ ಸಾಯಿ ಸೇವಾನಿಕೇತನಂ ಕ್ಯಾಂಪಸ್, ಶಿಕ್ಷಣ ಕ್ಷೇತ್ರದಲ್ಲಿ ವಿಶಿಷ್ಟ ಗುರುತನ್ನು ಮೂಡಿಸಿದೆ.

ಶ್ರೀ ಸದ್ಗುರು ಮಧುಸೂದನ್ ಸಾಯಿ ಅವರ ದೈವಿಕ ಆಶೀರ್ವಾದ ಮತ್ತು ದೂರದೃಷ್ಟಿಯ ನಾಯಕತ್ವದಲ್ಲಿ 2018ರ ಜೂನ್ 5ರಂದು ಸ್ಥಾಪನೆಯಾದ ಈ ಬಾಲಕರ ಕ್ಯಾಂಪಸ್, ಇಂದು ಶಿಕ್ಷಣ, ಸೇವೆ ಮತ್ತು ಆಧ್ಯಾತ್ಮಿಕ ಮೌಲ್ಯಗಳ ಸಮನ್ವಯದ ಕೇಂದ್ರವಾಗಿ ಬೆಳೆದಿದೆ.ಆರಂಭದಲ್ಲಿ 5 ಎಕರೆ ಶುಷ್ಕ ಭೂಮಿಯಲ್ಲಿ ಅಭಿವೃದ್ಧಿ ಕಾರ್ಯ ಆರಂಭಗೊಂಡಿದ್ದು, ಇದೀಗ ಹಸಿರು ಪರಿಸರದ ಸುಂದರ ಆವರಣವಾಗಿ ರೂಪುಗೊಂಡಿದೆ. ಕ್ಯಾಂಪಸ್‌ನಲ್ಲಿ ತೆಂಗಿನ ತೋಟಗಳ ಜೊತೆಗೆ ಮಾವು, ಚಿಕೂ, ಪಪ್ಪಾಯಿ ಹಾಗೂ ಪೇರಳೆ ಹಣ್ಣಿನ ಮರಗಳನ್ನು ಬೆಳೆಸಲಾಗಿದೆ. ಅರಣ್ಯ ಇಲಾಖೆಯ ಸಹಕಾರದಿಂದ ಮಹೋಗಾನಿ, ಸಾಗುವಾನಿ (ತೇಗ) ಸೇರಿದಂತೆ ಮೌಲ್ಯಯುತ ಮರಗಳನ್ನು ನೆಡಲಾಗಿದೆ. ಸುಮಾರು 20 ತೆಂಗಿನ ಮರಗಳಿಂದ ಮೊದಲ ತೆಂಗಿನಕಾಯಿ ಇಳುವರಿಯನ್ನೂ ಪಡೆಯಲು ಕ್ಯಾಂಪಸ್ ಆರಂಭಿಸಿದೆ.ಆರೋಗ್ಯ ಸೇವೆಯಲ್ಲಿ ಮಾದರಿ ಕಾರ್ಯ2020ರಲ್ಲಿ ಕ್ಯಾಂಪಸ್‌ನಲ್ಲಿ ಆಯೋಜಿಸಲಾದ ಉಚಿತ ವೈದ್ಯಕೀಯ ಶಿಬಿರವು ಸ್ಥಳೀಯ ಜನರ ಮೆಚ್ಚುಗೆಗೆ ಪಾತ್ರವಾಗಿತ್ತು. 15ಕ್ಕೂ



ಹೆಚ್ಚು ತಜ್ಞ ವೈದ್ಯರು, ದಾದಿಯರು, ಸಹಾಯಕ ಸಿಬ್ಬಂದಿ, ಕ್ಯಾಂಪಸ್ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಶಿಬಿರದಲ್ಲಿ ಸೇವೆ ಸಲ್ಲಿಸಿದ್ದರು. 700ಕ್ಕೂ ಹೆಚ್ಚು ರೋಗಿಗಳು ಕಣ್ಣಿನ ತಪಾಸಣೆ, ಉಚಿತ ಕನ್ನಡಕ ವಿತರಣೆ, ರಕ್ತದೊತ್ತಡ ಮತ್ತು ರಕ್ತದಲ್ಲಿನ ಸಕ್ಕರೆ ಪರೀಕ್ಷೆ, ಮೊಣಕಾಲು ನೋವು, ಮಕ್ಕಳ ಆರೋಗ್ಯ ಸಮಸ್ಯೆಗಳು, ಪಾರ್ಶ್ವವಾಯು ಹಾಗೂ ಮಹಿಳೆಯರ ಆರೋಗ್ಯ ಸಮಸ್ಯೆಗಳಿಗೆ ಉಚಿತ ಚಿಕಿತ್ಸೆ ಪಡೆದಿದ್ದರು. ಔಷಧಿಗಳನ್ನೂ ಉಚಿತವಾಗಿ ವಿತರಿಸಲಾಗಿತ್ತು. ಈ ಸೇವೆಯನ್ನು ಇಂದಿಗೂ ಸುತ್ತಮುತ್ತಲಿನ ಗ್ರಾಮಸ್ಥರು ಕೃತಜ್ಞತೆಯಿಂದ ಸ್ಮರಿಸುತ್ತಾರೆ.

ಕೋವಿಡ್-19 ಸಾಂಕ್ರಾಮಿಕದ ಸಂದರ್ಭದಲ್ಲಿ 2021ರಲ್ಲಿ ಯಲಬುರ್ಗಾ ತಾಲ್ಲೂಕಿನ ಅನೇಕ ಕುಟುಂಬಗಳಿಗೆ ದಿನನಿತ್ಯದ ಆಹಾರ ಕಿಟ್‌ಗಳನ್ನು ವಿತರಿಸುವ ಮೂಲಕ ಸಂಸ್ಥೆ ಮಾನವೀಯ ಸೇವೆಯನ್ನು ವಿಸ್ತರಿಸಿತ್ತು.ಗ್ರಾಮೀಣ ವಿದ್ಯಾರ್ಥಿಗಳಿಗೆ ಆಶಾಕಿರಣಕ್ಯಾಂಪಸ್‌ನಲ್ಲಿ ಇದುವರೆಗೆ 237 ವಿದ್ಯಾರ್ಥಿಗಳು ವಿದ್ಯಾಭ್ಯಾಸ ಪಡೆದಿದ್ದು, ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ 58 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಇವರಲ್ಲಿ ಶೇ.60ರಷ್ಟು ವಿದ್ಯಾರ್ಥಿಗಳು ಗ್ರಾಮೀಣ ಹಿನ್ನೆಲೆಯಿಂದ ಬಂದವರಾಗಿದ್ದು, ಶೇ. 93ರಷ್ಟು ವಿದ್ಯಾರ್ಥಿಗಳು ಬಿಪಿಎಲ್ ಕುಟುಂಬಗಳಿಗೆ ಸೇರಿದ್ದಾರೆ. ಮೊದಲ ತಲೆಮಾರಿನ ಕಲಿಯುವವರ ಪ್ರಮಾಣ ಶೇ. 5ರಷ್ಟಿದೆ.ಸಾಯಿ ಶ್ಯೂರ್ ಮೂಲಕ ಮಕ್ಕಳ ಪೌಷ್ಟಿಕಾಂಶ ಬಲವರ್ಧನೆಕಳೆದ ನಾಲ್ಕು ವರ್ಷಗಳಿಂದ ಸಾಯಿ ಶ್ಯೂರ್ ಪೌಷ್ಟಿಕಾಂಶ ಉಪಕ್ರಮದ ಮೂಲಕ ವಿದ್ಯಾರ್ಥಿಗಳಿಗೆ ನಿರಂತರ ಬೆಂಬಲ ದೊರೆಯುತ್ತಿದೆ. ಗ್ರಾಮೀಣ ಹಿನ್ನೆಲೆಯ ವಿದ್ಯಾರ್ಥಿಗಳ ಆರೋಗ್ಯ ಮತ್ತು ರೋಗನಿರೋಧಕ ಶಕ್ತಿ ವೃದ್ಧಿಸುವಲ್ಲಿ ಈ ಉಪಕ್ರಮ ಮಹತ್ವದ ಪಾತ್ರ ವಹಿಸಿದೆ. ಇದರ ಪರಿಣಾಮವಾಗಿ ವಿದ್ಯಾರ್ಥಿಗಳ ಗ್ರಹಣಶಕ್ತಿ, ಸ್ಮರಣಶಕ್ತಿ, ದೈಹಿಕ ಸಾಮರ್ಥ್ಯ ಹಾಗೂ ಒಟ್ಟಾರೆ ಬೆಳವಣಿಗೆಯಲ್ಲಿ ಗಮನಾರ್ಹ ಸುಧಾರಣೆ ಕಂಡುಬಂದಿದೆ. ಪ್ರಸ್ತುತ 58 ವಿದ್ಯಾರ್ಥಿಗಳು ಈ ಯೋಜನೆಯ ಪ್ರಯೋಜನ ಪಡೆಯುತ್ತಿದ್ದಾರೆ.

ಆಧ್ಯಾತ್ಮಿಕ ಮತ್ತು ಸಾಮಾಜಿಕ ಸೇವೆಯಲ್ಲಿ ಸಕ್ರಿಯ ಕ್ಯಾಂಪಸ್ ಸ್ಥಳೀಯ ಸಮುದಾಯದೊಂದಿಗೆ ನಿರಂತರ ಸಂಪರ್ಕ ಹೊಂದಿದೆ. ವಿವಿಧ ಗ್ರಾಮಗಳಲ್ಲಿ ನಡೆಯುವ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ವಿದ್ಯಾರ್ಥಿಗಳು ವೇದಪಠಣ ಮತ್ತು ಭಜನೆಗಳನ್ನು ನಡೆಸುವ ಮೂಲಕ ಭಾಗವಹಿಸುತ್ತಾರೆ. ಕಾರ್ಯಕ್ರಮದ ಉದ್ದೇಶ ಮತ್ತು ವಿದ್ಯಾರ್ಥಿಗಳ ಲಭ್ಯತೆಗೆ ಅನುಗುಣವಾಗಿ ಕ್ಯಾಂಪಸ್ ಆಡಳಿತವು ಭಾಗವಹಿಸುವಿಕೆಯನ್ನು ಸಂಯೋಜಿಸುತ್ತದೆ. ಪ್ರತಿ ಶನಿವಾರ ಹನುಮಾನ್ ದೇವಾಲಯದಲ್ಲಿ ಪೂಜೆ ಹಾಗೂ ಭಜನಾ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದ್ದು, ಸ್ಥಳೀಯ ಭಕ್ತರು ಸಹ ಭಾಗವಹಿಸುತ್ತಾರೆ.

ಅಲ್ಲದೆ, ಸಾಯಿ ಸ್ವಾಸ್ಥ್ಯ ಕ್ಷೇಮ ಕೇಂದ್ರ ಸ್ಥಾಪನೆಗೆ ಸಂಬಂಧಿಸಿದಂತೆ ಸೂಕ್ತ ಸ್ಥಳದ ಆಯ್ಕೆ ಪ್ರಕ್ರಿಯೆ ನಡೆಯುತ್ತಿದ್ದು, ಶೀಘ್ರದಲ್ಲೇ ಆರೋಗ್ಯ ಸೇವೆಯನ್ನು ಮತ್ತಷ್ಟು ವಿಸ್ತರಿಸುವ ಉದ್ದೇಶವನ್ನು ಸಂಸ್ಥೆ ಹೊಂದಿದೆ.ಶಿಕ್ಷಣದೊಂದಿಗೆ ಸೇವೆ, ಸಂಸ್ಕಾರ ಮತ್ತು ಸಮಾಜಮುಖಿ ಚಿಂತನೆಗಳನ್ನು ವಿದ್ಯಾರ್ಥಿಗಳಲ್ಲಿ ಬೆಳೆಸುತ್ತಿರುವ ಶ್ರೀ ಸತ್ಯ ಸಾಯಿ ಸೇವನಿಕೇತನಂ, ಗ್ರಾಮೀಣ ಪ್ರದೇಶದ ಸಮಗ್ರ ಅಭಿವೃದ್ಧಿಗೆ ತನ್ನದೇ ಆದ ಕೊಡುಗೆಯನ್ನು ನೀಡುತ್ತಿದ್ದು, ಶಿಕ್ಷಣ ಕ್ಷೇತ್ರದಲ್ಲಿ ಮಾದರಿ ಸಂಸ್ಥೆಯಾಗಿ ಹೊರಹೊಮ್ಮಿದೆ.

## ವಿದ್ಯಾರ್ಥಿನಿಲಯ ಗಳ ಪ್ರವೇಶಕ್ಕೆ ಆನ್ ಲೈನ್ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಬೀದರ

ಜೂ 13: 2025-26ನೇ ಸಾಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ/ನಂತರ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿ ಅಹ್ವಾನಿಸಲಾಗಿದೆ ಎಂದು ಬೀದರ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ತಾಲ್ಲೂಕು ವಿಸ್ತರಣಾಧಿಕಾರಿ ಅವರು ತಿಳಿಸಿದ್ದಾರೆ.ಶೈಕ್ಷಣಿಕ ವರ್ಷಕ್ಕೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ/ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ (ಪಿ.ಯು.ಸಿ, ಡಿಪ್ಲೋಮಾ ಐ.ಟಿ.ಐ ಹಾಗೂ ಪ್ರಥಮ ವರ್ಷದ ಪದವಿ ಮಟ್ಟದ ವಿದ್ಯಾರ್ಥಿಗಳಿಗೆ ಮಾತ್ರ) (ರಾಜ್ಯ ವಿದ್ಯಾರ್ಥಿನಿಲಯ ತಂತ್ರಾಂಶ) ಮೂಲಕ ಆನ್‌ಲೈನ್ ಅರ್ಜಿ ಆಹ್ವಾನಿಸಿದೆ.

## ಗೃಹಲಕ್ಷ್ಮಿ ಯೋಜನೆಗೆ ಈಗ ಕಂಡಿಷನ್ ಯಾಕೆ?: ಗುತ್ತೆದಾರ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಗೃಹಲಕ್ಷ್ಮಿ ಯೋಜನೆಗೆ ಈಗ ಕಂಡಿಷನ್ ಯಾಕೆ? ಆಗ ಇಲ್ಲದ ಕಂಡಿಷನ್ ಈಗ ಯಾಕೆ ಎಂದು ಕಲಬುರಗಿ ಜಿಲ್ಲಾ ಜೆಡಿ ಎಸ್ ಅಧ್ಯಕ್ಷ ಬಾಲರಾಜ್ ಗುತ್ತೆದಾರ ಅವರು ಕೇಳಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿದ ಅವರು, ಕಾಕಾ ಪಾಟೀಲ್ ನಿಂಗೂ ಫ್ರೀ, ಎಂದು ಚುನಾವಣೆ ಪ್ರಚಾರದ ವೇಳೆ ಸಿದ್ದರಾಮಯ್ಯನವರು ತಿಳಿಸಿದ್ದರು ಎಂದು ಗಮನ ಸೆಳೆದರು. 10 ಕೆಜಿ ಅಕ್ಕಿ ಕೊಟ್ಟಿದ್ದೀರಾ? ಎನ್.ಡಿ.ಎ ಸರ್ಕಾರದ ಮೋದಿಯವರು 5 ಕೆಜಿ ಅಕ್ಕಿ ಕೊಡದೇ ಇದ್ದರೆ, ನಿಮ್ಮನ್ನೇ ನಂಬಿದ್ದರೆ ಜನರು ಖಾಲಿ ಹೊಟ್ಟೆಯಲ್ಲಿ ನೀರು ಕುಡಿದು ಮಲಗಬೇಕಿತ್ತು ಎಂದು ತಿಳಿಸಿದರು. ನಿಮ್ಮ ಕಂಡಿಷನ್ ಯಾಕೆ, ಖಜಾನೆ ಖಾಲಿ ಎಂಬುದು ಜನರಿಗೆ ಗೊತ್ತಿದೆ ಎಂದು ತಿಳಿಸಿದರು.ಫಲಾನುಭವಿ ಜನರನ್ನು ಕಡಿಮೆ ಮಾಡಲು ಕಂಡಿಷನ್ ಹಾಕುತ್ತೀರಿ. ನಿಮ್ಮ ಹಳೆ ಭಾಷಣವನ್ನು ಜನರು ಕೇಳಿಸಿಕೊಳ್ಳುತ್ತಾರೆ ಎಂದರು. ಇದಕ್ಕೆ ಸೂಕ್ತ ಸಮಯದಲ್ಲಿ ಜನರು ಉತ್ತರ ಕೊಡುತ್ತಾರೆ ಎಂದು ಹೇಳಿದರು.

ಗೃಹಲಕ್ಷ್ಮಿ ಕೊಡಬೇಕಾಗುತ್ತದೆ ಎಂದು ಹೊಸ ಬಿಪಿಎಲ್ ಕಾರ್ಡ್ ಕೊಡುವುದನ್ನೂ ನಿಲ್ಲಿಸಿದ್ದಾರೆ ಎಂದು ಟೀಕಿಸಿದರು. ಇದರಿಂದಾಗಿ ಅರ್ಹ ಫಲಾನುಭವಿಗಳು ಬಿಪಿಎಲ್ ಕಾರ್ಡ್ ನಿಂದಲೂ ವಂಚಿತರಾಗಿದ್ದಾರೆ ಇದರಿಂದ ಬಡಜನರಿಗೆ ತುಂಬಾ ತೂಂದರೆ ಆಗುತಿದೆ ಆದಕಾರಣ ಕೂಡಲೆ ಬಿಪಿಎಲ್ ಕಾರ್ಡ್ ವಿತರಣೆ ಪ್ರಾರಂಭಿಸಬೇಕು ಎಂದು ಆಗ್ರಹಿಸಿದರು.

## ಉಚಿತ ತೊಗರಿ ಹಾಗೂ ಉದ್ದು ಬೀಜಗಳ ವಿತರಣೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ತಾಲೂಕಿನ ರೈತರಿಗೆ ಕೃಷಿ ಇಲಾಖೆಯಿಂದಸಿಹಿಸುದ್ದಿ ದೊರೆತಿದ್ದು, 2026-27ನೇ ಸಾಲಿನ ದ್ವಿದಳ ಧಾನ್ಯಗಳ ಆತ್ಮನಿರ್ಭರ ಪಲ್ಸ ಅಭಿಯಾನ ಯೋಜನೆಅಡಿಯಲ್ಲಿ ಉಚಿತ ತೊಗರಿ ಹಾಗೂಹಾಗೂರಾಷ್ಟೀಯ ಆಹಾರ ಭದ್ರತೆ ಯೋಜನೆ ಆಡಿಯೆಲ್ಲಿ ತೊಗರಿ ಪ್ರಾತ್ಯಕ್ಷಿಕೆ ಬಿತ್ತನೆ ಬೀಜಗಳ್ ವಿತರಣೆ ಕಾರ್ಯಕ್ರಮ ಕಲಬುರಗಿ ತಾಲೂಕಿನಪಟ್ಟಣ ಗ್ರಾಮದಲ್ಲಿರುವ ರೈತ ಸಂಪರ್ಕ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಯಿತು.ದಕ್ಷಿಣ ಮತಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್ ಅವರು ರೈತರಿಗೆ ಉಚಿತತೊಗರಿ ಹಾಗೂ ಉದ್ದು ಮಿನಿಕೀಟ್ ಪ್ರತ್ಯಕ್ಷಕೆ ಬೀಜಗಳನ್ನು ವಿತರಿಸಿ ಮಾತನಾಡಿದರು. ಕೃಷಿ ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರ ಹಲವು ಜನಪರ ಯೋಜನೆಗಳನ್ನು ಜಾರಿಗೆ ತರುತ್ತಿದ್ದು, ರೈತರು ಅವುಗಳ ಸದುಪಯೋಗ ಪಡೆದುಕೊಂಡು ಉತ್ಪಾದನೆ ಹೆಚ್ಚಿಸಿಕೊಳ್ಳಬೇಕು ಎಂದು ಕರೆ ನೀಡಿದರು.ಜಿಲ್ಲಾ ಪಂಚಾಯತ್ ಹಾಗೂ ಕೃಷಿ ಇಲಾಖೆ ಕಲಬುರಗಿ ವತಿಯಿಂದ ಆಯೋಜಿಸಲಾದ ಈಕಾರ್ಯಕ್ರಮದಲ್ಲಿರೈತರಿಗೆ ಗುಣಮಟ್ಟದ ತೊಗರಿಬೀಜಗಳನ್ನು ವಿತರಿಸಲಾಯಿತು.ದ್ವಿದಳಧಾನ್ಯಗಳ ಉತ್ಪಾದನೆ ಹೆಚ್ಚಿಸುವುದು ಹಾಗೂ ರಾಜ್ಯವನ್ನು ಈ ಕ್ಷೇತ್ರದಲ್ಲಿ ಸ್ವಾವಲಂಬಿಯನ್ನಾಗಿಸುವ ಉದ್ದೇಶದಿಂದ ಆತ್ಮನಿರ್ಭರ ಪಲ್ಸ ಅಭಿಯಾನ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದರು.ರೈತರು ವೈಜ್ಞಾನಿಕ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳಬೇಕು ಹಾಗೂ ಉತ್ತಮ ಇಳುವರಿ ಪಡೆಯಲು ಕೃಷಿ ಇಲಾಖೆಯ ತಜ್ಞರ ಸಲಹೆಗಳನ್ನು ಅನುಸರಿಸಬೇಕು ಎಂದು ಕಾರ್ಯಕ್ರಮದಲ್ಲಿ ಮಾರ್ಗದರ್ಶನ ನೀಡಲಾಯಿತು. ಕಾರ್ಯಕ್ರಮದಲ್ಲಿ ಜಂಟಿ ಕೃಷಿ ನಿರ್ದೇಶಕರಾದ ಸಮದ್ ಪಟೇಲ್, ಸಹಾಯಕ ಕೃಷಿ ನಿರ್ದೇಶಕರು ಅರುಣ ಕುಮಾರ ಮೂಲಿಮನಿಮುಖಂಡರಾದ ದಶರಥ ಬಾಬು ಒಂಟಿ, ಸಂತೋಷ್ ಪಾಟೀಲ್ ಡನ್ನೂರ್, ಲಿಂಗರಾಜ್‌ಕಣ್ಣಿ, ಬಸವರಾಜ್ ಶರಣಪ್ಪಜೀವಣಗಿ, ಅಂಬರಾಯ ಸೇರಿದಂತೆ ರೈತರು ಹಾಗೂ ಕೃಷಿ ಇಲಾಖೆ ಯ ಅಧಿಕಾರಿಗಳಾದ ಶ್ರೀದೇವಿ ಹಜೇರಿ, ಅಜಯ ಬಿ, ಶಿವರಾಯ, ಕಾಶಿರಾಯ ಉಪಸ್ಥಿತರಿದ್ದರು.

# ಶಿಕ್ಷಣ ಕ್ಷೇತ್ರಕ್ಕೆ ಶೇಷಗಿರಿ ಪಿಕಳೆ ಅವರ ಕೊಡುಗೆ ಅಪಾರ : ಅಶೋಕ ಜೋಶಿ

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ



ಶ್ರೇಷ್ಠ ಶಿಕ್ಷಣ ತಜ್ಞರಾದ ಶೇಷಗಿರಿ ಪಿಕಳೆಯವರು ಸಾಂಪ್ರದಾಯಿಕ ಕಟ್ಟುಬಾಧ್ಯತೆಯ ವಿರೋಧಿಗಳಾಗಿದ್ದು ,ಕರ್ತವ್ಯನಿಷ್ಠೆ,ಮಾನವೀಯ ವ್ಯಕ್ತಿತ್ವವನ್ನು ಹೊಂದಿದ್ದ ಇವರು ಎಲ್ಲರಲ್ಲೂ ಆತ್ಮವಿಶ್ವಾಸ ತುಂಬುತ್ತಾ ಎಲೆ ಮರೆಯ ಕಂಪನ್ನು ಸೂಸುವ ಹೂವಾಗಿ ಅತ್ಯಂತ ದೊಡ್ಡ ಸಂಸ್ಥೆಯನ್ನು ಕಟ್ಟು ಬೆಳೆಸಿದ ಚಿರಂಜೀವಿಯಾಗಿದ್ದಾರೆ ಎಂದು ಪಿ.ಟಿ.ಟಿ.ಐ ಅಂಕೋಲಾದ ನಿವೃತ್ತ ಉಪನ್ಯಾಸಕ ಡಾ. ಅಶೋಕ ಎಂ. ಜೋಶಿ ಹೇಳಿದರು. ಪಟ್ಟಣದ ಕೆ.ಎಲ್.ಇ ಸಮೂಹ ಸಂಸ್ಥೆಗಳಲ್ಲಿ ಆಯೋಜಿಸಿದ್ದ ಶೇಷಗಿರಿ ಪಿಕಳೆಯವರ 106ನೇ ಜಯಂತಿ ಕಾರ್ಯಕ್ರಮದಲ್ಲಿ ಗಿರಿ ಪಿಕಳೆಯವರ ಮೂರ್ತಿಗೆ ಪುಷ್ಪಾರ್ಚನೆ ಮಾಡಿ ಅವರು ಮಾತನಾಡಿದರು.

ಅಧ್ಯಕ್ಷತೆ ವಹಿಸಿದ ಕೆ.ಎಲ್.ಇ ಸಮೂಹ ಸಂಸ್ಥೆಗಳ ಸದಸ್ಯೆ ಡಾ.ಮಿನಲ ನಾರ್ವೇಕರ ಅವರು ಪಿಕಳೆ ದಂಪತಿಗಳು ಕಟ್ಟಿಕೊಟ್ಟ ಭವ್ಯ ಸಾಮ್ರಾಜ್ಯವನ್ನು ಉಳಿಸಿ ಬೆಳೆಸಿಕೊಂಡು ಹೋಗುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು. ಪ್ರಾಚಾರ್ಯ ಡಾ. ವಿನಾಯಕ ಜಿ. ಹೆಗಡೆ ಸ್ವಾಗತಿಸಿದರು. ಉಪನ್ಯಾಸಕಿ ಡಾ. ಪುಷ್ಪಾ ನಾಯ್ಕ ಪರಿಚಯಿಸಿದರು. ಉಪನ್ಯಾಸಕಿಯರಾದ ಪೂರ್ವಿ ಹಳಗೇಕರ ನಿರೂಪಿಸಿದರು. ಸ್ವಾತಿ ಅಂಕೋಲೆಕರ ವಂದಿಸಿದರು.

# ಉದ್ದು ಬೆಳೆಯ ಬಿತ್ತನೆ ಬೀಜಗಳ ಕಿರುಚೀಲ ವಿತರಣೆ



• ಮಲ್ಲಮ್ಮ ನುಡಿ ವಾರ್ತೆ ಬೀದರ

ಜೂ 13 : ಬಿತ್ತನೆ ಬೀಜಗಳ ಸೂಕ್ತ ಆಯ್ಕೆ, ಬೀಜೋಪಚಾರ, ಬೀಜ ಕಠಿಣಗೊಳಿಸುವ ಹಾಗೂ ಸಮಗ್ರ, ಸಾವಯವ ಕೃಷಿ ಪದ್ಧತಿ ಅನುಸರಣೆ ಕುರಿತು ರೈತರಿಗೆ ಮಾಹಿತಿ ನೀಡಿಲಾಯಿತು ಎಂದು ಬೀದರ ಕೃಷಿ ಇಲಾಖೆ ಉಪ ಕೃಷಿ ನಿರ್ದೇಶಕರಾದ ಶ್ರೀ ಅನ್ಸಾರಿ ಎಂ.ಎ.ಕೆ ಅವರು ಹೇಳಿದರು.ಬೀದರ ತಾಲ್ಲೂಕಿನ ಮನ್ನಳ್ಳಿ ಹೊಬಳಿಯ ರೈತ ಸಂಪರ್ಕ ಕೇಂದ್ರದ ವ್ಯಾಪ್ತಿಯಲ್ಲಿ ಬರುವ ನಾಗೋರಾ ಗ್ರಾಮದಲ್ಲಿ ರೈತರಿಗೆ ದ್ವಿದಳಧಾನ್ಯಗಳಲ್ಲಿ ಆತ್ಮನಿರ್ಭರತೆ ಅಭಿಯಾನ ಯೋಜನೆಯಡಿ ತೊಗರಿ ಹಾಗೂ ಉದ್ದು ಬೆಳೆಯ ಬಿತ್ತನೆ ಬೀಜಗಳ ಕಿರುಚೀಲ ವಿತರಿಸಿ ಅವರು ಮಾತನಾಡಿದರು.

ಬಿತ್ತನೆ ಬೀಜಗಳ ಸೂಕ್ತ ಆಯ್ಕೆ, ಬೀಜೋಪಚಾರ, ಬೀಜ ಕಠಿಣಗೊಳಿಸುವ ಹಾಗೂ ಸಮಗ್ರ, ಸಾವಯವ ಕೃಷಿ ಪದ್ಧತಿ ಅನುಸರಣೆ ಕುರಿತು ರೈತರಿಗೆ ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಬೀದರ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕಿ ಶ್ರೀಮತಿ ಆರತಿ ಪಾಟೀಲ್, ಮನ್ನಳ್ಳಿ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ವಿಜಯಕುಮಾರ ಸಿರಂಜೆ ನೀರೂಪಿಸಿದರು, ಬಗದಲ್, ಕಮಠಾಣ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿಗಳಾದ ಅಂಬುಜಾ, ಸೌಮ್ಯ, ನಾಗೋರಾ ಗ್ರಾಮದ ಪಿ.ಕೆ.ಪಿ.ಎಸ್ ನ ಅಧ್ಯಕ್ಷರಾದ ರಾಜಕುಮಾರ ರಾಯಗೊಂಡ, ಪ್ರಗತಿಪರ ರೈತರಾದ, ವೀರಶೆಟ್ಟಿ ಭಂಗೂರ ಸಂಜೀವಕುಮಾರ ಯಾಕತಪೂರ, ಗ್ರಾಮದ ರೈತರು, ಬೀದರ ದಕ್ಷಿಣ ಕ್ಷೇತ್ರದ. ರೈತ ಸಂಪರ್ಕ ಕೇಂದ್ರಗಳಾದ ಬಗದಲ್, ಕಮಠಾಣ ಮತ್ತು ಬೀದರ ದಕ್ಷಿಣ ರೈತರು ಉಪಸ್ಥಿತರಿದ್ದರು.

# ಮೊಹರಂ ಹಬ್ಬ ಶಾಂತಿಯುತ ಆಚರಣೆಗೆ ಎಲ್ಲರ ಸಹಕಾರ ಅಗತ್ಯ




• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

13 ಮೊಹರಂ ಹಬ್ಬವನ್ನು ಶಾಂತಿ, ಸೌಹಾರ್ದತೆ ಮತ್ತು ಸಹೋದರತ್ವದ ಸಂಕೇತವಾಗಿ ಆಚರಿಸಬೇಕು. ಯಾವುದೇ ರೀತಿಯ ಅಹಿತಕರ ಘಟನೆಗಳಿಗೆ ಅವಕಾಶ ನೀಡದೆ, ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಸಾರ್ವಜನಿಕರು ಹಾಗೂ ವಿವಿಧ ಸಮುದಾಯದ ಮುಖಂಡರು ಪೊಲೀಸ್ ಇಲಾಖೆಗೆ ಸಹಕರಿಸಬೇಕು ಎಂದು ನಗರ ಪೊಲೀಸ್ ಠಾಣೆಯ ಪಿಐ ಪ್ರಕಾಶ್ ಯಾತನೂರು ತಿಳಿಸಿದರು.

ನಗರ ಪೊಲೀಸ್ ಠಾಣೆ ಆವರಣದಲ್ಲಿ ಮೊಹರಂ ಹಬ್ಬದ ಪ್ರಯುಕ್ತ ಆಯೋಜಿಸಿದ್ದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಮೆರವಣಿಗೆಗಳು ಹಾಗೂ ಧಾರ್ಮಿಕ ಕಾರ್ಯಕ್ರಮಗಳನ್ನು ನಿಗದಿತ ಮಾರ್ಗಸೂಚಿಗಳ ಪ್ರಕಾರ ನಡೆಸಬೇಕು. ವದಂತಿಗಳಿಗೆ ಕಿವಿಗೊಡದೆ, ಯಾವುದೇ ಸಮಸ್ಯೆ ಕಂಡುಬಂದಲ್ಲಿ ತಕ್ಷಣವೇ ಪೊಲೀಸರಿಗೆ ಮಾಹಿತಿ ನೀಡುವಂತೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ಗಂಗಾವತಿ ನಗರ ಪೊಲೀಸ್ ಠಾಣೆ ಪಿಎ ಟಿ.ಜಿ.ನಾಗರಾಜ, ಇಸ್ಮಾಯಿಲ್, ಜೆಸ್ಕಾಂ ಅಧಿಕಾರಿ ಎ.ಮಂಜುನಾಥ, ನಗರಸಭೆ ಸಿಬ್ಬಂದಿ ಷಣ್ಮುಖಪ್ಪ, ನಗರ ಪೊಲೀಸ್ ಠಾಣೆ ಎ.ಎಸ್.ಐ ಶಿವಶರಣ,ವೀರೇಶ ಸಂಕನೂರು, ನಗರಸಭೆ ಮಾಜಿ ಅಧ್ಯಕ್ಷ ಹನುಮಂತಪ್ಪ ನಾಯಕ್,ಕರವೇ ಜಿಲ್ಲಾಧ್ಯಕ್ಷ ಪಂಪಣ್ಣ ನಾಯಕ್,ದೇವರ ಮನಿ ಹುಲಗಪ್ಪ, ಮುಸ್ಲಿಂ ಸಮಾಜದ ಮುಖಂಡರಾದ ರಾಜಹುಸೇನಸಾಬ,ಹೈದರ್ ಅಲಿಸಾಬ,ಈರಣ್ಣ ಹಂಚಿನಾಳ,ಮಾರುತಿ ಹಂಚಿನಾಳ,ಸೈಯದ್

ಸಜ್ಜಾ ದ್,ಹುಸೇನಸಾಬ,ಅಮೀನಸಾಬ,

ಹೊನ್ನೂರಲ್ಲಿ ಹಿರೇಜಂತಕಲ್, ಹಾಗೂ

ಸಭೆಯಲ್ಲಿ ವಿವಿಧ ಸಮುದಾಯಗಳ ಮುಖಂಡರು, ಸಾರ್ವಜನಿಕರು ಹಾಗೂ ಪೊಲೀಸ್ ಸಿಬ್ಬಂದಿ ಉಪಸ್ಥಿತರಿದ್ದರು.

# ಭವಿಷ್ಯದಲ್ಲಿ ಸಾಧನೆ ಮಾಡಲು ಸಮಯಕ್ಕೆ ಮಹತ್ವ ನೀಡಿ : ರಮಾನಂದ ನಾಯಕ



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ವಿದ್ಯಾರ್ಥಿಗಳು ಭವಿಷ್ಯದಲ್ಲಿ ಉತ್ತಮ ಸಾಧನೆ ಮಾಡಲು ಸಮಯಕ್ಕೆ ಹೆಚ್ಚು ಮಹತ್ವ ನೀಡಬೇಕು. ಇರುವ ಸಮಯವನ್ನು ಸರಿಯಾಗಿ ಉಪಯೋಗಿಸಿಕೊಳ್ಳಬೇಕು ಎಂದು ಪಿ.ಎಂ. ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ರಮಾನಂದ ನಾಯಕ ಹೇಳಿದರು.

ಪಟ್ಟಣದ ಕೆಎಲ್‌ಇ ಸಂಸ್ಥೆಯ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಪ್ರಸಕ್ತ ಸಾಲಿನ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕೆಎಲ್‌ಇ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಸೋಮಶೇಖರ ನಾಯಕ, ಪದವಿ ವಿಭಾಗದ ಪ್ರಾಚಾರ್ಯ ಅಶ್ವತ್ಥನಾರಾಯಣ ಹೆಗಡೆ, ಸ್ಥಳೀಯ ಆಡಳಿತ ಮಂಡಳಿಯ ಸದಸ್ಯೆ ಡಾ. ಮಿನಲ್ ನಾರ್ವೇಕರ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಬಿ.ಕಾಂ. ಅಂತಿಮ ವರ್ಷದ ವಿದ್ಯಾರ್ಥಿನಿ ಚಂದ್ರಿಕಾ ಗೌಡ ಅವರು 20 ಕಿ.ಮೀ ನಡಿಗೆಯಲ್ಲಿ ವಿಶ್ವವಿದ್ಯಾಲಯಕ್ಕೆ ಪ್ರಥಮ ಸ್ಥಾನ ಗಳಿಸಿದ್ದಕ್ಕಾಗಿ ಕಾಲೇಜಿನ ಪರವಾಗಿ ಸನ್ಮಾನಿಸಲಾಯಿತು. ಉಪನ್ಯಾಸಕಿ ಜಯಾ ಗಾಂವಕರ ಸ್ವಾಗತಿಸಿದರು. ಕಾಂಚನಾ ನಾಯ್ಕ ಪರಿಚಯಿಸಿದರು. ಜ್ಞಾನೇಶ್ವರಿ ನಾಯ್ಕ ನಿರೂಪಿಸಿದರು.

# ಕೃತಗ್ಯತಾ ಟ್ರಸ್ಟ್ ರವರಿಂದ 12 ಸಾವಿರ ನೋಟ್ ಪುಸ್ತಕಗಳ ಕೊಡುಗೆ

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ



ಪಟ್ಟಣದ ಸಮೀಪವಿರುವ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಕೆಸರಟ್ಟಿ ಗ್ರಾಮದಲ್ಲಿ ಕೃತಗ್ಯತಾ ಟ್ರಸ್ಟ್ ಬೆಂಗಳೂರು ಇವರು ಉಚಿತವಾಗಿ ಕೊಡ ಮಾಡಿರುವ 12,000 ನೋಟ್ ಪುಸ್ತಕಗಳು ಮತ್ತು ಬರವಣಿಗೆ ಸಾಮಗ್ರಿಗಳ ವಿತರಣಾ ಕಾರ್ಯಕ್ರಮ ಜರುಗಿತು.. ಶಾಲಾ ಮಕ್ಕಳಿಗೆ ನೋಟ್ ಪುಸ್ತಕಗಳು & ಬರವಣಿಗಾ ಸಾಮಗ್ರಿಗಳನ್ನು ವಿತರಿಸಿ ಮಾತನಾಡಿದ ಮಾನ್ಯ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಶ್ರೀಮತಿ ಸುಜಾತಾ ಹುನೂರು ರವರು ಕೃತಗ್ಯತಾ ಟ್ರಸ್ಟ್ ರವರು ನಮ್ಮ ಲಿಂಗಸುಗೂರು ತಾಲೂಕಿಗೆ ವರವಾಗಿದ್ದು ನಮ್ಮ ಭಾಗದ ಅನೇಕ ಶಾಲೆಗಳಿಗೆ ಹಲವಾರು ಶೈಕ್ಷಣಿಕ ಕೊಡುಗೆಗಳನ್ನು ನೀಡಿದ್ದು ಇಂದು 12000 ನೋಟ್ ಪುಸ್ತಕಗಳನ್ನು ಶಾಲಾ ಆರಂಭದಲ್ಲಿಯೇ ಮಕ್ಕಳಿಗೆ ವಿತರಿಸುತ್ತಿರುವುದು ಅತೀವ ಸಂತಸ ತಂದಿದೆ ಎಂದು ತಿಳಿಸಿದರು.. ಕೃತಗ್ಯತಾ ಟ್ರಸ್ಟ್ ಇದರ ಸ್ಥಾಪಕರಾದ ಶ್ರೀಮತಿ ಅರುಣಾ ದಿವಾಕರ್ ಮಾತನಾಡಿ ಕಲ್ಯಾಣ ಕರ್ನಾಟಕದ ಅದರಲ್ಲಿ ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದುತ್ತಿರುವ ಲಿಂಗಸುಗೂರು ತಾಲೂಕಿನ ಮಕ್ಕಳಿಗೆ ಶಾಲಾ ಆರಂಭದಲ್ಲಿಯೇ ಸರಕಾರದ ಉಚಿತ ಪಠ್ಯಪುಸ್ತಕ ಹಾಗೂ ಸಮವಸ್ತ್ರದ ಜೊತೆಗೆ ನೋಟ್ ಬುಕ್ ಗಳನ್ನು ನಮ್ಮ ಸಂಸ್ಥೆಯ ವತಿಯಿಂದ ನೀಡುತ್ತಿರುವುದು ಹೆಮ್ಮೆಯ ವಿಷಯವಾಗಿದ್ದು ಮಕ್ಕಳ ಶೈಕ್ಷಣಿಕ ಕಲಿಕೆಗೆ ಬಹಳ ಉಪಯುಕ್ತವಾಗಲಿದ್ದು, ಅಲ್ಲದೇ ಮಕ್ಕಳು ಉತ್ಸಾಹದಿಂದ ಶಾಲೆಗೆ ಬರಲು ಈ ನೋಟ್ ಬುಕ್ ಡ್ರೈವ್ ಮಹತ್ವದ ಪಾತ್ರ ವಹಿಸಲಿದೆ ಎಂದು ಅಭಿಪ್ರಾಯಪಟ್ಟರು..

ಈ ಸಂದರ್ಭದಲ್ಲಿ ಕೆಸರಟ್ಟಿ ಶಾಲೆಯ ಅಕ್ಷರವನ & ಶಾಲೆಯ ಉತ್ತಮ ಕಲಿಕಾ ವಾತಾವರಣವು ಮಾದರಿಯಾಗಿದ್ದು ಪ್ರಶಂಸೆ ವ್ಯಕ್ತಪಡಿಸಿದರು..ಪ್ರಾಸ್ತಾವಿಕವಾಗಿ ಮಾತನಾಡಿದ ಜನತಾಪುರ ಶಾಲೆಯ ಶಿಕ್ಷಕ ಮೌನೇಶ್ ಆಚಾರ್ ಕೃತಗ್ಯತಾ ಸಂಸ್ಥೆಯ 2025 – 26ನೇ ಸಾಲಿನಲ್ಲಿ ತಾಲೂಕಿನ ಅನೇಕ ಶಾಲೆಗಳಿಗೆ ಗ್ರೀನ್ ಬೋರ್ಡ್ ಗಳು, ಪ್ರಯೋಗಾಲಯ ಉಪಕರಣಗಳು, ಲ್ಯಾಪ್ ಟಾಪ್ ಕೊಡುಗೆಗಳು, ಅಲ್ಲದೇ ಶಾಲಾ ಸೌಂದರೀಕರಣ ಹೆಚ್ಚಿಸಿದ ಕಾರ್ಯಗಳ ಪಕ್ಷಿನೋಟ ದ ವರದಿ ಪ್ರಸ್ತುತ ಪಡಿಸಿದರು.. ಜೊತೆಯಲ್ಲಿ ಈ ವರ್ಷವೂ ಸಹ ಇನ್ನೂ ಹೆಚ್ಚಿನ ರೀತಿಯಲ್ಲಿ ನಮ್ಮ ತಾಲೂಕಿಗೆ ಶೈಕ್ಷಣಿಕ ಸೌಲಭ್ಯಗಳನ್ನು ದೊರಕಿಸಿಕೊಡಬೇಕೆಂದು ಬೇಕೆಂದು ಈ ಸಂದರ್ಭದಲ್ಲಿ ಮನವಿ ಮಾಡಿದರು.

ಸದರಿ ಶಾಲೆಯ ಪ್ರಭಾರಿ ಮುಖ್ಯ ಶಿಕ್ಷಕರಾದ ಶ್ರೀ ವೀರೇಶ್ ತೇರಾದಾಳ್ ಕಾರ್ಯಕ್ರಮ ನಿರೂಪಿಸಿದರು..

ಸದರಿ ಕಾರ್ಯಕ್ರಮದಲ್ಲಿ ಶಾಲಾ ಭೂದಾನಿಗಳಾದ ಹನಮನಗೌಡ ಮಾಲಿಪಾಟೀಲ, ಎಸ್‌ಡಿಎಂಸಿ ಅಧ್ಯಕ್ಷರಾದ ಹನುಮಂತ ಮರದ, ಉಪಾಧ್ಯಕ್ಷರಾದ ಹುಲಗಪ್ಪ, ಸದಸ್ಯರಾದ ಸುರೇಶ್ ಶಿವಪುತ್ರಪ್ಪ, ಶ್ರೀಮತಿ ಹನುಮಂತಿ, ಗ್ರಾಮ ಪಂಚಾಯತ್ ಮಾಜಿ ಸದಸ್ಯರಾದ ಹನುಮಂತ ಕುರಿ, ಇಲಾಖೆಯ ಶಿಕ್ಷಣ ಸಂಯೋಜಕರಾದ ಬಸವರಾಜ್ ಗುಡಿಹಾಳ್, ಸಮೂಹ ಸಂಪನ್ಮೂಲ ವ್ಯಕ್ತಿಗಳಾದ ಮುಕ್ತಮ್ ಸಾಬ್ ತಾಳಿಕೋಟೆ, ಯಾಸೀನ್, ಕ್ಷೇತ್ರ ಸಂಪನ್ಮೂಲ ವ್ಯಕ್ತಿಗಳಾದ ಅಪ್ಪಣ್ಣ ಸರ್, ಮುಖ್ಯ ಶಿಕ್ಷಕರಾದ ಶ್ರೀ ಹುಲ್ಲಪ್ಪವನಕಿಹಾಳ, ಶಾಲಾ ಬೋಧಕ ಸಿಬ್ಬಂದಿಯವರಾದ ಶ್ರೀಮತಿ ವಿಶಾಲಾಕ್ಷಿ, ಶ್ರೀಮತಿ ಸುವರ್ಣಾ, ಶ್ರೀ ನಬಿಸಾಬ್, ಶ್ರೀ ಅಮರೇಶ್, ಕೆಸರಟ್ಟಿ ಗ್ರಾಮದ ಪಾಲಕ ಪೋಷಕರು, ತಾಯಂದಿರು ಹಾಗೂ ಶಾಲಾ ಮಕ್ಕಳು ಉಪಸ್ಥಿತರಿದ್ದರು.

# ಸಾರಿಗೆ ಇಲಾಖೆಯ ದಂಡ ಬಾಕಿ ಪ್ರಕರಣಗಳಿಗೆ ಶೇ.50 ವಿನಾಯತಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಸಾರಿಗೆ ಇಲಾಖೆಯ ದಂಡ ಬಾಕಿ ಪ್ರಕರಣಗಳಿಗೆ ಶೇ.50ರ ವಿನಾಯತಿಯನ್ನು ನೀಡಲಾಗಿದೆ ಎಂದು ಕೊಪ್ಪಳ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಾದ ಕೆ.ದಾಮೋದರ್ ಅವರು ತಿಳಿಸಿದ್ದಾರೆ.ಸರ್ಕಾರದ ಆದೇಶದಂತೆ ಕರ್ನಾಟಕ ರಾಜ್ಯದ ಸಾರಿಗೆ ಇಲಾಖೆಯಲ್ಲಿ 1991–1992 ರಿಂದ 2021–2022ರ ಅವಧಿಯಲ್ಲಿ ಮೋಟಾರು ವಾಹನ ಕಾಯ್ದೆ, ನಿಯಮಗಳ ಉಲ್ಲಂಘನೆ ಸಂಬಂದ ದಾಖಲಾಗಿ ಬಾಕಿ ಉಳಿದಿರುವ ಡಿ.ಎಸ್.ಎ.(ಇಲಾಖಾ ಶಾಸನ ಬದ್ಧ) ಪ್ರಕರಣಗಳ ದಂಡದ ಮೊತ್ತದಲ್ಲಿ 50% (ಶೇಕಡಾ ಐವತ್ತರಷ್ಟು ಮಾತ್ರ) ರಷ್ಟು ರಿಯಾಯತಿಯನ್ನು ಇದೇ ಜೂನ್ 21 ರಿಂದ ಜುಲೈ 10ರ ವರೆಗೆ (20 ದಿನಗಳವರೆಗೆ) ಕಾಲಾವಕಾಶವನ್ನು ನೀಡಿ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ. ವಾಹನ ಮಾಲೀಕರು, ಚಾಲಕರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಕೊಪ್ಪಳ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

# ಅಭಿವೃದ್ಧಿ ಕಾರ್ಯಕ್ಕೆ ಬಯ್ಯಾಪೂರರಿಂದ ಭೂಮಿ ಪೂಜೆ

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ



ತಾಲೂಕಿನ ವಿವಿದ ಗ್ರಾಮಗಳ ಗ್ರಾಮೀಣ ಅಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯ sep Tsp ಯೋಜನೆಯ ಹಾಗೂ ಡಿ ಎಮ್ ಎಫ್( R¤d ನಿಧಿ) ಯೋಜನೆಯಡಿಯಲ್ಲಿ ಒಟ್ಟು 50 ಲಕ್ಷ ರೂ ವೆಚ್ಚದಲ್ಲಿ ಯರಡೋಣ, ಗ್ರಾಮದ ಸರಕಾರಿ ಶಾಲಾ ಕಟ್ಟಡಕ್ಕೆ 20 ಲಕ್ಷ, ಹಾಗೂ ಜಲದುರ್ಗ, ಹಂಚಿನಾಳ, ಯಳಗುಂದಿ, ಸಿ ಸಿ ರಸ್ತೆಗಳಿಗೆ ಅಭಿವೃದ್ಧಿಯ ಹರಿಕಾರರು ಶರಣಗೌಡ ಪಾಟೀಲ್ ಬಯ್ಯಾಪೂರ ಭೂಮಿ ಪೂಜೆ ಮಾಡುವ ಮೂಲಕ ಚಾಲನೆ ನೀಡಿದರು.

ನಂತರ ಮಾತನಾಡಿ ಈ ಎಲ್ಲಾ ಗ್ರಾಮಗಳ ಕಾಮಗಾರಿಗಳು ಗುಣಮಟ್ಟದಿಂದ ಕುಡಿರಬೇಕೆಂದು ಕೆ ಆರ್ ಐ ಡಿ ಎಲ್ ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸುಜಾತ ಹುನೂರ, ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷರು ಭೂಪನಗೌಡ ಪಾಟೀಲ್ ಕರಡಕಲ್, ಜಿಲ್ಲಾ ಗ್ಯಾರಂಟಿ ಯೋಜನೆ ಅಧ್ಯಕ್ಷರು ಪಾಮಯ್ಯ ಮುರಾರಿ, ಬಸವರಾಜ ಗಣೇಕಲ್, ಸೋಮಶೇಖರ ಐದನಾಳ,ಬಸವರಾಜ ಬಸಾಪೂರ, ಜಗದೀಶ ಹಾಲಬಾವಿ ,ಪ್ರಕಾಶ ಕುರಿ, ಗದ್ದೆಪ್ಪ ಚಿತ್ತಾಪೂರ, ಮಂಜುಳಾ ಚಲವಾದಿ ಮುಖ್ಯಗುರುಗಳು, ಮಂಜು ಐದನಾಳ, ಯಲ್ಲಪ್ಪ ಹಾಲಬಾವಿ, ಬಾಲಪ್ಪ ಹಂಚಿನಾಳ, ನಿಂಗನಗೌಡ ಪಾಟೀಲ್, ಅಮರೇಗೌಡ ಪಾಟೀಲ್ ಯರಡೋಣ, ಬಶೇಟ್ಟೆಪ್ಪ ಹಂಚಿನಾಳ, ಮಾನಪ್ಪ ಹಂಚಿನಾಳ, ಮರಿಯಪ್ಪ ಜಲದುರ್ಗ, ವಿಧಾನ ಪರಿಷತ್ ಸದಸ್ಯರು ಆಪ್ತ ಕಾರ್ಯದರ್ಶಿ ಚನ್ನಾರೆಡ್ಡಿ ಬಿರಾದರ ಹಾಗೂ ಊರಿನ ಕಾರ್ಯಕರ್ತರು ಇನಿತರರು ಇದ್ದರು.

# ನೋವಿನಲ್ಲಿರುವ ಕುಟುಂಬಸ್ಥರಿಗೆ ಶಾಸಕ ಪ್ರಭು ಚವ್ಹಾಣ ಧೈರ್ಯ

• ಮಲ್ಲಮ್ಮ ನುಡಿ ವಾರ್ತೆ ಔರಾದ

ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಹೈದರಾಬಾದ್‌ನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಶೆಂಬೆಳ್ಳಿ ಗ್ರಾಮದ ವಿಜಯಶ್ರೀ ವೈಜಿನಾಥ ಮೇತ್ರೆ ಅವರ ಆರೋಗ್ಯವನ್ನು ದೂರವಾಣಿ ಮೂಲಕ ವಿಚಾರಿಸಿದರು.


ಪೂರ್ವನಿಗದಿತ ಕಾರ್ಯಕ್ರಮದ ನಿಮಿತ್ತ ಆಂಧ್ರಪ್ರದೇಶಕ್ಕೆ ತೆರಳಿರುವ ಶಾಸಕರು, ಆಸ್ಪತ್ರೆಯಲ್ಲಿರುವ ಬಾಲಕಿಯ ಪೋಷಕರನ್ನು ದೂರವಾಣಿ ಮೂಲಕ ಸಂಪರ್ಕಿಸಿ ಆರೋಗ್ಯದ ಕುರಿತು ಮಾಹಿತಿ ಪಡೆದರು. ಬಳಿಕ ಚಿಕಿತ್ಸೆ ನೀಡುತ್ತಿರುವ ವೈದ್ಯರೊಂದಿಗೆ ಮಾತನಾಡಿ, ಮಗುವಿನ ಆರೋಗ್ಯ ಸ್ಥಿತಿಗತಿ ಮತ್ತು ಚಿಕಿತ್ಸೆಯ ವಿವರಗಳನ್ನು ಪಡೆದರು. ನನ್ನ ಕ್ಷೇತ್ರದ ಬಾಲಕಿಯನ್ನು ಸರಿಯಾಗಿ ನೋಡಿಕೊಳ್ಳಬೇಕು. ಉತ್ತಮ ಚಿಕಿತ್ಸೆ ನೀಡಿ ಶೀಘ್ರ ಗುಣಮುಖವಾಗಿಸಬೇಕೆಂದು ಸೂಚಿಸಿದರು.

ಒಂದೇ ಕುಟುಂಬದ ಇಬ್ಬರು ಮಕ್ಕಳು ಮೃತಪಟ್ಟು ಒಬ್ಬರು ಆಸ್ಪತ್ರೆಯಲ್ಲಿರುವ ಘಟನೆ ತೀವ್ರ ಆಘಾತ ಉಂಟುಮಾಡಿದೆ. ಇವರ ಕುಟುಂಬದ ಆರ್ಥಿಕ ಪರಿಸ್ಥಿತಿ ಅತ್ಯಂತ ದುರ್ಬಲವಾಗಿದ್ದು, ಅವರಿಗೆ ಹೇಳಿಕೊಳ್ಳುವಂತಹ ಕೃಷಿ ಭೂಮಿಯೂ ಇಲ್ಲ. ದಿನಗೂಲಿ ಕೆಲಸ ಮಾಡಿ ಜೀವನ ಸಾಗಿಸುತ್ತಿರುವ ಇಂತಹ ಬಡ ಕುಟುಂಬಕ್ಕೆ ಒಂದೇ ವೇಳೆ ಇಷ್ಟೊಂದು ದುಃಖ ಮತ್ತು ಸಂಕಷ್ಟ ಎದುರಾಗಿರುವುದು ಅತ್ಯಂತ ನೋವಿನ ಸಂಗತಿಯಾಗಿದೆ ಎಂದು ಹೇಳಿದರು.

ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ವಿಜಯಶ್ರೀ ಅವರ ಚಿಕಿತ್ಸಾ ವೆಚ್ಚವನ್ನು ತಾವು ಭರಿಸುವುದಾಗಿ ಭರವಸೆ ನೀಡಿದ ಶಾಸಕರು, ವೈಯಕ್ತಿಕವಾಗಿ ಅಗತ್ಯ ಸಹಾಯ–ಸಹಕಾರ ನೀಡುತ್ತೇನೆ. ಮಕ್ಕಳ ಮುಂದಿನ ವಿದ್ಯಾಭ್ಯಾಸ, ಮದುವೆ ಸೇರಿದಂತೆ ಕುಟುಂಬಕ್ಕೆ ಅಗತ್ಯವಿರುವ ಎಲ್ಲ ರೀತಿಯ ನೆರವು ಒದಗಿಸುತ್ತೇನೆ.

# ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ, ಕಾನೂನು ಅರಿವು-ನೆರವು

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಕಡ್ಡಾಯ ಶಿಕ್ಷಣ ಪ್ರತಿಯೊಬ್ಬ ಮಗುವಿನ ಕಾನೂನುಬದ್ಧವಾದ ಹಕ್ಕಾಗಿದ್ದು, ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡುವುದರಿಂದ ಮಾತ್ರ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಸಾಧ್ಯವಾಗುತ್ತದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಕೊಪ್ಪಳ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸಂಘದ ಅಧ್ಯಕ್ಷರಾದ ಡಾ. ಸುರೇಶ ಬಿ. ಇಟ್ನಾಳ ಅವರು ಹೇಳಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಕ್ಷಣ ಇಲಾಖೆ, ಯುನಿಸೆಫ್ ಜಿಲ್ಲಾ ಮಕ್ಕಳ ರಕ್ಷಣಾ ಯೋಜನೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸಂಘ, ಕೊಪ್ಪಳ ಇವರುಗಳ ಸಂಯುಕ್ತ ಆಶ್ರಯದಲ್ಲಿ ಶುಕ್ರವಾರ (ಜೂ.12ರಂದು) ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಆಯೋಜಿಸಲಾಗಿದ್ದ "ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ" ಹಾಗೂ ಕಾನೂನು ಅರಿವು–ನೆರವು ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.ಬಾಲಕಾರ್ಮಿಕ ಪದ್ಧತಿಯು ಒಂದು ಸಾಮಾಜಿಕ ಪಿಡುಗಾಗಿದ್ದು, ಇದರಿಂದ ಮಕ್ಕಳ ಶಿಕ್ಷಣದ ಹಕ್ಕನ್ನು ಕಸಿದುಕೊಂಡಂತಾಗುತ್ತದೆ. ಇದಕ್ಕಾಗಿ ಶಿಕ್ಷಣ ಇಲಾಖೆಯ ಪಾತ್ರ ಬಹು ಮುಖ್ಯವಾಗಿದ್ದು, ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕಾರ್ಮಿಕ ಇಲಾಖೆಯ ಅಧಿಕಾರಿಗಳು ಪರಸ್ಪರ ಸಮನ್ವಯ ಸಾಧಿಸಿ ಕಾರ್ಯನಿರ್ವಹಿಸಬೇಕು. ಪೂರ್ವ ಪ್ರಾಥಮಿಕ ಶಿಕ್ಷಣ ನೀಡುವ ಅಂಗನವಾಡಿ ಕೇಂದ್ರಗಳಿಂದ ಪ್ರಾಥಮಿಕ ಶಾಲೆಗಳಿಗೆ ಮಕ್ಕಳು ಪ್ರತಿ ವರ್ಷ ದಾಖಲಾಗುತ್ತಿದ್ದಾರೆಯೇ ಎಂಬುದರ ಬಗ್ಗೆ ಪರಿಶೀಲಿಸಬೇಕು. ಪ್ರಾಥಮಿಕ ಶಾಲಾ ಹಂತದ ಬಳಿಕ ಮುಂದಿನ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಶಿಕ್ಷಣ ಹಂತಕ್ಕೆ ದಾಖಲಾಗುತ್ತಿದ್ದಾರೆಯೇ ಎಂಬುದನ್ನು ಸಹ ಪರಿಶೀಲಿಸಬೇಕು. ಶಾಲೆ ಬಿಟ್ಟ ಮಕ್ಕಳನ್ನು ಪತ್ತೆ ಮಾಡಿ ಅವರಿಗೆ ಪುನಃ ಶಾಲೆಗೆ ಸೇರಿಸುವ ಕೆಲಸವಾಗಬೇಕು. ಅಂದಾಗ ಮಾತ್ರ ಬಾಲಕಾರ್ಮಿಕ ಪದ್ಧತಿಯನ್ನು ತಡೆಗಟ್ಟಿದಂತಾಗುತ್ತದೆ ಎಂದರು.

14 ವರ್ಷದೊಳಗಿನ ಮಕ್ಕಳನ್ನು ಯಾವುದೇ ಕ್ಷೇತ್ರದಲ್ಲಿ ಹಾಗೂ 18 ವರ್ಷದೊಳಗಿನ ಮಕ್ಕಳನ್ನು ಅಪಾಯಕಾರಿ ಕ್ಷೇತ್ರದಲ್ಲಿ ದುಡಿಸಿಕೊಳ್ಳುತ್ತಿರುವುದೇ ಬಾಲಕಾರ್ಮಿಕ ಪದ್ಧತಿಯಾಗಿದೆ. ಇದರಿಂದ ಮಕ್ಕಳ ಬಾಲ್ಯವನ್ನು ಕಸಿದುಕೊಂಡಂತಾಗುತ್ತದೆ. ಬಾಲಕಾರ್ಮಿಕರನ್ನು ದುಡಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗಿದ್ದು, ಯಾವುದೇ ಕ್ಷೇತ್ರಗಳಲ್ಲಿ ಮಕ್ಕಳನ್ನು ದುಡಿಸಿಕೊಳ್ಳುತ್ತಿರುವುದು ಕಂಡುಬಂದಲ್ಲಿ ಕೂಡಲೇ ನಾವೆಲ್ಲರೂ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಮೂಲಕ ದೂರು ನೀಡಿ, ಮಕ್ಕಳ ರಕ್ಷಣೆ ಮಾಡಬೇಕು. ಈ ಬಗ್ಗೆ ವಿಶೇಷವಾಗಿ ಮಕ್ಕಳು ತಮ್ಮ ಸಹಪಾಟಿಗಳನ್ನು ರಕ್ಷಿಸಲು ನಿರ್ಭಯವಾಗಿ ದೂರು ನೀಡಲು ಮುಂದೆ ಬರಬೇಕು. ಪ್ರತಿಯೊಬ್ಬ ವಿದ್ಯಾರ್ಥಿಗಳು ಬಾಲಕಾರ್ಮಿ ಪದ್ಧತಿಯ ಬಗ್ಗೆ ಅರಿತು–ಕೊಂಡು, ಇದರ ಬಗ್ಗೆ ಕನಿಷ್ಠ ಮೂರು ಜನರಿಗೆ ತಿಳುವಳಿಕೆ ನೀಡಬೇಕು ಎಂದು ಮಕ್ಕಳಿಗೆ ಕರೆ ನೀಡಿದರು.

ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ಎಸ್. ದರಗದ ಅವರು ಮಾತನಾಡಿ, ಮಕ್ಕಳು ಅನುಭವಿಸಬೇಕಾದಂತಹ ಹಕ್ಕುಗಳನ್ನು ಕೊಡುವುದು ಮಕ್ಕಳ ತಂದೆ–ತಾಯಿ ಮತ್ತು ಸಮಾಜದಲ್ಲಿನ ಪ್ರತಿಯೊಬ್ಬರ ಕರ್ತವ್ಯವಾಗಿದೆ. 14 ವರ್ಷದವರೆಗೆ ಮಕ್ಕಳಿಗೆ ಊಟ, ಆಟ, ಪಾಠವನ್ನು ಅವರ ಇಚ್ಛೆಯಂತೆ ನೀಡಬೇಕು. ಮಕ್ಕಳು ತಮ್ಮ ಬಾಲ್ಯದ ವಯಸ್ಸಿನಲ್ಲಿ ಹೇಗಿರಬೇಕೋ ಹಾಗೆಯೇ ಇರುವಂತೆ ನೋಡಿಕೊಳ್ಳಬೇಕು. 14 ವರ್ಷದೊಳಗಿನ ಮಕ್ಕಳನ್ನು ಯಾವುದೇ ಕ್ಷೇತ್ರದಲ್ಲಿ ಹಾಗೂ 15 ರಿಂದ 18 ವರ್ಷದೊಳಗಿನ ಮಕ್ಕಳನ್ನು ಅಪಾಯಕಾರಿ ಕ್ಷೇತ್ರದಲ್ಲಿ ದುಡಿಸಿಕೊಂಡಲ್ಲಿ 2 ವರ್ಷ ಜೈಲು ಹಾಗೂ 50 ಸಾವಿರ ರೂ. ದಂಡ ವಿಧಿಸಲು ಕಾನೂನಿನಲ್ಲಿ ಅವಕಾಶವಿದೆ. ಮಕ್ಕಳು ದೇಶದ ಭವಿಷ್ಯದ ಪ್ರಜೆಗಳಾಗಿರುವುದರಿಂದ ಅವರ ಸರ್ವತೋಮುಖ ಅಭಿವೃದ್ಧಿಗೆ ಪೂರಕವಾಗಿ ನಮ್ಮ ಸಮಾಜವನ್ನು ರೂಪಿಸಬೇಕು. ಸಮಾಜದ ಅನಿಷ್ಟ ಪದ್ಧತಿಯಾದ ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗಾಗಿ ಎಲ್ಲರೂ ಶ್ರಮಿಸಬೇಕು ಎಂದರು.

ಜಿಲ್ಲಾ ಕಾರ್ಮಿಕ ಅಧಿಕಾರಿಗಳಾದ ಸುಧಾ ಗರಗ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಬಾಲಕಾರ್ಮಿ ಪದ್ಧತಿಯಿಂದ ದೇಶದ ಅಭಿವೃದ್ಧಿ ಮತ್ತು ಮಾನವ ಅಭಿವೃದ್ಧಿ ಕುಂಠಿತವಾಗುತ್ತದೆ. ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಪದ್ಧತಿಯನ್ನು ಕಟ್ಟುನಿಟ್ಟಾಗಿ ಕೊನೆಗೊಳಿಸುವುದು ಎಲ್ಲರ ಕರ್ತವ್ಯವಾಗಿದೆ. ಈ ನಿಟ್ಟಿನಲ್ಲಿ ಪ್ರತಿವರ್ಷ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. "ಬಾಲಕಾರ್ಮಿಕ ಪದ್ಧತಿಯ ತಡೆ: ಮಕ್ಕಳಿಗೆ ನ್ಯಾಯಯುತ ಆಟ, ವಯಸ್ಕರಿಗೆ ಯೋಗ್ಯ ಕೆಲಸ" ಎಂಬುದು ಈ ವರ್ಷದ ಧ್ಯೇಯ ವಾಕ್ಯವಾಗಿದೆ ಎಂದು ತಿಳಿಸಿದರು.

ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಚಾರ್ಯರಾದ ಕೃಷ್ಣಮೂರ್ತಿ ದೇಸಾಯಿ ಅವರು ವಿಶ್ವ ಬಾಲಕಾರ್ಮಿಕ ವಿರೋಧಿ ದಿನ–2026ರ ಪ್ರಮಾಣ ವಚನ ಬೋಧಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಪರ ಉಪನಿರ್ದೇಶಕರಾದ ಅಮರೇಶ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಸಿಂಧು ಅಂಗಡಿ, ಜಿಲ್ಲಾ ಮಕ್ಕಳ ರಕ್ಷಣಾ ಯೋಜನೆ–ಯುನಿಸೆಫ್ ಕೊಪ್ಪಳ ಸಂಯೋಜಕರಾದ ಹರೀಶ ಜೋಗಿ ಅವರು ಕಾರ್ಯಕ್ರಮದಲ್ಲಿ ಮಾತನಾಡಿದರು.ಕಾರ್ಯಕ್ರಮದಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ಬಾಲಕಾರ್ಮಿಕ ಪದ್ಧತಿಯಿಂದ ಮುಕ್ತಿಹೊಂದಿ, ಶಾಲೆಗೆ ದಾಖಲಾಗಿ 10ನೇ ತರಗತಿಯಲ್ಲಿ ಶೇ 75ಕ್ಕೂ ಅಧಿಕ ಅಂಕ ಪಡೆದ ವಿದ್ಯಾರ್ಥಿಗಳಿಗೆ ತಲಾ 2000ಗಳ ಪ್ರೋತ್ಸಾಹ ಧನ ಚೆಕ್ ನೀಡಲಾಯಿತು. ಬಾಲಕಾರ್ಮಿಕತೆಯಿಂದ ಮುಕ್ತರಾದ ಮಕ್ಕಳಿಗೆ ಮಾಲೀಕರಿಂದ ಬಾಲಕಾರ್ಮಿಕ ಕಲ್ಯಾಣ ನಿಧಿಗೆ ವಸೂಲಿ ಮಾಡಿ ಜಮಾ ಮಾಡಿದ 20 ಸಾವಿರ ಕಾರ್ಪಸ್ ನಿಧಿ ಹಾಗೂ 15 ಸಾವಿರ ಸರ್ಕಾರದ ವಂತಿಕೆ ಸೇರಿ 35 ಸಾವಿರ ಮೌಲ್ಯದ ಬಾಂಡ್‌ಗಳನ್ನು ವಿತರಿಸಿ ಸನ್ಮಾನಿಸಲಾಯಿತು ಮತ್ತು ಇತರೆ ಬಾಲ ಕಾರ್ಮಿಕ ಮಕ್ಕಳಿಗೆ ಪರಿಹಾರ ಧನ ಚೆಕ್ ವಿತರಿಸಲಾಯಿತು.

ಸಮಾರಂಭದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಸೋಮಶೇಖರಗೌಡ ಬಸನಗೌಡ ಪಾಟೀಲ್, ಜಿಲ್ಲಾ ವಾರ್ತಾಧಿಕಾರಿಗಳಾದ ಗವಿಸಿದ್ದಪ್ಪ ಹೊಸಮನಿ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಪ್ರಕಾಶ ಕಡಗದ, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರಾದ ಬಸವರಾಜ ಹಿರೇಗೌಡ್ರ, ಕೊಪ್ಪಳ ವೃತ್ತದ ಕಾರ್ಮಿಕ ನಿರೀಕ್ಷಕರಾದ ಮಂಜುಳಾ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಗೂ ಸಂಘ ಸಂಸ್ಥೆಗಳ ಪ್ರತಿನಿಧಿಗಳು, ಶಾಲಾ ಮಕ್ಕಳು ಮತ್ತು ಮತ್ತಿತರರು ಉಪಸ್ಥಿತರಿದ್ದರು.

## ಕುಡತಿನಿ ಪಟ್ಟಣದ ರಿಕ್ರಿಯೇಷನ್ ಕ್ಲಬ್‌ಗಳ ಮೇಲೆ ದಾಳಿ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಬಾಳನಗೌಡ ಎಸ್.ಎಂ, ಸಿಪಿಐ, ಕುರುಗೋಡು, ಶಾಂತಮೂರ್ತಿ ಪಿ.ಎಸ್.ಐ (ಕಾ&ಸು) ಮತ್ತು ವಾಣಿ ಪಿ.ಎಸ್.ಐ[ತನಿಖೆ], ಕುಡುತಿನಿ ಪೊಲೀಸ್ ಠಾಣೆ & ಕುರುಗೋಡು ಹಾಗೂ ಕುಡುತಿನಿ ಪೊಲೀಸ್ ಠಾಣೆಗಳ ಸಿಬ್ಬಂದಿಗಳನ್ನು ಒಳಗೊಂಡ ತಂಡ, ಕುಡುತಿನಿ ಪಟ್ಟಣದ ಬಸವೇಶ್ವರ ಸ್ಪೋರ್ಟ್ಸ್ ರಿಕ್ರಿಯೆಷನ್ ಅಸೋಸಿಯೇಷನ್ ಕ್ಲಬ್ ಹಾಗೂ ಗುರುರಾಯರ ರಿಕ್ರಿಯೆಷನ್ ಅಸೋಸಿಯೇಷನ್ ಕ್ಲಬ್‌ಗಳಲ್ಲಿ ಮನೋರಂಜನಾ ಕ್ರೀಡೆ/ಚಟುವಟಿಕೆಗಳ ಹೆಸರಿನಲ್ಲಿ ಕಾನೂನು ಬಾಹಿರವಾಗಿ ನಗದು ಹಣದ ಬದಲಾಗಿ ಪ್ಲಾಸ್ಟಿಕ್ ಕಾಯಿನ್ ಗಳ ಮೂಲಕ ಇಸ್ಪೀಟ್ ಜೂಜಾಟ ಆಡುತ್ತಿದ್ದ ಸ್ಥಳದ ಮೇಲೆ ದಾಳಿ ಮಾಡಲಾಯಿತು.ಘಟನೆ ಕುರಿತು ಕುಡತಿನಿ ಪೊಲೀಸ್ ಠಾಣೆಯಲ್ಲಿ,

1. ಬಸವೇಶ್ವರ ಸ್ಪೋರ್ಟ್ಸ್ & ರಿಕ್ರಿಯೆಷನ್ ಅಸೋಸಿಯೇಷನ್ ಕ್ಲಬ್ ವಿರುದ್ಧ 87/2026 U/s-79,80,KARNATAKAPOLICEACT.

2. ಗುರುರಾಯರ ರಿಕ್ರಿಯೆಷನ್ ಅಸೋಸಿಯೇಷನ್ ಕ್ಲಬ್ ವಿರುದ್ಧ 88/2026 U/s-79,80.KARNATAKAPOLICEACT ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.ಶ್ರೀ ಬಸವೇಶ್ವರ ಸ್ಪೋರ್ಟ್ಸ್ & ರಿಕ್ರಿಯೆಷನ್ ಅಸೋಸಿಯೇಷನ್ ಕ್ಲಬ್ ನಿಂದ ರೂ 124577/–ಹಣ, 21 ವಿವಿಧ ಕಂಪನಿಯ ಮೊಬೈಲ್ ಗಳನ್ನು ಜಪ್ತುಪಡಿಸಿಕೊಂಡು, 24 ಜನ ಆರೋಪಿಗಳ ವಿರುದ್ದ ಕ್ರಮ ಕೈಗೊಳ್ಳಲಾಗಿದೆ.

ಶ್ರೀ ಗುರುರಾಯರ ರಿಕ್ರಿಯೆಷನ್ ಅಸೋಸಿಯೇಷನ್ ಕ್ಲಬ್‌ನಿಂದ ರೂ 90025/– ಹಣ, 39 ವಿವಿಧ ಕಂಪನಿಯ ಮೊಬೈಲ್ ಗಳನ್ನು ಜಪ್ತುಪಡಿಸಿಕೊಂಡು, 45 ಜನ ಆರೋಪಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ.

ಒಟ್ಟು ರೂ 2,14,602/–ಹಣ, 40 ಮೊಬೈಲ್‌ಗಳನ್ನು ಜಪ್ತುಪಡಿಸಿಕೊಂಡು, 69 ಜನ ಆರೋಪಿಗಳ ವಿರುದ್ಧ ಕ್ರಮಕೈಗೊಳ್ಳಲಾಗಿದೆ.ಸದರಿ ಎರಡು ರಿಕ್ರಿಯೆಷನ್ ಕ್ಲಬ್‌ಗಳನ್ನು ಮುಚ್ಚಿಸಲಾಗಿದೆ ಹಾಗೂ ಸದರಿ ಪರವಾನಿಗೆಗಳನ್ನು ರದ್ದುಪಡಿಸಲು ಸಂಬಂಧಿಸಿದ ಇಲಾಖೆಗೆ ಪತ್ರ ಬರೆಯಲಾಗಿದೆ.

## ವಿದ್ಯಾರ್ಥಿಗಳಿಗೆ ಉಚಿತ ಪಠ್ಯ ಸಾಮಗ್ರಿ ವಿತರಿಸಿದ ಮಾಜಿ ಮೇಯರ್ ರಾಜೇಶ್ವರಿ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಇಂದು ಪ್ರತಿಯೊಂದು ಕ್ಷೇತ್ರದಲ್ಲಿ ಸ್ಪರ್ಧೆ ಇದ್ದು, ವಿದ್ಯಾರ್ಥಿಗಳು ಸ್ಪರ್ಧಾ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಮಾಜಿ ಮೇಯರ್ ಎಂ.ರಾಜೇಶ್ವರಿ ಹೇಳಿದರು.

ಶನಿವಾರ ನಗರದ 34ನೇ ವಾರ್ಡಿನ ಭತ್ರಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ಉಚಿತ ಪಠ್ಯ ಸಾಮಗ್ರಿ ವಿತರಿಸಿದ ನಂತರ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಪಾಠದೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲೂ ಭಾಗಿಯಾಗಿ ವಿದ್ಯಾರ್ಥಿಗಳು ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು ಎಂದರು.

ಸರ್ಕಾರಿ ಶಾಲೆಯಲ್ಲಿ ಓದುವ ವಿದ್ಯಾರ್ಥಿಗಳಿಗೆ ಸವಾಲುಗಳು ಹೆಚ್ಚು ಎಂದು ಹೇಳಿದ ರಾಜೇಶ್ವರಿ ಅವರು, ಎಲ್ಲಾ ಸವಾಲುಗಳನ್ನು ಎದುರಿಸಲು ನೀವು ಸಜ್ಜಾಗಬೇಕು, ಇದಕ್ಕೆ ಗುರು ಹಿರಿಯರ ಮಾರ್ಗದರ್ಶನ ಅಗತ್ಯ ಎಂದರು

ಈ ಸಂದರ್ಭ ಕಾಂಗ್ರೆಸ್ ಮುಖಂಡರಾದ ಎಂ.ಸುಬ್ಬರಾಯುಡು ಹಾಜರಿದ್ದರು, ಅವರಿಗೂ ಶಾಲೆಯ ಪರವಾಗಿ ಸನ್ಮಾನಿಸಲಾಯಿತು.

ಸ್ಥಳೀಯ ಮುಖಂಡ ಯೋಗಾನಂದ ರೆಡ್ಡಿ, ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕರು ಹಾಗೂ ಸಿಬ್ಬಂದಿ ಹಾಜರಿದ್ದರು.

## ವಿಜಯನಗರ ಶ್ರೀ ಕೃಷ್ಣದೇವರಾಯ ವಿವಿಯಲ್ಲಿ ಫುಟ್ಬಾಲ್ ಕ್ರೀಡಾಕೂಟ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಜಾಗತಿಕ ಕ್ರೀಡಾಕೂಟವಾದ 'ಫೀಫಾ'ದ ಆಯೋಜನೆ, ಸಂಘಟನೆ, ನಿಯಮಗಳು ಪ್ರತಿ ಕ್ರೀಡಾಪಟುವಿಗೆ ನೈಜ ಅನುಭವ ಹಾಗೂ ಜೀವನಪಾಠ ಹೇಳಿಕೊಡುತ್ತವೆ ಎಂದು ವಿವಿಯ ಕುಲಸಚಿವ ಪ್ರೊ ವಿ ಲೋಕೇಶ್ ಹೇಳಿದರು.ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದಲ್ಲಿ ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ವಿಭಾಗದ ವತಿಯಿಂದ ವಿಶ್ವವಿದ್ಯಾಲಯದಲ್ಲಿ "ಫಿಫಾ ವಿಶ್ವಕಪ್ 2026" ರ ನಿಮಿತ್ತ ನಡೆಸಿದ ವಿಭಾಗೀಯ ಫುಟ್ಬಾಲ್ ಪಂದ್ಯಾವಳಿಗೆ ಚಾಲನೆ ನೀಡಿ ಶನಿವಾರ ಅವರು ಮಾತನಾಡಿದರು.ಮುಖ್ಯ ಅತಿಥಿಗಳಾಗಿ ಗುಂತಕಲ್ ರೈಲ್ವೆ ವಿಭಾಗದ ಹಿರಿಯ ತಾಂತ್ರಿಕರು ಹಾಗೂ ಫುಟ್ಬಾಲ್ ಕ್ರೀಡಾಪಟು ಆಗಿರುವ ಚಂದ್ರಮೌಳಿ ಅವರು ಭಾಗವಹಿಸಿ ಮಾತನಾಡಿ, ಕ್ರೀಡೆಯನ್ನು ಪ್ರತಿಯೊಬ್ಬರು ಧನಾತ್ಮಕವಾಗಿ ಸ್ವೀಕರಿಸಬೇಕು ಹಾಗೂ ಕ್ರೀಡಾ ನಿಯಮಗಳನ್ನು ಪಾಲಿಸುವುದರ ಮೂಲಕ ಕ್ರೀಡಾಸ್ಪೂರ್ತಿಯನ್ನು ಮೆರೆಯಬೇಕು ಎಂದರು.

ವಿಶ್ವವಿದ್ಯಾಲಯದ ಹಣಕಾಸು ಅಧಿಕಾರಿ ಸ್ಫೂರ್ತಿ ಕೆ.ಜಿ. ಅವರು ಮಾತನಾಡಿ, ನಿರಂತರವಾಗಿ ಕ್ರೀಡೆಯನ್ನು ಆಡುವುದರಿಂದ ವ್ಯಕ್ತಿತ್ವದಲ್ಲಿ ಪರಿಪೂರ್ಣತೆ ಕಾಣಬಹುದು ಹಾಗೂ ಉತ್ತಮ ತರಬೇತಿ ಪಡೆಯುವುದರ ಮೂಲಕ ಕ್ರೀಡಾ ಸಾಧನೆ ಮಾಡಬಹುದು ಎಂದರು.

ವಿಭಾಗದ ಮುಖ್ಯಸ್ಥ ಡಾ.ಸಂಪತ ಕುಮಾರ್ ಅಧ್ಯಕ್ಷತೆ ವಹಿಸಿದ್ದರು. ಡಾ. ಶಶಿಧರ ಕೆಲ್ಲೂರ ಸ್ವಾಗಿತಿಸಿ ಪ್ರಾಸ್ತಾವಿಕ ನುಡಿಗಳನ್ನಾಡಿದರು, ರಾಜೇಶ್ ವಂದಿಸಿದರು.

ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಭಾಗದ ಅತಿಥಿ ಉಪನ್ಯಾಸಕರು, ಸಂಶೋಧನಾ ವಿದ್ಯಾರ್ಥಿಗಳು ಮತ್ತು ಎಂ.ಪಿ.ಇಡಿ. ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಈ ಫುಟ್ಬಾಲ್ ಕ್ರೀಡಾಕೂಟದಲ್ಲಿ ಅಭಿನವ ಬಿಂದ್ರಾ ತಂಡದವರು ಚಾಂಪಿಯನ್ ಆಗಿ ಟ್ರೋಫಿ ಸ್ವೀಕರಿಸಿದರು.

## ಆಲದಹಳ್ಳಿ ಈಚಲಹಳ್ಳದ ಒತ್ತುವರಿ ತೆರವು



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಇಲ್ಲಿಗೆ ಸಮೀಪದ ಆಲದಹಳ್ಳಿ ಗ್ರಾಮದ ಸರ್ವೇ ನಂ 38/ಎ ಗೆ ಸಂಬಂಧಿಸಿದ ಈಚಲಹಳ್ಳದ ಪರಂಪೋಕ್ ನ 3.28 ಎಕರೆ ಜಮೀನನ್ನು ಜಿಲ್ಲಾಡಳಿತ ಇಂದು ವಶಕ್ಕೆ ಪಡೆದುಕೊಂಡಿದೆ.

ಎಡಿಸಿ ಮಹಮ್ಮದ್ ಝುಬೇರ ಅವರ ನೇತೃತ್ವದಲ್ಲಿ ಡಿಡಿಎಲ್ ಆರ್. ಪ್ರಮೋದ್, ಎಡಿಎಲ್ ಆರ್ ಬಳ್ಳಾರಪ್ಪ ಮೊದಲಾದವರ ತಂಡ ಜೆಸಿಬಿ ಮೂಲಕ ಒತ್ತವರಿ ಮಾಡಿದ್ದನ್ನು ತೆರವು ಮಾಡಿ. ಇದು ಸರ್ಕಾರಿ ಜಮೀನು ಎಂದು ಫಲಕ ಹಾಕಿದರು.

ಈ ಜಮೀನಿಗೆ ಸಂಬಂಧ ಪಟ್ಟಂತೆ ನಗರದ ಕಾಂಗ್ರೆಸ್ ಮುಖಂಡ ತಮ್ಮ ಪಟ್ಟಾ ಜಮೀನಿನಲ್ಲಿ ಫಾರಂ ಹೌಸ್ ಕಟ್ಟಿ ಅದರೊಂದಿಗೆ 22 ಸೆಂಟ್ಸ್ ಈಚಲಹಳ್ಳದ ಜಮೀನನ್ನು ಒತ್ತುವರಿ ಮಾಡಿ ಕಾಂಪೌಂಡ್ ಕಟ್ಟಿದ್ದರು. ಅದನ್ನು ತೆರವುಗೊಳಿಸಲಾಗಿದೆ. ಒಂದಿಷ್ಟು ಕಟ್ಟಡದ ಭಾಗವನ್ನು ತಾವೇ ತೆರವುಗೊಳಿಸುವುದಾಗಿ ಜಿಲ್ಲಾಡಳಿತಕ್ಕೆ ತಿಳಿಸಿದರಂತೆ.

ಇದೇ ರೀತಿ ಅನೇಕ ರಾಜಕೀಯ ಮುಖಂಡರು ಉದ್ಯಾನವನಗಳನ್ನು ಸಹ ಅತಿಕ್ರಮಿಸಿ ನಿವೇಶನ ಮಾಡಿಕೊಂಡಿದ್ದಾರಂತೆ. ಅದರ ಬಗ್ಗೆ ದೂರುಗಳು ಬಂದಿದ್ದು ಜಿಲ್ಲಾಡಳಿತ ಅವುಗಳ ಪರಿಶೀಲನೆ ನಡೆಸಿದೆಯಂತೆ.

ಅತಿಕ್ರಮಣವೆಲ್ಲ ಬೇನಾಮಿ ಹೆಸರಲ್ಲಿ ಬಹುತೇಕವಾಗಿ ಪಾಲಿಕೆಯಲ್ಲಿ ಅಧಿಕಾರ ನಡೆಸಿದವರಿಂದ ಆಗಿದೆ ಎನ್ನಲಾಗುತ್ತಿದೆ. ಬರುವ ದಿನಗಳಲ್ಲಿ ಅವುಗಳು ಸಹ ಹೊರಬರಲಿವೆ ಎಂಬ ಮಾಹಿತಿ ಇದೆ.

## ಬಸವಾದಿ ಶರಣರ ಹಿಂದೂ ಸಮಾವೇಶಕ್ಕೆ ದಂಡಾಧಿಕಾರಿ ನಿರಾಕರಣೆ: ವಿಜಯೋತ್ಸವ ಕಾನೂನು ಸುವ್ಯವಸ್ಥೆ ಕಾಪಾಡಿದ್ದಕ್ಕೆ ಕೃತಜ್ಞತೆ: ಶ್ರೀಕಾಂತ ಸ್ವಾಮಿ ಹೆಡಗಾಪುರ




• **ಮಲ್ಲಮ್ಮ ನುಡಿ ವಾರ್ತೆ ಬೀದರ**

ಜೂ 13: ಕನ್ನೇರಿ ಸ್ವಾಮಿಯವರ ನೇತೃತ್ವದಲ್ಲಿ ಜೂ.28ರಂದು ಬಸವಕಲ್ಯಾಣದಲ್ಲಿ ಬಸವಾದಿ ಶರಣರ ಹಿಂದೂ ಸಮಾವೇಶ ಹಮ್ಮಿಕೊಳ್ಳಲಾಗಿತ್ತು, ಇದಕ್ಕೆ ಅನುಮತಿ ನಿರಾಕರಿಸಿ ತಾಲೂಕು ದಂಡಾಧಿಕಾರಿ/ತಹಶೀಲ್ದಾರರು ಆದೇಶ ಹೊರಡಿಸಿದ್ದಾರೆ. ಹೀಗಾಗಿ ಶನಿವಾರ ಮುಂಜಾನೆ ಅಂಬೇಡ್ಕರ ವೃತ್ತ ಹತ್ತಿರ ಕನ್ನೇರಿ ಸ್ವಾಮೀಜಿ ಬಸವಾದಿ ಶರಣರ ಸಮಾವೇಶ ಅನುಮತಿ ನಿರಾಕರಿಸಿದಕ್ಕೆ ವಿಜಯೋತ್ಸವ ಆಚರಿಸಲಾಯಿತು ಎಂದು ಅಖಿಲ ಭಾರತ ಲಿಂಗಾಯತ ಸಮನ್ವಯ ಸಮಿತಿಯ ರಾಜ್ಯ ಸಂಚಾಲಕ ಶ್ರೀಕಾಂತ ಸ್ವಾಮಿ ಹೆಡಗಾಪುರ ತಿಳಿಸಿದ್ದಾರೆ.ಈ ಸಮಾವೇಶ ವಿರುದ್ಧವಾಗಿ ಬೀದರ ಜಿಲ್ಲೆಯ ಮತ್ತು ನಾಡಿನ ಹಲವಾರು ಬಸವಪರ, ಲಿಂಗಾಯತ ಸಮುದಾಯದ ಪರ ಮತ್ತು ದಲಿತಪರ ಸಂಘಟನೆಗಳು, ಪೂಜ್ಯ ಮಠಾಧೀಶರು ಮತ್ತು ಬಸವ ಅನುಯಾಯಿಗಳು ಪ್ರತಿಭಟನೆ ವ್ಯಕ್ತಮಾಡಿದ್ದರು. ಕನ್ನೇರಿ ಸ್ವಾಮೀಜಿ ಬಸವಾದಿ ಶರಣರ ಅವಹೇಳನ ಮಾಡುವದು, ಬಸವಾದಿ ಶರಣರ ವಚನಗಳನ್ನು ತಿರುಚಿ ಹೇಳುವ ಮುಖಾಂತರ ಸಮಾಜದಲ್ಲಿ ಪ್ರಕ್ಷುಬ್ಧ ವಾತವರಣ ನಿರ್ಮಾಣ ಮಾಡುತ್ತಿದ್ದು, ಕೋಮು ಗಲಭೆಗಳು ಸಂಭವಿಸುವ ಆತಂಕವನ್ನು ಎಲ್ಲರೂ ವ್ಯಕ್ತಪಡಿಸಿದ್ದರು ಎಂದರು.ಈಗಾಗಲೇ ನಾವು ಮತ್ತು ಹಲವಾರು ಯುವಕರು ಬೆಂಗಳೂರದಲ್ಲಿ ರಾಜ್ಯದ ಮಾನ್ಯ ಗೃಹ ಸಚಿವರು ಸನ್ಮಾನ್ಯ ಶ್ರೀ ಪ್ರಿಯಾಂಕ ಖರ್ಗೆ, ಮತ್ತು ಸನ್ಮಾನ್ಯ ಶ್ರೀ ಈಶ್ವರ ಖಂಡ್ರೆ ಮಾನ್ಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತರಾಜ ಸಚಿವರು ಇವರ ಗಮನಕ್ಕೆ ತರಲಾಗಿತ್ತು. ಸರಕಾರ ನಾಡಿನ ಸಮಸ್ಯೆಯನ್ನು ಅರಿತು–ಕೊಂಡು ಕರ್ನಾಟಕ ರಾಜ್ಯ ಸಾಂಸಕೃತಿಕ ನಾಯಕರು ವಿಶ್ವಗುರು ಬಸವಣ್ಣನವರ ಅವಮಾನ ಮತ್ತು ಬಸವಾದಿ ಶರಣರ ಅವಹೇಳನ ಪರಿಗಣನೆಗೆ ತೆಗೆದುಕೊಂಡಿ–ದ್ದು ತಿಳಿದುಬಂದಿದೆ. ಲಿಂಗಾಯತ ಸಮುದಾಯದ ಮಠಾಧೀಶರಿಗೆ ಮತ್ತು ಬಸವಾದಿ ಶರಣರ ಅನುಯಾಯಿಗಳಿಗೆ ಹಿಂದೂ ಸಮಾವೇಶದ ವಿರೋಧ ಇಲ್ಲ, ಆದರೆ ಬಸವಾದಿ ಶರಣರ ಹೆಸರ ಮೇಲೆ ಹಿಂದೂ ಸಮಾವೇಶ ಮಾಡಲು ಹೊರಟಿದ್ದು ಅನುಚಿತ ಎಂದು ಆತಂಕ ಪಡಿಸಿ ಸಚಿವರಿಗೂ, ಜಿಲ್ಲಾಧಿಕಾರಿ, ಮತ್ತು ತಾಲೂಕಾ ದಂಡಾಧಿಕಾರಿಗಳಿಗೆ ಮನವಿ ಸಲ್ಲಿಸಿ ಮನವರಿಕೆ ಮಾಡಿಕೊಡಲಾಗಿತ್ತು ಎಂದು ಹೇಳಿದರು.ಆದರಿಂದ ನ್ಯಾಯಾಲಯದಿಂದ ಛೀಮಾರಿ ಹಾಕಿಸಿಕೊಂಡ ಕನ್ನೇರಿ ಸ್ವಾಮಿ ಬೇಕಂತಲೇ ಬಸವ ಭೂಮಿ ಕ್ರಾಂತಿ ಭೂಮಿ ಬಸವಾದಿ ಶರಣರು ಸಮಾನತೆ ಸಾರಿದ ಬಸವಕಲ್ಯಾಣದಲ್ಲಿ ತನ್ನ ವೈಧಿಕ ಪರಂಪರೆ ಮೆರೆಯಲು, ಬಸವಾದಿ ಶರಣರನ್ನು ಅವಹೇಳನ ಮಾಡಲು ಬಸವಾದಿ ಶರಣರ ಹೆಸರಿನ ಮೇಲೆ ಹಿಂದೂ ಸಮಾವೇಶ ಹಮ್ಮಿಕೊಂಡಿದ್ದು, ಸಮಾಜದಲ್ಲಿ ಕೋಮು ಗಲಭೆ ಉಂಟಾಗಿ ಕಾನೂನು ಸುವ್ಯವಸ್ಥೆ ಧಕ್ಕೆ ಆಗುತ್ತದೆ ಎಂದು ಪರಿಗಣಿಸಿ, ಅನುಮತಿ ನಿರಾಕರಣೆ ಮಾಡಿದ್ದು ನಾವೆಲ್ಲರೂ ಸ್ವಾಗತಿಸುತ್ತೇವೆ. ಈ ನಡೆಗೆ ನಾವು ಹರ್ಷವ್ಯಕ್ತಪಡಿಸುತ್ತೇವೆ ಎಂದರು.

ರಾಜ್ಯಸರ್ಕಾರ, ಮಾನ್ಯಮುಖ್ಯಮಂತ್ರಿಗಳಾದ ಡಿಕೆ ಶಿವಕುಮಾರ, ಸಚಿವ ಈಶ್ವರ ಖಂಡ್ರೆ ಮಾನ್ಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತರಾಜ ಸಚಿವರು, ಪ್ರಿಯಾಂಕ ಖರ್ಗೆ ಮಾನ್ಯ ಗೃಹ ಸಚಿವರು ಮತ್ತು ಜಿಲ್ಲಾಡಳಿತ, ತಾಲೂಕು ದಂಡಾಧಿಕಾರಿ ಅವರಿಗೆ ಧನ್ಯವಾದ ಸಲ್ಲಿಸುತ್ತೇವೆ.

ಬೀದರ ಜಿಲ್ಲೆಯ ಮತ್ತು ನಾಡಿನ ಹಲವು ಜಿಲ್ಲೆಗಳಲ್ಲಿ ಕನ್ನೇರಿ ಸ್ವಾಮೀಜಿ ಬಸವಾದಿ ಶರಣರ ಸಮಾವೇಶಕ್ಕೆ ಆಕ್ರೋಶ ವ್ಯಕ್ತಮಾಡಿದ್ದ ಜಿಲ್ಲೆಯ ನಾಡಿನ ಎಲ್ಲಾ ಪೂಜ್ಯ ಮಠಾಧೀಶರಿಗೂ, ಮಾತಾಜಿಯವರಿಗೂ, ಲಿಂಗಾಯತ ಸಮುದಾಯದ ಮುಖಂಡರಿಗೂ, ಲಿಂಗಾಯತ ಧರ್ಮದ ಮತ್ತು ಬಸವ ಪರ ಸಂಘಟನೆಗಳಿಗೂ, ದಲಿತ ಪರ ಮತ್ತು ಕನ್ನಡ ಪರ ಸಂಘಟನೆಗಳಿಗೆ ಧನ್ಯವಾದಗಳು ಸಲ್ಲಿಸುತ್ತೇವೆ. ಇದೇ ವೇಳೆ ಪೂಜ್ಯ ಜಗದ್ಗುರು ಡಾ ಚೆನ್ನಬಸವಾನಂದ ಸ್ವಾಮೀಜಿ, ಕುಂಬಳಗೋಡ ಬೆಂಗಳೂರು, ಪೂಜ್ಯ ಡಾ ಸಿದ್ಧರಾಮ ಶರಣರು ಬೆಲ್ದಾಳ, ಪೂಜ್ಯ ಸತ್ಯಾದೇವಿ ಮಾತಾಜಿ, ಜೆಎಂ ವೀರಸಂಗಯ್ಯ, ಮಾರುತಿ ಬೌದ್ಧೆ, ಜಗದಿಶ್ವರ ಬಿರಾದಾರ, ಶಿವರಾಜ ಪಾಟೀಲ, ಅತಿವಾಳ, ಶಿವಶರಣಪ್ಪ ಪಾಟೀಲ ಹಾರುರಗೇರಿ, ಶ್ರೀನಾಥ ಕೋರೆ ಸೇರಿದಂತೆ ಹಲವರಿದ್ದರು.

## ಡಾ. ಕಿರಣ್ ಕುಮಾರ್ ವರ್ಗಾವಣೆ ಮಾಡಿದರೆ ಹೋರಾಟ



• **ಮಲ್ಲಮ್ಮ ನುಡಿ ವಾರ್ತೆ ಸಂಡೂರು**

ತಾಲ್ಲೂಕು ಆಸ್ಪತ್ರೆಯಲ್ಲಿ ಡಾಕ್ಟರ್‌ಗಳ ಕೊರತೆ ಇದ್ದು, ಸಾರ್ವಜನಿಕರು ಕೊರಗುವಂತಾಗಿದೆ, ಗಣಿ ಚಟುವಟಿಕೆಗಳಿಂದ ಕೂಡಿದ ಪ್ರದೇಶದಲ್ಲಿ ಅತೀ ಹೆಚ್ಚು ಅಪಘಾತಗಳು ಸಂಭವಸುತ್ತಿದ್ದು. ಇಂತಹ ಸಮಯದಲ್ಲಿ ಡಾ. ಕಿರಣಕುಮಾರ ವರ್ಗಾವಣೆ ಆಗತ್ತಿರುವುದು ತುಂಬಾ ವಿಷಾಧನೀಯ, ಅದ ಕಾರಣ ದಯಾಳುಗಳಾದ ತಾವುಗಳ ಡಾ. ಕಿರಣಕುಮಾರರವರ ವರ್ಗಾವಣೆಯನ್ನು ತಡೆಯುವಂತೆ ಮಾನ್ಯ ತಾಲೂಕು ತಂಡಾಧಿಕಾರಿಗಳಿಗೆ ಮನವಿ ಸಲ್ಲಿಸಿದರು ಮತ್ತು ಮಾನ್ಯ ಘನ ಸರ್ಕಾರಕ್ಕೆ ಶಿಫಾರಸ್ಸು ಮಾಡಲು ತಹಸೀಲ್ದಾರರಿಗೆ ಮನವಿ ಪತ್ರ ಸಲ್ಲಿಸಿದರು. ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ತಾಲೂಕ ಅಧ್ಯಕ್ಷರು ಎಂಎಲ್‌ಕೆ ನಾಯ್ಡು ಮಾತನಾಡಿ ಸಂಡೂರು ತಾಲೂಕಿನ ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯ ರಕೊರತೆ ಇದ್ದು ಇನ್ನೂ ಹೆಚ್ಚುವರಿ ವೈದ್ಯರ ಈ ಆಸ್ಪತ್ರೆಗೆ ಅವಶ್ಯಕತೆ ಇದ್ದು ಇರುವಂತವರನ್ನ ಉಳಿಸಿಕೊಳ್ಳಲು ಬಿಟ್ಟು ಇಲ್ಲಿರುವವರನ್ನೇ ವರ್ಗಾವಣೆ ಮಾಡಿದರೆ. ಇಲ್ಲಿನಜನರ ಪರಿಸ್ಥಿತಿ ಏನಾಗಬಹುದು ಎಂದುದುಃಖ ವ್ಯಕ್ತಪಡಿಸಿದರು. ಮತ್ತು ವರ್ಗಾವಣೆ ಕೂಡಲೆ ಹಿಂಪಡೆಯಬೇಕು ಇಲ್ಲದಿದ್ದರೆ ರೈತ ಸಂಘಟನೆಗಳು ಒಗ್ಗೂಡಿ ಹೋರಾಟ ಮಾಡುತ್ತೇವೆಎಂದರು. ಉಪಾಧ್ಯಕ್ಷರು ಸರ್ವ ಪದಾಧಿಕಾರಿಗಳು ಭಾಗವಹಿಸಿದ್ದರು.

## ಜೂ.28 ರಂದೇ ಬಸವಕಲ್ಯಾಣದಲ್ಲಿ ಬಸವಾದಿ ಶಿವಶರಣರ ಬೃಹತ್ ಹಿಂದೂ ಸಮಾವೇಶ : ಗುಂಡುರೆಡ್ಡಿ ಕಮಲಾಪುರೆ



• **ಮಲ್ಲಮ್ಮ ನುಡಿ ವಾರ್ತೆ ಬೀದರ**

ಜೂ 13: ಬಸವಕಲ್ಯಾಣ: ಜೂ.28ರಂದು ನಡೆಯಲಿರುವ ಬಸವಾದಿ ಶಿವಶರಣರ ಬೃಹತ್ ಹಿಂದೂ ಸಮಾವೇಶಕ್ಕೆ ಅನುಮತಿ ಕೋರಿ ಸಲ್ಲಿಸಿದ್ದ ಅರ್ಜಿಗೆ ತಾಲೂಕು ಆಡಳಿತದಿಂದ ಇನ್ನೂ ಅನುಮೋದನೆ ದೊರಕಿಲ್ಲ. ಆದರೂ ಜಿಲ್ಲಾಡಳಿತದ ಮೇಲೆ ಸಂಪೂರ್ಣ ವಿಶ್ವಾಸವಿದ್ದು, ಕಾನೂನಾತ್ಮಕವಾಗಿ ಕಾರ್ಯಕ್ರಮಕ್ಕೆ ಅನುಮತಿ ಸಿಗುವ ನಿರೀಕ್ಷೆಯಿದೆ ಎಂದು ಸಮಾವೇಶದ ಅಧ್ಯಕ್ಷ ಗುಂಡುರೆಡ್ಡಿ ಕಮಲಾಪುರೆ ತಿಳಿಸಿದ್ದಾರೆ.

ನಗರದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮದ ಕುರಿತು ಅನಗತ್ಯ ಗೊಂದಲಗಳು ಸೃಷ್ಟಿಯಾಗುತ್ತಿರುವ ಹಿನ್ನೆಲೆಯಲ್ಲಿ ಸ್ಪಷ್ಟನೆ ನೀಡಲು ಪತ್ರಿಕಾಗೋಷ್ಠಿ ನಡೆಸಲಾಗಿದೆ ಎಂದರು.

ಕಾರ್ಯಕ್ರಮದ ಹೆಸರಿನಲ್ಲಿ ಇರುವ "ಬಸವಾದಿ ಶಿವಶರಣರು" ಎಂಬ ಪದಗಳನ್ನು ತೆಗೆದುಹಾಕಬೇಕು ಎಂದು ಕೆಲ ಸಂಘಟನೆಗಳು ಒತ್ತಾಯಿಸುತ್ತಿವೆ. ಆದರೆ ಈ ಕಾರ್ಯಕ್ರಮಕ್ಕೆ ವಿರೋಧ ವ್ಯಕ್ತಪಡಿಸುತ್ತಿರುವವರಲ್ಲಿ ಬಹುತೇಕರು ಬಸವಕಲ್ಯಾಣದವರೇ ಅಲ್ಲ. ಬಸವಣ್ಣನವರ ವಿಚಾರಧಾರೆಯನ್ನು ಯಾರೂ ಗುತ್ತಿಗೆ ಪಡೆದಿಲ್ಲ. ಬಸವಕಲ್ಯಾಣದ ಜನರಿಂದ ಈ ಕಾರ್ಯಕ್ರಮಕ್ಕೆ ಯಾವುದೇ ವಿರೋಧ ವ್ಯಕ್ತವಾಗಿಲ್ಲ. ಎಲ್ಲಾ ಜಾತಿ–ಧರ್ಮದ ಜನರನ್ನು ಒಗ್ಗೂಡಿಸುವ ಉದ್ದೇಶದಿಂದ ಸಮಾವೇಶ ಆಯೋಜಿಸಲಾಗಿದೆ ಎಂದು ಹೇಳಿದರು.

ಬಸವಣ್ಣನವರು ಸಮಾನತೆಯ ಸಂದೇಶ ಸಾರಿದ ಮಹಾನ್ ವ್ಯಕ್ತಿತ್ವ. ಅವರ ತತ್ವಗಳು ಎಲ್ಲ ಸಮುದಾಯಗಳಿಗೂ ಸೇರಿವೆ. ಇಂತಹ ಕಾರ್ಯಕ್ರಮಗಳಿಗೆ ವಿರೋಧ ವ್ಯಕ್ತಪಡಿಸುವ ಮೂಲಕ ಕೆಲವರು ತಮ್ಮದೇ ಪ್ರತಿಷ್ಠೆಗೆ ಧಕ್ಕೆ ತರುತ್ತಿದ್ದಾರೆ ಎಂದು ಅವರು ಟೀಕಿಸಿದರು.

ಕನೇರಿ ಮಠದ ಅದೃಶ್ಯ ಕಾಡಸಿದ್ದೇಶ್ವರ್ ಸ್ವಾಮೀಜಿ ಬುದ್ಧ ಬಸವ ಮತ್ತು ಅಂಬೇಡ್ಕರ್ ಅವರ ತತ್ವಗಳಿಂದ ಪ್ರೇರಿತರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಸಮಾವೇಶಕ್ಕೆ ರಾಜ್ಯದ ವಿವಿಧ ಭಾಗಗಳಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ಹಿಂದೂ ಸಮಾವೇಶವನ್ನು ಭಾರತದಲ್ಲೇ ನಡೆಸಬಾರದೆಂದರೆ ಎಲ್ಲಿ ನಡೆಸಬೇಕು ಎಂದು ಪ್ರಶ್ನಿಸಿದರು.

ಧಾರ್ಮಿಕ ಮತ್ತು ಸಾಮಾಜಿಕ ಕಾರ್ಯಕ್ರಮಗಳಿಗೆ ಅಗತ್ಯ ಪೊಲೀಸ್ ಬಂದೋಬಸ್ತ್ ಒದಗಿಸುವುದು ಇಲಾಖೆಯ ಜವಾಬ್ದಾರಿಯಾಗಿದೆ. ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಜೂ.28ರಂದು ಬಸವಕಲ್ಯಾಣದಲ್ಲಿ ಬಸವಾದಿ ಶಿವಶರಣರ ಬೃಹತ್ ಹಿಂದೂ ಸಮಾವೇಶ ನಿಗದಿಯಂತೆ ನಡೆಯಲಿದ್ದು, ಕನೇರಿ ಮಠದ ಕಾಡಸಿದ್ದೇಶ್ವರ್ ಸ್ವಾಮೀಜಿ ಭಾಗವಹಿಸಲಿದ್ದಾರೆ ಎಂದು ಗುಂಡುರೆಡ್ಡಿ ಕಮಲಾಪುರೆ ತಿಳಿಸಿದರು.

ಈ ಸಂದರ್ಭದಲ್ಲಿ ದೀಪಕ್ ಗಾಯಕವಾಡ್, ಗಿರೀಶ್ ತಾಂಬೋಳೆ, ಸಂದೀಪ್ ಪಾಟಿಲ್ ಸೇರಿದಂತೆ ಹಲವರಿದ್ದರು.

## ಯಾವುದೇ ಸಾಧನೆಗೆ ವಯಸ್ಸಿನ ಮಿತಿಯಿಲ್ಲ : ಕರ್ಕಿಕರ



• **ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ**

ಸಾಧಿಸುವ ಛಲವೊಂದಿದ್ದರೆ ವಯಸ್ಸು ಇನ್ನಾವುದೇ ವೈಯಕ್ತಿಕ ಕಾರಣಗಳು ಅಡ್ಡ ಬರಲಾರದು ಎಂದು ನಿವೃತ್ತ ಮುಖ್ಯಾಧ್ಯಾಪಕ ಎಂ.ಎಂ. ಕರ್ಕಿಕರ ಹೇಳಿದರು. ಅವರು ಡಾ. ಐ.ಬಿ. ಪೂಜಾರಿಯವರು ಮಧ್ಯಪ್ರದೇಶದ ಸಾಗರದ ವಿಶ್ವವಿದ್ಯಾಲಯದಿಂದ ಪಿ.ಎಚ್.ಡಿ. ಪದವಿ ಪಡೆದಿರುವುದಕ್ಕಾಗಿ ಅಂಕೋಲಾ ಬ್ಯಾಡ್ಮಿಂಟನ್ ಕ್ಲಬ್ ಪರವಾಗಿ ಹಮ್ಮಿಕೊಂಡ ಸನ್ಮಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸನ್ಮಾನ ಸ್ವೀಕರಿಸಿದ ನಿವೃತ್ತ ಪ್ರಾಚಾರ್ಯ ಡಾ. ಐ.ಬಿ. ಪೂಜಾರಿ ಮಾತನಾಡಿ, ಪಿಎಚ್‌ಡಿ ಮಾಡುವ ಬಹುದಿನದ ಕನಸು ಈಡೇರಿದೆ. ಮುಂದೆಯೂ ಕೂಡ ಕಲಿಕೆ ಮುಂದುವರಿಸುತ್ತೇನೆ. ಜೀವನದಲ್ಲಿ ತಿಳಿದದ್ದಕ್ಕಿಂತ ತಿಳಿಯಬೇಕಾದುದು ಜಾಸ್ತಿಯಿದೆ ಎಂದರು.

ಬ್ಯಾಡ್ಮಿಂಟನ್ ಕ್ಲಬ್‌ನ ಸದಸ್ಯರಾದ ಡಾ. ಅಶೋಕಕುಮಾರ, ಡಾ. ನಂಜುಂಡಯ್ಯ, ಮಧುಕೇಶ್ವರ ದೇವರಭಾವಿ, ಮಹಾಂತೇಶ ರೇವಡಿ ಅನಿಸಿಕೆ ವ್ಯಕ್ತಪಡಿಸಿದರು. ಡಾ. ಕರುಣಾಕರ ನಾಯ್ಕ ನಿರೂಪಿಸಿದರು. ರಮೇಶ ಗೌಡ ವಂದಿಸಿದರು. ಸದಸ್ಯರಾದ ಗಣೇಶ ನಾಯ್ಕ, ಹರೀಶ ನಾಯ್ಕ, ಹೇಮಂತಕುಮಾರ, ಮಂಜುನಾಥ ಎಮ್, ಪಿ.ಕೆ. ನಾಯ್ಕ, ಶೈನ್, ಸಂತೋಷ ನಾಯ್ಕ, ಕೌಶಿಕ್ ಗೌಡ, ಕೀರ್ತಿರಾಜ್ ನಾಯ್ಕ, ಲಕ್ಷ್ಮಣ ನಾಯ್ಕ, ಶಮೀಂದ್ರ ತಲಗೇರಿ, ಶ್ರೀಕಾಂತ್, ಬಾಪು ಬಿರಾದಾರ್, ಶ್ರೀನಿವಾಸ ಯು.ಕೆ. ಹಾಜರಿದ್ದರು.

## ಹವಾಮಾನ ಬದಲಾವಣೆ ಕುರಿತು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ತರಬೇತಿ.



• **ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)**

ಜೂನ್.13:ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳಿಗಾಗಿ ಕರ್ನಾಟಕ ರಾಜ್ಯ ಹವಾಮಾನ ಬದಲಾವಣೆಯ ಕುರಿತು ಕ್ರಿಯಾ ಯೋಜನೆ ತರಬೇತಿ ಕಾರ್ಯಾಗಾರವನ್ನು ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆ (ಎಂಪ್ರಿ) ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಯ ಜಂಟಿ ಸಹಯೋಗದಲ್ಲಿ ಕಾರ್ಯಕ್ರಮದ ಹಮ್ಮಿಕೊಳ್ಳಲಾಗಿತ್ತು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಜಿಲ್ಲಾ ಪಂಚಾಯತ್‌ನ ಮುಖ್ಯ ಯೋಜನಾಧಿಕಾರಿ ಅನ್ನದಾನಸ್ವಾಮಿ ಜೆ.ಎಂ. ಅವರು ಮಾತನಾಡಿ, ಅಧಿಕಾರಿಗಳು ಈ ತರಬೇತಿಯ ಪೂರ್ಣ ಪ್ರಯೋಜನವನ್ನು ಪಡೆದು, ಹವಾಮಾನ ಬದಲಾವಣೆಯ ತಡೆಗೆ ಕೈಗೊಳ್ಳಬೇಕಾದ ಕ್ರಮಗಳನ್ನು ಜನಸಾಮಾನ್ಯರ ಮಟ್ಟಕ್ಕೆ ತೆಗೆದುಕೊಂಡು ಹೋಗ ಬೇಕು ಎಂದು ತಿಳಿಸಿದರು.ಕಾರ್ಯಾಗಾರದಲ್ಲಿ ಎಂಪ್ರಿ ಸಂಸ್ಥೆಯ ಸಂಶೋಧನಾ ವಿಜ್ಞಾನಿ ಡಾ. ಶ್ರುತಿ ಬಿ.ವಿ. ಅವರು 2025–2030 ರ ಅವಧಿಗೆ ವಿವಿಧ ಇಲಾಖೆಗಳು ನಿಗದಿಪಡಿಸಿಕೊಂಡಿರುವ ಕಾರ್ಯಕ್ಷಮತೆ ಸೂಚಕಗಳು, ಕಾರ್ಯತಂತ್ರಗಳು ಹಾಗೂ ಜಿಲ್ಲೆಯ ಮಾಲಿನ್ಯ ಕಾರಕಗಳ ದತ್ತಾಂಶಗಳ ಕುರಿತು ಸುದೀರ್ಘ ಮಾಹಿತಿ ನೀಡಿದರು. ಎಸಿಐಡಬ್ಲ್ಯೂಆರ್‌ಎಂ ಬೆಂಗಳೂರು ಸಂಸ್ಥೆಯ ಸಂಶೋಧನಾ ವಿಜ್ಞಾನಿ ದೀಪರಾಣಿ, ಎನ್‌ಆರ್‌ಡಿಎಂಎಸ್ ಕೇಂದ್ರದ ಅಧಿಕಾರಿ ಶ್ರೀ ಶರಣಪ್ಪ ಅಪ್ಪಣ್ಣನವರ್, ಎಂಪ್ರಿ ಸಂಸ್ಥೆಯ ರುಚಿತಾಶ್ರೀ ಮತ್ತು ರಾಘವೇಂದ್ರ ಎನ್. ಉಪಸ್ಥಿತರಿದ್ದರು.

# ಬಿಟಿಡಿಎ ಅಧಿಕಾರಿಗೆ ರೈತನಿಂದ ಚಪ್ಪಲಿ ಏಟು!



**ಬಾಗಲಕೋಟೆ:** ಮುಳುಗಡೆ ನಿವೇಶನ, ಭೂಮಿ ಪರಿಹಾರದ ಹಂಚಿಕೆ ವಿಳಂಬದ ಹಿನ್ನೆಲೆಯಲ್ಲಿ ಆಕ್ರೋಶಗೊಂಡ ರೈತನೋರ್ವ ಶನಿವಾರ ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದ ಕಚೇರಿಯಲ್ಲಿ ಅಧಿಕಾರಿಯೊಬ್ಬರಿಗೆ ಚಪ್ಪಲಿ ಏಟು ನೀಡಿದ ಘಟನೆ ನಡೆದಿದೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ವಿಡಿಯೋ ವೈರಲ್ ಆಗಿದ್ದು, ಬಸಪ್ಪ ದೊಡಮನಿ ಎಂಬಾತ ಪ್ರಾಧಿಕಾರ ಕಚೇರಿಯ ಅಧಿಕಾರಿ ನೀಲಕಂತ ಅಂಕದ ಎಂಬುವವರ ಮೇಲೆರಗಿ ಚಪ್ಪಲಿಯ ಏಟು ಕೊಟ್ಟಿರುವ ದೃಶ್ಯಾವಳಿ ವೈರಲ್ ಆಗಿದೆ. ಇದೇ ವೇಳೆ ಪ್ರಾಧಿಕಾರದ ವಿಳಂಬ ನೀತಿ ಖಂಡಿಸಿ ಡಿಎಸ್‌ಎಸ್ ಕಾರ್ಯಕರ್ತರು ಬಿಟಿಡಿಎ ಎದುರು ಪ್ರತಿಭಟನೆ ನಡೆಸಿದರು.

# ವ್ಯಾಪಾರಿಗಳಿಗೆ ವಿನಾಕಾರಣ ತೊಂದರೆ



**ಗಂಗಾವತಿ:** ನಗರಸಭೆಯವರು ಸುಮಾರು ಒಂದುವರೆ ತಿಂಗಳ ಇಂದ ಎಲ್ಲಾ ಬೀದಿ ಬದಿಯ ವ್ಯಾಪಾರಿಗಳಿಗೆ ವಿನಾಕಾರಣ ತೆ-ೂಂದರೆ ಕೊಡುತ್ತಿದ್ದಾರೆ. ನಮ್ಮ ಗಂಗಾವತಿಯ ಪ್ರಗತಿಪರ ಬೀದಿ ಬದಿ ವ್ಯಾಪಾರಿಗಳು ಎಐಸಿಸಿಟಿಯು ಖಂಡಿಸುತ್ತದೆ. ವ್ಯಾಪಾರಿಗಳ ಸಾಮಾನುಗಳನ್ನು ಜಪ್ತಿ ಮಾಡಿ ತೆಗೆದುಕೊಂಡು ಹೋಗೋದು ಮತ್ತು ಪೊಲೀಸರ ಸಹಾಯದಿಂದ ಎಲ್ಲಾ ಬೀದಿ ಬದಿ ವ್ಯಾಪಾರಿಗಳನ್ನು ಬೀದಿ ಪಾಲು ಮಾಡಿರುತ್ತಾರೆ 2014 ಬೀದಿಬದೆ ಕಾಯ್ದೆ ಉಲ್ಲಂಘನೆ ಮಾಡಿ ಯಾವುದೇ ಪಟ್ಟಣ ವ್ಯಾಪಾರ ಸಮಿತಿ ಮಾಡದೆ ಹಾಗೂ ಸಮಿತಿಯಲ್ಲಿ ಚರ್ಚೆ ಮಾಡದೆ ಮಾಡೋದು ಕಾನೂನು ಬಾಹಿರ ಇದನ್ನು ಮಾನ್ಯ ಜಿಲ್ಲಾಧಿಕಾರಿಗಳು ಇವರ ಗಮನಕ್ಕೆ ದಿನಾಂಕ ಎಂಟು ಆರು 2026 ನಗರದ ಸಿಟಿ ಮಾರುಕಟ್ಟೆ ಬಂದಾಗ ಇವರ ಗಮನಕ್ಕೆ ತಂದಿದ್ದೇವೆ. ಮಾನ್ಯ ಜಿಲ್ಲಾಧಿಕಾರಿಗಳು ಮೌಖಿಕವಾಗಿ ಆದೇಶ ಮಾಡಿ ಇವರಿಗೆ ಟೌನ್ ವೆಂಡಿಂಗ್ ಕಾಮಿಡಿ ಮೀಟಿಂಗ್ ಮಾಡಲು ಆದೇಶ ಮಾಡಿರುತ್ತಾರೆ ಆದರೂ ಸಹ ಅವರ ಆದೇಶವನ್ನು ಪಾಲನೆ ಮಾಡದೆ ಮಾನ್ಯ ಪಾರಾಯುಕ್ತರು ನಗರಸಭೆ ಗಂಗಾವತಿ ಇವರು ಮತ್ತೆ ಬೀದಿಬದಿ ವ್ಯಾಪಾರಿಗಳನ್ನು ಒಕ್ಕಲೆಬಸಿತ್ತಿರುವುದು. ನಾವು ಖಂಡನೆ ಮಾಡುತ್ತೇವೆ. ಸುಮಾರು 3000 ಕುಟುಂಬಗಳು ಬೀದಿ ಪಾಲು ಆಗಿದ್ದಾರೆ. ಇದಕ್ಕೆ ಮಾನ್ಯ ಪೌರಾಯುಕ್ತರು ಕಾರಣ ಮುಂದಿನ ದಿನಗಳಲ್ಲಿ ನಾವೆಲ್ಲಾ ಉಗ್ರವಾದ ಪ್ರತಿಭಟನೆಯ ಮೂಲಕ ನಗರಸಭೆಯನ್ನು ಮುತ್ತಿಗೆ ಹಾಕುವುದರ ಮೂಲಕ ನಮ್ಮ ಹಕ್ಕುಗಳು ಈಡೇರವರೆಗೆ ನಾವು ಧರಣಿಗೆ ಕೊಡುತ್ತೇವೆ ಮಾಧ್ಯಮದ ಮುಖಾಂತರ ಪೌರಾಯುಕ್ತರಿಗೆ ತಿಳಿಸುತ್ತಿದ್ದೇವೆ. ನಾವೆಲ್ಲಾ ಕಾನೂನು ನರೆಯ ಪಡೆದು ನ್ಯಾಯಕ್ಕಾಗಿ ಹೋರಾಟ ಮಾಡುತ್ತೇವೆ ನಮ್ಮ ತಾಳ್ಮೆಯನ್ನು ಪರೀಕ್ಷೆ ಮಾಡಬೇಡಿ ನಾವೆಲ್ಲರೂ ಇವತ್ತು ನಾಳೆ ಎಂದು ತಾಳ್ಮೆಯಿಂದ ಇದ್ದೀವಿ ದಯಮಾಡಿ ನಮ್ಮ ತಾಳ್ಮೆಯನ್ನು ಮೀರಿಸಬೇಡಿ ಇದನ್ನು ತಾವು ಗಂಭೀರವಾಗಿ ತೆಗೆದು ಒಂದು ನಿರ್ಧಾರಕ್ಕೆ ಬರಬೇಕು.

# ಶಿಸ್ತಿನ ಸಿಪಾಯಿ ಬ.ನಾ ರವಿ ಅವರ ಹುಟ್ಟುಹಬ್ಬ ಆಚರಣೆ



**ಪೀಣ್ಯ ದಾಸರಹಳ್ಳಿ:** ಕ್ಷೇತ್ರದ ಹೆಗ್ಗನಹಳ್ಳಿಯ ಸರಳ ಸಜ್ಜನಿಕೆ ವ್ಯಕ್ತಿತ್ವದ ಹೊಂದಿದ, ನಿಷ್ಠೆ ಪ್ರಾಮಾಣಿಕತೆ ಪ್ರಬುದ್ಧತೆಯುಳ ವ್ಯಕ್ತಿ ಶಿಸ್ತಿನ ಸಿಪಾಯಿ ವಿದ್ಯಾರ್ಥಿಗಳ ಮಿತ್ರ ಯಾರಾದರೂ ಇದ್ದರೆ ಅವರೆ ಹೆಗ್ಗನಹಳ್ಳಿಯ ವಾರ್ಡಿನ ಕಾಂಗ್ರೆಸ್ ಪ್ರಭಾವಿ ಯುವ ನಾಯಕ ಹಾಗೂ ಜಿಬಿಎ ಪ್ರಬಲ ಆಕಾಂಕ್ಷಿ ಅಭ್ಯರ್ಥಿ ಮತ್ತು ಹೆಸರಾಂತ ಉದ್ಯಮಿ ಎಂದರೆ ತಪ್ಪಾಗಲಾರದು ಎಂದು ಜನ ಪ್ರಿಯ ಸಮಾಜ ಸೇವಕ ಚಿಂತಕರು ವಾಗ್ಮಿಗಳು ಬುದ್ಧಿಜೀವಿಗಳು ಮತ್ತು ರಾಷ್ಟ್ರೀಯ ಅಂತಾರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತರಾದ ಡಾ. ಸಂಗನ ಬಸಪ್ಪ ಬಿರಾದಾರ್ ಹೇಳಿದರು.

ಅವರು ಹೆಗ್ಗನಹಳ್ಳಿ ಮುಖ್ಯ ರಸ್ತೆಯಲ್ಲಿರುವ ತಮ್ಮ ಕಚೇರಿಯ ಮೆಲ್ಭಾಗದ ಹಾಲಿನಲ್ಲಿ ಪರಮ ಪೂಜ್ಯ ಶ್ರೀ ಅರೆಶಂಕರ ಮಠದ ಸಿದ್ದರಾಮ ಚೈತನ್ಯ ಸ್ವಾಮಿ ಜಿ, ಬ.ನಾ ರವಿ ಅವರ ಧರ್ಮ ಪತ್ನಿ ಶ್ರೀಮತಿ ಪಾರ್ವತಿ, ಕುಟುಂಬಸ್ಥರ ಮತ್ತು ಅಪಾರ ಅಭಿಮಾನಿಗಳ ನೇತೃತ್ವದಲ್ಲಿ ಆಯೋಜಿಸಿದ್ದ ಕಾಂಗ್ರೆಸ್ ಪ್ರಭಾವಿ ನಾಯಕ ಬಾ ನಾ ರವಿ ಅವರ ಹುಟ್ಟು ಹಬ್ಬದ ನಿಮಿತ್ತ ಬ ನಾ ರವಿ ಅವರಿಗೆ ಶಾಲು ಹೊದಿಸಿ ಮೈಸೂರು ಪೇಟಾ ಧರಿಸಿ ಫಲಪುಷ್ಪದೊಂದಿಗೆ ಗೌರವಿಸಿ ಸಿಹಿ ತಿನ್ನಿಸಿ ಶುಭ ಕೋರಿ ಈಗಿನ ಪರಿಸ್ಥಿತಿಯಲ್ಲಿ ಬ ನಾ ರವಿ ಅವರು ಈ ಭಾಗದ ಮುತ್ಸದ್ದಿ ರಾಜಕಾರಣಿ ಸುಸಂಸ್ಕೃತ ವ್ಯಕ್ತಿ ಇವರಿಗೆ ಮುಂದಿನ ದಿನಗಳಲ್ಲಿ ಜನರ ಸೇವೆ ಮಾಡಲು ರಾಜಕೀಯ ಶಕ್ತಿ ಕರುಣಿಸಲಿ ಎಂದು ಡಾ. ಬಿರಾದಾರ್ ಶುಭ ಕೋರಿ ಸಮಸ್ತ ನಾಗರಿಕರನ್ನು ಉದ್ದೇಶಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಕೆಪಿಸಿಸಿ ಕಾರ್ಮಿಕ ವಿಭಾಗದ ಪುಟ್ಟಸ್ವಾಮಿ ಗೌಡ, ಮಾಜಿ ಪಾಲಿಕೆ ಸದಸ್ಯ ಮನೋಹನ್ ಕುಮಾರ್, ಕಾಂಗ್ರೆಸ್ ಮುಖಂಡ ಎನ್ ರಮೇಶ್ ಗೌಡ್ರು, ಸುವರ್ಣ ಕರ್ನಾಟಕ ಕಾರ್ಮಿಕರ ವೇದಿಕೆಯ ಸಂಸ್ಥಾಪಕ ರಾಜ್ಯಾಧ್ಯಕ್ಷ ಚನ್ನಕೇಶವ, ಆಂಜಿನಪ್ಪ, ಉಮೇಶ್ ರಾವಣ್, ಮಂಜುನಾಥ್, ವಿದ್ಯಾ ಭೂಷಣ್ ಇಂಟರ್ ನ್ಯಾಷನಲ್ ಸ್ಕೂಲ್ ಮುಖ್ಯೋಪಾಧ್ಯಾಯರು ಶಿಕ್ಷಕ ಶಿಕ್ಷಕಿಂ-ಯರು ಸಿಬ್ಬಂದಿ ವರ್ಗದವರು ಶಿಲ್ಪ ರಾಣಿ, ಗಾಯತ್ರಿ, ಸವಿತಾ ಸೇರಿದಂತೆ ಕಾಂಗ್ರೆಸ್ ಮುಖಂಡರು ಮಹಿಳೆಯರು ಕಾರ್ಯಕರ್ತರು ಮುಂತಾದವರು ಬ ನಾ ರವಿ ರವರಿಗೆ ಹೂವು ಗುಚ್ಛು ನೀಡಿ ಸಿಹಿ ತಿನ್ನಿಸಿ ಶುಭ ಹಾರೈಸಿದರು.

# ನಕಲಿ ಬಿತ್ತನೆ ಬೀಜ, ರಸಗೊಬ್ಬರ ಮಾರಾಟ ತಡೆಗೆ ಕ್ರಮ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ಜಿಲ್ಲೆಯಲ್ಲಿ ನಕಲಿ ಬಿತ್ತನೆ ಬೀಜ, ರಸಗೊಬ್ಬರ ಮತ್ತು ಕೀಟನಾಶಕ ಮಾರಾಟ ತಡೆಗೆ ಕಟ್ಟುನಿಟ್ಟಿನ ಕ್ರಮ ಜರುಗಿಸುವಂತೆ ಜಿಲ್ಲಾಧಿಕಾರಿ ಸಂಗಪ್ಪ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಮಟ್ಟದ ವಿಶೇಷ ಕಾರ್ಯಪಡೆ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರಸಕ್ತ ಹಂಗಾಮಿನಲ್ಲಿ ರೈತರಿಗೆ ಗುಣಮಟ್ಟದ ಬಿತ್ತನೆ ಬೀಜ, ರಸಗೊಬ್ಬರ ಹಾಗೂ ಕೀಟನಾಶಕಗಳು ಸಮರ್ಪಕವಾಗಿ ಲಭ್ಯವಾಗುವಂತೆ ನೋಡಿಕೊಳ್ಳುವದರ ಜೊತೆಗೆ ನಕಲಿ ಕೃಷಿ ಪರಿಕರಗಳ ಮಾರಾಟವನ್ನು ಸಂಪೂರ್ಣವಾಗಿ ತಡೆಗಟ್ಟಲು ವಿಶೇಷ ಕಾರ್ಯಪಡೆ ರಚಿಸಲಾಗಿದೆ ಎಂದರು.

ರೈತರಿಗೆ ಗುಣಮಟ್ಟದ ಕೃಷಿ ಪರಿಕರಗಳು ದೊರೆಯುವಂತೆ ಮಾಡುವುದು ಇಲಾಖೆಯ ಪ್ರಮುಖ ಜವಾಬ್ದಾರಿಯಾಗಿದೆ. ನಕಲಿ ಬಿತ್ತನೆ ಬೀಜ, ಕಳಪೆ ಗುಣಮಟ್ಟದ ರಸಗೊಬ್ಬರ ಹಾಗೂ ಕೀಟನಾಶಕಗಳ ಮಾರಾಟದಿಂದ ರೈತರು ಅಪಾರ ಪ್ರಮಾಣದಲ್ಲಿ ಆರ್ಥಿಕ ನಷ್ಟ ಅನುಭವಿಸುತ್ತಿದ್ದಾರೆ. ಇಂತಹ ಅಕ್ರಮ ಚಟುವಟಿಕೆಗಳಲ್ಲಿ ತೊಡಗಿರುವವರ ವಿರುದ್ಧ ನಿರ್ಧಾಕ್ಷಿಣ್ಯವಾಗಿ ಕಠಿಣ ಕಾನೂನು ಕ್ರಮಕೈಗೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕಳೆದ ಸಾಲಿನಲ್ಲಿ ನಿಯಮಗಳನ್ನು ಉಲ್ಲಂಘಿಸಿ ಮಾರಾಟ, ದಾಸ್ತಾನು ಮತ್ತು ಸಾಗಾಣಿಕೆ ಮಾಡುತ್ತಿದ್ದವರ ಮೇಲೆ ಒಟ್ಟು 15 ಪ್ರಕರಣ ಹಾಗೂ ಕಳಪೆ ಮಟ್ಟದ ಬೀಜದ ಮಾದರಿಗಳ ಸಂಖ್ಯೆ 6 ಇದ್ದು, 6 ಪ್ರಕರಣ ದಾಖಲಿಸಲಾಗಿದೆ. ಕಳಪೆ ಮಟ್ಟದ ರಸಗೊಬ್ಬರ ಮಾದರಿ ಸಂಖ್ಯೆ 17 ಇದ್ದು, ಅದರಲ್ಲಿ 11ರ ಮೇಲೆ ಪ್ರಕರಣ ದಾಖಲಿಸಲಾಗಿದೆ. ಅದರಲ್ಲಿ 3 ಪ್ರಕರಣಗಳ ಮೇಲೆ ಎಫ್‌ಐಆರ್ ಕೂಡಾ ಮಾಡಲಾಗಿದೆ. ಪ್ರಸಕ್ತ ಸಾಲಿನಲ್ಲಿ ಅನಧಿಕೃತ ದಾಸ್ತಾನು ಹಾಗೂ ಸಿಐಆರ್ ನೋಂದಣಿಯಾಗದ ಕೀಟನಾಶಕ ಅಂಗಡಿ ಮೇಲೆ ತಲಾ ಒಂದು ಪ್ರಕರಣ ದಾಖಲಿಸಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕ ಟಿ.ಎಸ್.ರುದ್ರೇಶಪ್ಪ ಸಭೆಗೆ ಮಾಹಿತಿ ನೀಡಿದರು.

ಬೀಜ ರಸಗೊಬ್ಬರ ಮತ್ತು ಕೀಟನಾಶಕಗಳ ಬೇಡಿಕೆ ಹೆಚ್ಚಾಗುತ್ತಿರುವ ಹಿನ್ನಲೆಯಲ್ಲಿ ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿ ವಿಶೇಷ ತಪಾಸಣಾ ತಂಡಗಳು ಮಾರಾಟ ಮಳಿಗೆಗಳ ಮೇಲೆ ನಿರಂತರವಾಗಿ ನಿಗಾವಹಿಸಬೇಕು. ಕೃಷಿ, ತೋಟಗಾರಿಕೆ, ಸಹಕಾರ, ಕಾನೂನು ಮಾಪನಶಾಸ್ತ್ರ ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳು ಜಂಟಿಯಾಗಿ ದಾಳಿ ನಡೆಸಿ ಪರವಾನಗಿ, ದಾಸ್ತಾನು ಹಾಗೂ ಮಾರಾಟ ದಾಖಲೆಗಳನ್ನು ಪರಿಶೀಲಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ಧಾರ್ಥ ಗೋಯಲ್, ತೋಟಗಾರಿಕೆ ಜಂಟಿ ನಿರ್ದೇಶಕ ರವೀಂದ್ರ ಹಕಾಟಿ, ರೇಷ್ಮೆ ಇಲಾಖೆಯ ಉಪನಿರ್ದೇಶಕ ಎಸ್.ಎಂ.ಕೋರೆ, ಸಹಕಾರ ಇಲಾಖೆಯ ಉಪ ನಿಬಂಧಕ ದಾನಯ್ಯ ಹಿರೇಮಠ, ಪಶು ಇಲಾಖೆಯ ಉಪನಿರ್ದೇಶಕ ಎಸ್.ಎಚ್. ಕರಡಿಗುಡ್ಡ, ಬಾಗಲಕೋಟೆ ಕೃಷಿ ಇಲಾಖೆಯ ಉಪನಿರ್ದೇಶಕ ಕಾಶಿನಾಥ ಅಗಸನಾಳ, ಜಮಖಂಡಿ ವಿಭಾಗದ ಉಪನಿರ್ದೇಶಕಿ ಮಂಜುಳಾ ಬಸರಡ್ಡಿ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಉಡಿ ತುಂಬುವ ಸಂಪ್ರದಾಯ: ಶ್ರೇಷ್ಠವಾದ ಧಾರ್ಮಿಕ ಆಚರಣೆ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ತಾಲ್ಲೂಕಿನ ಹೊಸ ಮುರನಾಳ ಗ್ರಾಮದಲ್ಲಿ ಅಧಿಕ ಮಾಸದ ಪ್ರಯುಕ್ತ ಗ್ರಾಮದೇವಿ ದೇವಸ್ಥಾನದಲ್ಲಿ ಶುಕ್ರವಾರ ವಿಶ್ವಕರ್ಮ ವಿಕಾಸ ಕ್ಷೇಮಾಭಿವೃದ್ಧಿ ಸಂಘ ಹಾಗೂ ಸಮಾಜದ ವತಿಯಿಂದ 33 ಮುತ್ತೈದೆಯರಿಗೆ ಉಡಿ ತುಂಬುವ ವಿಶೇಷ ಧಾರ್ಮಿಕ ಕಾರ್ಯಕ್ರಮವನ್ನು ಭಕ್ತಿಭಾವದಿಂದ ನೆರವೇರಿಸಲಾಯಿತು.

ಅಧಿಕ ಮಾಸದಲ್ಲಿ ಮುತ್ತೈದೆಯರಿಗೆ ಉಡಿ ತುಂಬುವ ಸಂಪ್ರದಾಯವು ಅತ್ಯಂತ ಶ್ರೇಷ್ಠವಾದ ಧಾರ್ಮಿಕ ಆಚರಣೆಯಾಗಿದೆ. ಈ ಕಾರ್ಯಕ್ರಮದ ಮೂಲಕ 33 ಕೋಟಿ ದೇವತೆಗಳನ್ನು ಪ್ರತಿನಿಧಿಸುವ ಅಷ್ಟವಸುಗಳು, ಏಕಾದಶ ರುದ್ರರು ಹಾಗೂ ದ್ವಾದಶ ಆದಿತ್ಯರನ್ನು ಆರಾಧಿಸಿ ಅವರ ಆಶೀರ್ವಾದವನ್ನು ಪಡೆಯಲಾಗುತ್ತದೆ ಎಂಬ ನಂಬಿಕೆ ಇದೆ.

ಕಾರ್ಯಕ್ರಮದಲ್ಲಿ ಮುತ್ತೈದೆಯರಿಗೆ ಸೀರೆ, ಕುಂಕುಮ, ಅರಿಶಿನ, ಹೂವು ಹಾಗೂ ವಿವಿಧ ಮಂಗಳ ದ್ರವ್ಯಗಳನ್ನು ನೀಡಿ ಗೌರವಿಸಲಾಯಿತು.

ಬೆಳಗಿನ ಜಾವ ಗ್ರಾಮದೇವತೆಗೆ ಪಂಚಾಮೃತ ಅಭಿಷೇಕ, ಶ್ರೀಚಕ್ರಕ್ಕೆ ಕುಂಕುಮಾರ್ಚನೆ ಹಾಗೂ ಶ್ರೀಸೂಕ್ತ, ಅಲಂಕಾರ ಸೇರಿದಂತೆ ಧಾರ್ಮಿಕ ವಿಧಿವಿಧಾನಗಳು ಹಾಗೂ ಮಂಗಳಾರತಿ ಮಳೆರಾಜೇಂದ್ರಸ್ವಾಮಿ ಮಠ ಪೂಜ್ಯರಾದ ಗುರುನಾಥಸ್ವಾಮಿಗಳು ಅರ್ಚಕರು, ಸಮಾಜದ ಹಿರಿಯರು ನೇತೃತ್ವದಲ್ಲಿ ನೆರವೇರಿಸಲಾಯಿತು.

ಮಳೆರಾಜೇಂದ್ರಸ್ವಾಮಿ ಮಠ ಮಾತೋಶ್ರೀಯರಿಂದ 33 ಜನ ಮುತ್ತೈದೆಯರಿಗೆ ಉಡಿ ತುಂಬಿ ಹರಸಲಾಯಿತು.

ಅಧಿಕ ಮಾಸದಲ್ಲಿ 33 ಮುತ್ತೈದೆಯರಿಗೆ ಉಡಿ ತುಂಬುವುದು ನಮ್ಮ ಸಂಪ್ರದಾಯದ ವಿಶೇಷ ಆಚರಣೆ-ಯಾಗಿದೆ. ಸಮಾಜದ ಏಕತೆ ಹಾಗೂ ಧಾರ್ಮಿಕ ಮೌಲ್ಯಗಳ ಉಳಿವಿಗಾಗಿ ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದೇವೆ ಎಂದು ವಿಶ್ವಕರ್ಮ ಸಮಾಜ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಅಶೋಕ ಪತ್ತಾರ, ಉಪಾಧ್ಯಕ್ಷ ಚಂದ್ರಶೇಖರ ಶಿಲ್ಪಿ, ರುಕ್ಮಣ್ಣ ಪತ್ತಾರ, ಗಂಗಾದರ ಬಡಿಗೇರ, ಹೇಳಿದರು.

ಕಾರ್ಯಕ್ರಮದಲ್ಲಿ ಶಂಕ್ರಪ್ಪ ಪತ್ತಾರ, ತಮ್ಮಣ್ಣ ಪತ್ತಾರ, ಈರಣ್ಣ ಬಡಿಗೇರ, ಮಳಿಯಪ್ಪ ಬಡಿಗೇರ, ನಾರಾಯಣ ಬಡಿಗೇರ, ಅಪ್ಪಣ್ಣ ಬಡಿಗೇರ, ಯಳ್ಳಿಗುತ್ತಿ ಹನಮಂತ ಪತ್ತಾರ, ಮಂಜು ಪತ್ತಾರ, ಮೌನೇಶ ಬಡಿಗೇರ, ಶಿವಪ್ಪ ಬಡಿಗೇರ, ಲಕ್ಷಣ ಸೋನಾರ, ದಾನಪ್ಪ ಬಡಿಗೇರ, ಈರಪ್ಪ ಪತ್ತಾರ ಕೇರೂರ, ಸೇರಿದಂತೆ ಸಮಾಜದ ಹಿರಿಯರು, ಮುಖಂಡರು, ಮಹಿಳೆಯರು ಹಾಗೂ ಗ್ರಾಮಸ್ಥರು ಇದ್ದರು.

# 1.05 ಕೋಟಿ ರೂ. ವೆಚ್ಚದ ಡಾಂಬರೀಕರಣ ಕಾಮಗಾರಿಗೆ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ಬಾಗಲಕೋಟೆ ನವನಗರದ ಬಸ್ ನಿಲ್ದಾಣ ಆವರಣದ ಪೂರ್ವ ಹಾಗೂ ದಕ್ಷಿಣ ಭಾಗದಲ್ಲಿ 1.05 ಕೋಟಿ ರೂ.ಗಳ ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿರುವ ಡಾಂಬರೀಕರಣ ಕಾಮಗಾರಿಗೆ ಶಾಸಕ ಉಮೇಶ ಮೇಟಿ ಶನಿವಾರ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕರು, ಸಾರ್ವಜನಿಕರಿಗೆ ಉತ್ತಮ ಸಾರಿಗೆ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಬಸ್ ನಿಲ್ದಾಣದ ಮೂಲಭೂತ ಸೌಕರ್ಯ ಅಭಿವೃದ್ಧಿಗೆ ಸರ್ಕಾರ ಹೆಚ್ಚಿನ ಆದ್ಯತೆ ನೀಡುತ್ತಿದೆ. ನವನಗರದ ಬಸ್ ನಿಲ್ದಾಣಕ್ಕೆ ಪ್ರತಿದಿನ ಸಾವಿರಾರು ಪ್ರಯಾಣಿಕರು ಆಗಮಿಸುತ್ತಿದ್ದು, ಆವರಣದಲ್ಲಿ ಮಳೆಯಾದರೆ ನೀರು ನಿಲ್ಲುತ್ತಿತ್ತು. ಇದರಿಂದ ಪ್ರಯಾಣಿಕರು ಹಾಗೂ ವಾಹನ ಚಾಲಕರು ತೊಂದರೆ ಅನುಭವಿಸುತ್ತಿದ್ದರು. ಈಗ ಡಾಂಬರೀಕರಣ ಕಾಮಗಾರಿ ಕೈಗೊಳ್ಳುತ್ತಿದ್ದು, ಕಾಮಗಾರಿ ಪೂರ್ಣಗೊಂಡ ಬಳಿಕ ಸುಗಮ ಸಂಚಾರಕ್ಕೆ ಅನುಕೂಲವಾಗಲಿದೆ ಎಂದರು. ಕಾಮಗಾರಿಯನ್ನು ಗುಣಮಟ್ಟದೊಂದಿಗೆ ಹಾಗೂ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಸಂಬಂಧಿಸಿದ ಅಧಿಕಾರಿಗಳು ಮತ್ತು ಗುತ್ತಿಗೆದಾರರಿಗೆ ಸೂಚನೆ ನೀಡಿದ ಶಾಸಕ ಮೇಟಿ, ಸಾರ್ವಜನಿಕರ ಹಣವನ್ನು ಸಮರ್ಪಕವಾಗಿ ಬಳಸಿಕೊಂಡು ಶಾಶ್ವತ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಬೇಕು ಎಂದು ತಿಳಿಸಿದರು. ಬಸ್ ನಿಲ್ದಾಣ ಆವರಣ ಅಭಿವೃದ್ಧಿಯಿಂದ ಪ್ರಯಾಣಿಕರಿಗೆ ಸ್ವಚ್ಛ ಹಾಗೂ ಸುರಕ್ಷಿತ ವಾತಾವರಣ ನಿರ್ಮಾಣವಾಗಲಿದ್ದು, ಮಳೆಗಾಲದಲ್ಲಿ ಉಂಟಾಗುವ ನೀರು ನಿಲ್ಲುವ ಸಮಸ್ಯೆಗೂ ಪರಿಹಾರ ದೊರೆಯಲಿದೆ ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲ ಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಸ್.ಜಿ.ನಂಜಯ್ಯನಮಠ, ಡಾಂಬರೀಕರಣ ಕಾಮಗಾರಿ ನಿಗದಿತ ಅವಧಿಯಲ್ಲಿ ಗುಣಮಟ್ಟದಿಂದ ಕೂಡಿರಬೇಕು. ಬಹಳ ದಿನಗಳ ಕಾಲ ಇರಬೇಕು ಎಂದರು.

ಕಾರ್ಯಕ್ರಮದಲ್ಲಿ ಮಾಜಿ ಸಚಿವ ಎಸ್.ಆರ್.ಪಾಟೀಲ, ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪ್ರಕಾಶ ತಪಶೆಟ್ಟಿ, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಅಧ್ಯಕ್ಷ ಅನಿಲ ದಡ್ಡಿ, ಬುಡಾ ಅಧ್ಯಕ್ಷ ಅಬ್ದುಲರಜಾಕ ಬೇನೂರ, ಮಾಜಿ ಜಿ.ಪಂ ಅಧ್ಯಕ್ಷ ಬಸವಂತಪ್ಪ ಮೇಟಿ, ಮಲ್ಲಿಕಾರ್ಜುನ ಚರಂತಿಮಠ, ಎಸ್.ಎಂ.ರಾಂಪುರ, ಸಂತೋಷ ಹೊಕ್ರಾಣಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಅಡ್ಕರ್ ನಿಗಮ ಅಧ್ಯಕ್ಷನ ಬೆಂಬಲಿಗರಿಂದ ಪ್ರಾಣ ಭಯ, ಕ್ರಮಕ್ಕೆ ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಕರ್ನಾಟಕ ರಾಜ್ಯದ ಲೀಡ್ಕರ್ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ್ ಬೆಂಬಲಗಳಿಂದ ನಮಗೆ ಪ್ರಾಣ ಭಯ ಇದೆ ಅವರಿಂದ ನಮಗೆ ರಕ್ಷಣೆ ಕೊಡಿ ಎಂದು ಸಿರುಗುಪ್ಪ ಮೂಲದ ದಳವಾಯಿ ಅಂಬಣ್ಣ ಕುಟುಂಬಸ್ಥರು ಶನಿವಾರ ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದರು .ತಮ್ಮ ಮೇಲೆ ನಡೆದಿರುವ ಅಪಹರಣ, ಮಾರಣಾಂತಿಕ ಹಲ್ಲೆ, ಜಾತಿ ನಿಂದನೆ, ಹಣ ದೋಚಿಕೆ ಹಾಗೂ ಜೀವ ಬೆದರಿಕೆ ಪ್ರಕರಣದ ಕುರಿತು ವಿವರಿಸಿ ಆರೋಪಿಗಳ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಪೊಲೀಸ್ ಇಲಾಖೆಯನ್ನು ಆಗ್ರಹಿಸಿದರು. ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಪತ್ರಿಕಾ ಭವನದಲ್ಲಿ ಇಂದು ನಡೆದ ಸುದ್ದಿಗೋಷ್ಠಿಯಲ್ಲಿ ಸಂಗೀತ ಕಲಾವಿದ ದಳವಾಯಿ ಅಂಬಣ್ಣ ಹಾಗೂ ಅವರ ಸಹೋದರ ವೀರೇಶ್ ಮಾತನಾಡಿ, ದಳವಾಯಿ ಅಂಬಣ್ಣ, ತಾನು ಸಿರುಗುಪ್ಪ ನಿವಾಸಿಯಾಗಿದ್ದು, ಮೇ 20ರಂದು ಪರಿಚಯಸ್ಥರಾದ ನಿರಂಜನ ಮುಂಡರಗಿ ಅವರು ದೂರವಾಣಿ ಮೂಲಕ ಸಂಪರ್ಕಿಸಿ, ಮರುದಿನ ಭೇಟಿಯಾಗುವಂತೆ ತಿಳಿಸಿದ್ದರೆಂದು ಹೇಳಿದರು. ಮೇ 21ರಂದು ಬೆಳಿಗ್ಗೆ ಸಿರುಗುಪ್ಪ ಬಸ್ ನಿಲ್ದಾಣದ ಬಳಿ ಕರೆಯಿಸಿಕೊಂಡು, ಸಂಗೀತ ಕಾರ್ಯಕ್ರಮದ ಕುರಿತು ಮಾತನಾಡಬೇಕಿದೆ ಎಂದು ಹೇಳಿ ಇನ್ನೋವಾ ಕಾರಿನಲ್ಲಿ ಬಳ್ಳಾರಿಗೆ ಕರೆದುಕೊಂಡು ಹೋಗಲಾಗಿದೆ ಎಂದು ಆರೋಪಿಸಿದರು.

ಬಳ್ಳಾರಿಗೆ ಕರೆತಂದು ಮೊದಲು ಕೋಟೆ ಪ್ರದೇಶದಲ್ಲಿರುವ ಕರ್ನಾಟಕ ರಾಜ್ಯದ ಲೀಡ್ಕರ್ ನಿಗಮ ಅಧ್ಯಕ್ಷ ಮುಂಡರಗಿ ನಾಗರಾಜ್ ಕಚೇ-ರಿಯೊಂದಕ್ಕೆ ಹಾಗೂ ಬಳಿಕ ಖಾಸಗಿ ಪೋಲೋ ಹೋಟೆಲ್‌ಗೆ ಕರೆದೊಯ್ದು, ರೂಂನಲ್ಲಿ ಕೂಡಿ ಹಾಕಿ ತಮ್ಮ ಮೇಲೆ ಹಲ್ಲೆ ನಡೆಸಲಾಗಿದೆ ಎಂದು ದೂರಿದರು. ನಿರಂಜನ ಮುಂಡರಗಿ, ನಟರಾಜ ಗೌಡ, ಫೋಟೋರಾಜ್ ಸೇರಿದಂತೆ ಕಾರಿನಲ್ಲಿದ್ದ ಇತರರು ಸೇರಿ ಮುಖ, ಬೆನ್ನು, ತಲೆ ಹಾಗೂ ದೇಹದ ವಿವಿಧ ಭಾಗಗಳಿಗೆ ಹಲ್ಲೆ ನಡೆಸಿದ್ದು, ಈ ವೇಳೆ ಒಂದು ಹಲ್ಲು ಮುರಿದಿದೆ ಎಂದು ಅವರು ಆರೋಪಿಸಿದರು.

ಇದಲ್ಲದೆ, ತನ್ನನ್ನು ಬೆತ್ತಲೆಗೊಳಿಸಿ ಅಮಾನವೀಯವಾಗಿ ಹಲ್ಲೆ ನಡೆಸಿದ್ದು, ಜಾತಿ ನಿಂದನೆ ಮಾಡಿರುವುದಲ್ಲದೆ, ಬಲವಂತವಾಗಿ ಖಾಲಿ ಬಾಂಡ್ ಪೇಪರ್ ಹಾಗೂ ಬಿಳಿ ಹಾಳೆಗಳ ಮೇಲೆ ಸಹಿ ಮಾಡಿಸಿಕೊಂಡಿದ್ದಾರೆ ಎಂದು ತಿಳಿಸಿದರು. ತಮ್ಮ ಮೊಬೈಲ್ ಹಾಗೂ ಫೋನ್‌ಪೇ ಪಾಸ್‌ವರ್ಡ್‌ಗಳನ್ನು ಬಲವಂತವಾಗಿ ಪಡೆದು, ಖಾತೆಯಲ್ಲಿದ್ದ ಸುಮಾರು ಮೂರು ಲಕ್ಷ ರೂಪಾಯಿಗಳ ಪೈಕಿ ಎರಡು ಹಂತಗಳಲ್ಲಿ ಒಟ್ಟು ₹1.50 ಲಕ್ಷ ಹಣವನ್ನು ವರ್ಗಾವಣೆ ಮಾಡಿಕೊಂಡಿದ್ದಾರೆ ಎಂದು ಗಂಭೀರ ಆರೋಪ ಮಾಡಿದರು.

ಘಟನೆ ಕುರಿತು ಯಾರಿಗಾದರೂ ಮಾಹಿತಿ ನೀಡಿದರೆ ಜೀವ ತೆಗೆಯುವುದಾಗಿ ಬೆದರಿಕೆ ಹಾಕಿ, ನಂತರ ಬಳ್ಳಾರಿಯ ಎಸ್‌ಪಿ ಸರ್ಕಲ್ ಬಳಿ ಬಿಟ್ಟು ಹೋಗಿದ್ದಾರೆ ಎಂದು ಅವರು ಹೇಳಿದರು. ಭಯದ ವಾತಾವರಣದಿಂದ ತಕ್ಷಣ ದೂರು ನೀಡಲು ಸಾಧ್ಯವಾಗಲಿಲ್ಲ. ಆರೋಗ್ಯದಲ್ಲಿ ತೀವ್ರ ಸಮಸ್ಯೆ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಬಿಮ್ಸ್ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದ ಬಳಿಕ ಕುಟುಂಬ ಸದಸ್ಯರು ಹಾಗೂ ಹಿರಿಯರ ಸಲಹೆಯಂತೆ ಪೊಲೀಸರಿಗೆ ದೂರು ಸಲ್ಲಿಸಲಾಗಿದೆ ಎಂದು ವಿವರಿಸಿದರು.

ಆರೋಪಿಗಳಾದ ನಿರಂಜನ ಮುಂಡರಗಿ, ನಟರಾಜ ಗೌಡ, ಫೋಟೋರಾಜ್ ಹಾಗೂ ಘಟನೆಯಲ್ಲಿ ಭಾಗಿಯಾಗಿರುವ ಇನ್ನಿತರರ ವಿರುದ್ಧ ಅಪಹರಣ, ಹಲ್ಲೆ, ಜಾತಿ ನಿಂದನೆ, ಹಣ ದೋಚಿಕೆ ಮತ್ತು ಜೀವ ಬೆದರಿಕೆ ಪ್ರಕರಣಗಳನ್ನು ದಾಖಲಿಸಿ ಕಾನೂನು ಪ್ರಕಾರ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಅಂಬಣ್ಣ ಹಾಗೂ ವೀರೇಶ್ ಒತ್ತಾಯಿಸಿದರು.

ಅಲ್ಲದೆ, ಈ ಪ್ರಕರಣದ ಆರೋಪಿಗಳಿಂದ ತಮ್ಮ ಹಾಗೂ ತಮ್ಮ ಕುಟುಂಬದ ಸದಸ್ಯರ ಜೀವಕ್ಕೆ ಅಪಾಯ ಇರುವುದರಿಂದ ಸೂಕ್ತ ಪೊಲೀಸ್ ರಕ್ಷಣೆ ಒದಗಿಸಬೇಕು. ಭವಿಷ್ಯದಲ್ಲಿ ಯಾವುದೇ ಅನಾಹುತ ಸಂಭವಿಸಿದರೆ ಅದಕ್ಕೆ ಆರೋಪಿಗಳೇ ನೇರ ಹೊಣೆಗಾರರು ಎಂದು ಸುದ್ದಿಗೋಷ್ಠಿಯಲ್ಲಿ ಎಚ್ಚರಿಕೆ ನೀಡಿದರು.

# ಉಪ ನಿರ್ದೇಶಕರಿಗೆ ದಂಡ..!

**ಕಲಬುರಗಿ:** ಸಕಾಲಕ್ಕೆ ಮಾಹಿತಿ ನೀಡದೆ ನಿರ್ಲಕ್ಷ್ಯ ವಹಿಸಿ ಆಯೋಗದ ಆದೇಶ ಪಾಲನೆ ಮಾಡದ ಸಮಾಜ ಕಲ್ಯಾಣ ಇಲಾಖೆಯ ಇಬ್ಬರು ಉಪ ನಿರ್ದೇಶಕರಿಗೆ ಮಾಹಿತಿ ಆಯೋಗ ಕಲ್ಬುರ್ಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಶ್ರೀ ಬಿ.ವೆಂಕಟಸಿಂಗ್ ದಂಡ ವಿಧಿಸಿದ್ದಾರೆ.

ರಾಯಚೂರಿನ ರಂಗಲಿಂಗನ ಗೌಡ ಎನ್ನುವವರು ಮಾಹಿತಿ ಹಕ್ಕು ಅಧಿನಿಯಮದಡಿ ಕೇಳಿದ ಮಾಹಿತಿಯನ್ನು ಎರಡು ವರ್ಷವಾದರು ನೀಡದ ಕಾರಣ ಅವರು ಆಯೋಗಕ್ಕೆ ಸಲ್ಲಿಸಿದ ಮೇಲ್ಮನವಿ ವಿಚಾರಣೆ ನಡೆಸಿದ ಆಯೋಗ ರಾಯಚೂರಿನಲ್ಲಿ ಈ ಹಿಂದೇ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಶ್ರೀಮತಿ ವಿಜಯ ಲಕ್ಷ್ಮೀ ಅವರಿಗೆ 10 ಸಾವಿರ ಹಾಗೂ ರಾಯಚೂರಿನ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಶ್ರೀ ಶಿವಪ್ಪ ಅವರಿಗೆ 5 ಸಾವಿರ ರೂಪಾಯಿಗಳ ದಂಡ ವಿಧಿಸಿದೆ.

ಮೇಲ್ಮನವಿದಾರರು ಕೋರಿದ ಮಾಹಿತಿ ನೀಡುವಂತೆ ಆಯೋಗ ಮಾಡಿದ ಆದೇಶ ಪಾಲನೆ ಮಾಡದೆ ಹಾಗೂ ವಿಚಾರಣೆಗೂ ಹಾಜರಾಗದ ಕಾರಣ ಹಾಲಿ ಶಹಾಪುರ ತಾಲೂಕಿನ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕಿ ಶ್ರೀಮತಿ ವಿಜಯಲಕ್ಷ್ಮೀ ಅವರಿಗೆ ಈ ಹಿಂದೇ 5 ಸಾವಿರ ದಂಡ ವಿಧಿಸಿ ಸದ್ರಿ ದಂಡ ಪಾವತಿ ಮಾಡಿ ಮುಂದಿನ ವಿಚಾರಣೆಗೆ ಹಾಜರಾಗಿ ಮಾಹಿತಿ ನೀಡುವಂತೆ ಆಯೋಗ ಮಾಡಿದ ಆದೇಶ ಪಾಲನೆ ಮಾಡದೆ ನಿರ್ಲಕ್ಷ್ಯ ತೋರಿದ ಕಾರಣ ದಂಡದ ಪ್ರಮಾಣವನ್ನು 10 ಸಾವಿರಕ್ಕೆ ಹೆಚ್ಚಿಸಿ ಆಯೋಗ ಆದೇಶ ಮಾಡಿದೆ.

ಅದೇ ರೀತಿ ರಾಯಚೂರಿನಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಶಿವಪ್ಪ ಅವರಿಗೆ ಮೇಲ್ಮನವಿದಾರರು ಕೋರಿದ ಮಾಹಿತಿ ನೀಡಿ, ಮುಂದಿನ ವಿಚಾರಣೆಗೆ ಹಾಜರಾಗುವಂತೆ ಈ ಹಿಂದೆ ಆಯೋಗ ಆದೇಶ ಮಾಡಿತ್ತು. ಆದರೆ ಆಯೋಗದ ಆದೇಶ ಪಾಲನೆ ಮಾಡದೆ ನಿರ್ಲಕ್ಷ್ಯ ತೋರಿದ ಕಾರಣ ಅವರಿಗೂ ಸಹ 5 ಸಾವಿರ ರೂಪಾಯಿಗಳ ದಂಡ ವಿಧಿಸಲಾಗಿದೆ.

ಉಭಯ ಅಧಿಕಾರಿಗಳಿಗೆ ವಿಧಿಸಿದ ದಂಡ ವಸೂಲಿಗೆ ಕ್ರಮ ವಹಿಸಿ ಮುಂದಿನ ವಿಚಾರಣೆ ವೇಳೆ ವರದಿ ನೀಡುವಂತೆ ರಾಯಚೂರು ಮತ್ತು ಯಾದಗಿರ ಜಿಲ್ಲೆಯ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ, ಶ್ರೀ ಪ್ರವೀಣಕುಮಾರ ಹಾಗೂ ಶ್ರೀ ಚಿದಾನಂದಪ್ಪ ಅವರಿಗೆ ಮಾಹಿತಿ ಹಕ್ಕು ಅಧಿನಿಯಮ 2005ರ ಕಲಂ 18(3) ರಡಿಯಲ್ಲಿ ನಿರ್ದೇಶಿಸಿದೆ. ತಪ್ಪಿದಲ್ಲಿ ಮಾಹಿತಿ ಹಕ್ಕು ಅಧಿನಿಯಮ 2005ರ ಕಲಂ 20(2) ರಡಿ ಕ್ರಮ ವಹಿಸಲಾಗುವುದೆಂದು ಆದೇಶ ಮಾಡಿದೆ ಎಂದು ಆಯೋಗದ ಪ್ರಕಠಣೆ ತಿಳಿಸಿದೆ.

# ಶಾಸಕನ ವಿರುದ್ಧ ಅಪ್ಪುಗೌಡ ಪಾಟೀಲ ರೇವೂರ ಬೆಂಬಲಿಗರಿಂದ ಸುಳ್ಳು ಆರೋಪ

**ಕಲಬುರಗಿ:** ಕಳೆದ 20 ವರ್ಷಗಳಿಂದ ಚಂದ್ರಶೇಖರ ಪಾಟೀಲ ರೇವೂರು



ಕುಟುಂಬದ ಆಡಳಿತವನ್ನು ತಿರಸ್ಕರಿಸಿ ಅಭಿವೃದ್ಧಿಯತ್ತ ಸಾಗುತ್ತಿರುವ ಕಲಬುರಗಿ ದಕ್ಷಿಣ ಮತಕ್ಷೇತ್ರದ ಮಾಜಿ ಶಾಸಕ ದತ್ತಾತ್ರೇಯ ಪಾಟೀಲ ರೇವೂರ ಬೆಂಬಲಿಗರು ನಡೆಸಿದ ಹೋರಾಟ ಸಂಪೂರ್ಣ ರಾಜಕೀಯ ಪ್ರೇರಿತವಾಗಿದೆ ಎಂದು ಯುವ ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಓಂಕಾರ ವಠಾರ ಆರೋಪಿಸಿದರು.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು, ತಮ್ಮ ನಾಯಕರ ರಾಜಕೀಯ ಅಸ್ತಿತ್ವದ ಉಳಿವಿಗಾಗಿ, ಜನ ಹಿತವನ್ನು ಬದಿಗೊತ್ತಿ ಅವರು ಪ್ರತಿಭಟನೆ ನಡೆಸಿದ್ದಾರೆ ಎಂದು ಅವರು ಆರೋಪಿಸಿದರು. ಕಳೆದ ಎರಡು ದಶಕಗಳ ಕಾಲ ಭಾವನಾತ್ಮಕ ಹಾಗೂ ಮತೀಯ ವಿಚಾರಗಳನ್ನು ಮುಂದಿಟ್ಟುಕೊಂಡು ಗೆಲುವು ಸಾಧಿಸುತ್ತಿದ್ದವರಿಗೆ, 2023ರ ನಂತರ ಕ್ಷೇತ್ರದಲ್ಲಿ ಆರಂಭವಾಗಿರುವ 'ನಿಜವಾದ ಅಭಿವೃದ್ಧಿ'ಯನ್ನು ಕಂಡು ಸಹಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ.

ಶಾಸಕ ಅಲ್ಲಮಪ್ರಭು ಪಾಟೀಲ ಅವರು ಕಲಬುರಗಿ ಜಿಲ್ಲೆಗೆ ನಾಲ್ಕು ಚತುಷ್ಪದ ಬಸ್ ನಿಲ್ದಾಣ ನಿರ್ಮಾಣ ಮಾಡಿದ್ದಾರೆ.ಹಾಗೂ ಸದಾ ರೈತರ ಪರವಾಗಿ ನಿಲ್ಲುವ ನಾಯಕರಾಗಿದ್ದಾರೆ.ಮತ್ತು 24*7 ಜನ ಸೇವೆ ಹಾಗೂ ಜನ ಸಂಪರ್ಕದಲ್ಲಿ ನಿತ್ಯ ನಿರತರಾಗಿದ್ದಾರೆ. ಮತ್ತು ಅವರು ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಿದ್ದಾರೆ.ಇಷ್ಟೆಲ್ಲಾ ಕೂಡಾ ಅಭಿವೃದ್ದಿ ಮಾಡಿದರು ಶಾಸಕ ಅಲ್ಲಮಪ್ರಭು ಪಾಟೀಲ ಅವರ ವಿರುದ್ಧ ಮಾಜಿ ಶಾಸಕ ದತ್ತಾತ್ರೇಯ ಪಾಟೀಲ ಬೆಂಬಲಿಗರು ಮಾಡುತ್ತಿರುವ ಆರೋಪವು ಸುಳ್ಳಾಗಿವೆ.ದಕ್ಷಿಣ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯತ ಒಳಪಡುವ ಗ್ರಾಮಗಳಿಗೆ ಹೆಚ್ಚಿನ ಒತ್ತು ನೀಡಿದ್ದಾರೆ.ವಿಶೇಷವಾಗಿ ಅವರು ತಮ್ಮ ಅನುದಾನದ ಅಡಿಯಲ್ಲಿ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿದ್ದು ವಿಶೇಷವಾಗಿದೆ.

ಮಾಜಿ ಶಾಸಕ ದತ್ತಾತ್ರೇಯ ಪಾಟೀಲ ರೇವೂರ ಅವರು ಶಾಸಕರಿದ್ದಾಗ ದಕ್ಷಿಣ ಮತಕ್ಷೇತ್ರದಲ್ಲಿ ಯಾವುದೇ ಅಭಿವೃದ್ಧಿ ಆಗಿಲ್ಲ.ಶಾಸಕ ಅಲ್ಲಮಪ್ರಭು ಪಾಟೀಲ ಅವರು ಅಭಿವೃದ್ಧಿ ಕಡೆ ಗಮನ ಹರಿಸುವುದರಿಂದ ರೇವೂರ ಬೆಂಬಲಿಗರಿಗೆ ಸುಳ್ಳು ಆರೋಪ ಮಾಡುತ್ತಿರುವುದು ಖಂಡನೀಯವಾಗಿದೆ ಎಂದರು.

# ಕಾರ್ಮಿಕರ ವೇತನ ತಾರತಮ್ಯ ಸರಿಪಡಿಸಲು ಶಿಫಾರಸ್ಸು

**ಒರಿಸ್ಸಾ:** ಒರಿಸ್ಸಾದ ಕಲ್ಲಿದ್ದಲು ಗಣಿಗಳಲ್ಲಿ ಕಾರ್ಮಿಕರ ಸ್ಥಿತಿಗತಿ ಹೇಗಿದೆ, ಅವರ ಸಮಸ್ಯೆಗಳೇನಿದೆ ಎಂದು ತಿಳಿದುಕೊಂಡು ಶಿಫಾರಸ್ಸು ಮಾಡಿ ಅವರ ಜೀವನ ಸುಧಾರಣೆಗೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇವೆ ಎಂದು ಸಂಸತ್ತಿನ ಕಾರ್ಮಿಕ, ಜವಳಿ ಮತ್ತು ಕೌಶಲ್ಯ ಅಭಿವೃದ್ದಿ ಸ್ಥಾಯಿ ಸಮಿತಿ ಅಧ್ಯಕ್ಷ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ. ಓರಿಸ್ಸಾದಲ್ಲಿ ತಮ್ಮ ಅಧ್ಯಕ್ಷತೆಯ ಸ್ಥಾಯಿ ಸಮಿತಿ ವತಿಯಿಂದ ಅಧ್ಯಯನ ಪ್ರವಾಸ ಕೈಗೊಂಡಿರುವ ಅವರು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ಓರಿಸ್ಸಾಕ್ಕೆ ಬಂದಿರುವುದು ಬಹಳ ಖುಷಿಯಾಗಿದೆ. ಇದು ಪುಣ್ಯ ಭೂಮಿ ಇಲ್ಲಿಂದ ಇಡೀ ದೇಶಕ್ಕೆ ವಿದ್ಯುತ್ ದೊರೆಯುತ್ತದೆ. ದೇಶವನ್ನು ಬೆಳಗುವ ಕೆಲಸವಾಗುತ್ತಿದೆ. ಇಲ್ಲಿ ಸ್ಟೀಲ್ ಅಲ್ಯೂಮಿನಿಯಂ ಉತ್ಪಾದನೆಯಾಗುತ್ತಿದೆ. ದೇಶ ಕಟ್ಟುವ ಕೆಲಸವಾಗುತ್ತಿದೆ. ಇದು ಸ್ವಾಮೀ ಜಗನ್ನಾಥನ ಪುಣ್ಯಭೂಮಿ, ಓರಿಸ್ಸಾ ಜನರು ಬಹಳ ಶಾಂತಿ ಪ್ರೀಯರು, ಶ್ರಮಜೀವಿಗಳು ಹಾಗೂ ಇಲ್ಲಿನ ಸಂಸ್ಕೃತಿ ಶ್ರೀಮಂತವಾಗಿದೆ ಎಂದು ಹೇಳಿದರು. ನಮ್ಮದು ಸಂಸತ್ ಕಾರ್ಮಿಕ ಸ್ಥಾಯಿ ಸಮಿತಿ ಓರಿಸ್ಸಾದ ಕಲ್ಲಿದ್ದಲು ಗಣಿಗಳಲ್ಲಿ ಕಾರ್ಮಿಕರ ಸ್ಥಿತಿಗತಿ ಹೇಗಿದೆ, ಅವರ ಸಮಸ್ಯೆಗಳೇನಿದೆ ಅದನ್ನು ತಿಳಿದುಕೊಂಡು ನಮ್ಮ ಸಮಿತಿ ಶಿಫಾರಸ್ಸು ಮಾಡಿ ಅವರ ಜೀವನ ಸುಧಾರಣೆಗೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇವೆ ಎಂದರು. ನಿನ್ನೆ ನಾವು ಎರಡು ನದಿಗಳ ಸಂಗಮವಾಗುವ ರಾಮಚಂದ್ ಮಂದಿರಕ್ಕೆ ಭೇಟಿ ನೀಡಿದ್ದೇವು, ಇನ್ನೊಂದು ಕಾಡೇಶ್ವರ್ ಮಂದಿರಕ್ಕೆ ಭೇಟಿ ನೀಡಿದ್ದೇವು ಬಹಳ ಸುಂದರವಾಗಿ ನಿರ್ಮಿಸಿದ್ದಾರೆ. ನಾನು ಓರಿಸ್ಸಾ ಮತ್ತು ಓರಿಸ್ಸಾ ಜನರನ್ನು ಎಂದೂ ಮರೆಯುವುದಿಲ್ಲ ಏಕೆಂದರೆ ಬಿಜು ಪಟ್ನಾಯಕ್ ಮುಖ್ಯಮಂತ್ರಿ ಇದ್ದಾಗ ನಮ್ಮ ತಂದೆಯನ್ನು ಓರಿಸ್ಸಾದಿಂದ ರಾಜ್ಯಸಭೆಗೆ ಕಳುಹಿಸಿದ್ದರು. ಹೀಗಾಗಿ ಇಲ್ಲಿನ ಜನರ ಬಗ್ಗೆ ಗೌರವ ಇದೆ ಎಂದು ಹೇಳಿದರು.

# ಕಾಲೇಜಿನ ಛಾವಣಿ ಕುಸಿತ: ನೂತನ ಕಟ್ಟಡಕ್ಕೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು




ನಗರದ ಏಕೈಕ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜು ಛಾವಣಿ ಕುಸಿತದಿಂದ ಗಾಯಗೊಂಡ ವಿದ್ಯಾರ್ಥಿನಿಯರಿಗೆ ಪರಿಹಾರ ಹಾಗೂ ನೂತನ ಕಟ್ಟಡ ನಿರ್ಮಿಸುವಂತೆ ಒತ್ತಾಯಿಸಿ ಆಲ್ ಇಂಡಿಯಾ ಡೆಮಾಕ್ರಟಿಕ್ ಸ್ಟೂಡೆಂಟ್ಸ್ ಆರ್ಗನೈಸೇಷನ್ ನೇತೃತ್ವದಲ್ಲಿ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಶನಿವಾರ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಬೃಹತ್ ಪ್ರತಿಭಟನೆ ಮಾಡಿದರು.

ಈ ಸಂದರ್ಭದಲ್ಲಿ ಎಐಡಿಎಸ್ಒ ಜಿಲ್ಲಾ ಅಧ್ಯಕ್ಷ ತುಳಜಾರಾಮ್ ಎನ್.ಕೆ., ಅವರು ಮಾತನಾಡಿ, ಜಿಲ್ಲೆಯಾದ್ಯಂತ ನೂರಾರು ಹಳ್ಳಿಗಳಿಂದ, ಬಡ ರೈತ ಹಾಗೂ ಕಾರ್ಮಿಕ ಕುಟುಂಬಗಳ ಸಾವಿರಾರು ಹೆಣ್ಣುಮಕ್ಕಳು ಉನ್ನತ ವ್ಯಾಸಂಗಕ್ಕಾಗಿ ಈ ಕಾಲೇಜನ್ನು ನಂಬಿ ಬರುತ್ತಿದ್ದಾರೆ. ನಿನ್ನೆ ಕಾಲೇಜಿನ ಮೂರನೇ ಮಹಡಿಯಲ್ಲಿ ಪ್ರಥಮ ವರ್ಷದ ವಾಣಿಜ್ಯ ವಿಭಾಗದ ತರಗತಿ ನಡೆಯುತ್ತಿದ್ದಾಗ ಛಾವಣಿಯ ಸಿಮೆಂಟ್ ಪದರು ಕುಸಿದು ಐವರು ವಿದ್ಯಾರ್ಥಿನಿಯರು ಗಾಯಗೊಂಡಿರುವುದು ಅತ್ಯಂತ ಆಘಾತಕಾರಿ ಮತ್ತು ನೋವಿನ ಸಂಗತಿಯಾಗಿದೆ. ಈ ಘಟನೆಯ ನಂತರ ವಿದ್ಯಾರ್ಥಿನಿಯರು ಹಾಗೂ ಪೋಷಕರು ಜೀವಭಯದಲ್ಲೇ ಕಾಲೇಜಿಗೆ ಬರುವ ಅನಿವಾರ್ಯತೆ ನಿರ್ಮಾಣವಾಗಿದೆ. ಸರ್ಕಾರ ಈ ಕೂಡಲೇ ಗಾಯಗೊಂಡಿರುವ ವಿದ್ಯಾರ್ಥಿನಿಯರಿಗೆ ಸೂಕ್ತ ಪರಿಹಾರ ನಿಧಿಯನ್ನು ಮಂಜೂರು ಮಾಡಬೇಕು ಮತ್ತು ಶಿಥಿಲಗೊಂಡಿರುವ ಪ್ರಸ್ತುತ ಕಟ್ಟಡವನ್ನು ತಕ್ಷಣವೇ ದುರಸ್ತಿಗೊಳಿಸಿ, ನೂತನ ಕಟ್ಟಡದ ನಿರ್ಮಾಣಕ್ಕಾಗಿ ತುರ್ತಾಗಿ ಹಣ ಬಿಡುಗಡೆ ಮಾಡಬೇಕು ಎಂದು ತೀವ್ರವಾಗಿ ಒತ್ತಾಯಿಸಿದರು.


ಜಿಲ್ಲೆಯಾದ್ಯಂತ ಬಹುತೇಕ ಸರ್ಕಾರಿ ಶಿಕ್ಷಣ ಸಂಸ್ಥೆಗಳ ಪರಿಸ್ಥಿತಿಯೂ ಇದಕ್ಕಿಂತ ಭಿನ್ನವಾಗಿಲ್ಲ. ಮಳೆ ಬಂದರೆ ಯಾವಾಗ ಕಟ್ಟಡ ಕುಸಿಯುತ್ತದೋ ಎಂಬ ಭೀತಿಯಲ್ಲೇ ವಿದ್ಯಾರ್ಥಿಗಳು ಪಾಠ ಕೇಳುವಂತಾಗಿದೆ. ಸರ್ಕಾರಿ ಕಾಲೇಜುಗಳಲ್ಲಿ ಕನಿಷ್ಠ ಗುಣಮಟ್ಟದ ಕಟ್ಟಡ, ಸುರಕ್ಷತೆ ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸುವಲ್ಲಿ ಸರ್ಕಾರವು ಸಂಪೂರ್ಣವಾಗಿ ನಿರ್ಲಕ್ಷ್ಯ ವಹಿಸಿದೆ ಎಂಬುದು ಈ ಘಟನೆಯಿಂದ ಸ್ಪಷ್ಟವಾಗಿದೆ. ಈ ಆಘಾತಕಾರಿ ಘಟನೆಯನ್ನು ಸರ್ಕಾರವು ಅತ್ಯಂತ ಗಂಭೀರವಾಗಿ ಪರಿಗಣಿಸಬೇಕು. ಕಾಲೇಜಿಗೆ ಅಗತ್ಯವಿರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಿ, ಪ್ರಸ್ತುತ ಭಯದ ನೆರಳಿನಲ್ಲಿರುವ ವಿದ್ಯಾರ್ಥಿನಿಯರ ಸುರಕ್ಷತೆಯನ್ನು ಖಾತ್ರಿಪಡಿಸಬೇಕು. ಇಲ್ಲದಿದ್ದರೆ ವಿದ್ಯಾರ್ಥಿನಿಯರ ಹಿತರಕ್ಷಣೆಗಾಗಿ ಸಂಘಟನೆಯು ಜಿಲ್ಲಾದ್ಯಂತ ತೀವ್ರ ಹೋರಾಟ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಅವರು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಎಐಡಿಎಸ್ಒ ಜಿಲ್ಲಾ ಕಾರ್ಯದರ್ಶಿ ವೆಂಕಟೇಶ ದೇವದುರ್ಗ, ಜಿಲ್ಲಾ ಉಪಾಧ್ಯಕ್ಷೆ ಪ್ರೀತಿ ದೊಡ್ಡಮನಿ, ಖಜಾಂಚಿ ಸ್ಫೂರ್ತಿ ಗುರಜಲ್ಕರ್, ಸದಸ್ಯರಾದ ದೇವರಾಜ್ ರಾಜೋಳ್, ರಾಹುಲ್ ಜಾಧವ್, ಯುವರಾಜ್ ರಾಠೋಡ್, ಬಾಬು ಪವಾರ್, ಮತ್ತು ಬೃಂದಾ, ಅನಿತಾ, ಪ್ರೀತಿ, ಕಾವೇರಿ, ಪ್ರೀಯಾ, ಹಲವಾರು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ರಸ್ತೆ ತಡೆ: ಇನ್ನೊಂದೆಡೆ ಸರ್ಕಾರಿ ಕಾಲೇಜಿನ ಮೇಲ್ಛಾವಣಿ ಕುಸಿದು ವಿದ್ಯಾರ್ಥಿನಿಯರು ಗಾಯಗೊಂಡ ಘಟನೆಯನ್ನು ಖಂಡಿಸಿ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ವಿದ್ಯಾರ್ಥಿಗಳು ರಸ್ತೆ ತಡೆ ನಡೆಸಿದರು. ಹೋರಾಟದ ನೇತೃತ್ವ ವಹಿಸಿದ್ದ ನಾಯಕರಿಗೆ ಪೋಲಿಸರು ಅಲ್ಲಿಂದ ಚದುರಿಸಿದರು. ಈ ಮಧ್ಯೆ, ಗಾಯಾಳು ವಿದ್ಯಾರ್ಥಿಗಳನ್ನು ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಭೇಟಿ ನೀಡಿ ಸಾಂತ್ವನ ಹಾಗೂ ಧೈರ್ಯ ಹೇಳುತ್ತಿದ್ದಾರೆ.

# ತಲೆ ಮರೆಸಿಕೊಂಡಿದ್ದ ಇಬ್ಬರ ಬಂಧನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ





ಜಿಲ್ಲೆಯ ವಾಡಿ ಠಾಣೆಯ ಪೋಲಿಸರು ಕಳೆದ 8 ವರ್ಷಗಳಿಂದ ತಲೆಮರೆಸಿಕೊಂಡಿದ್ದ ಇಬ್ಬರು ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಬಂಧಿತರನ್ನು ಚಿತ್ತಾಪುರ ತಾಲ್ಲೂಕಿನ ಕಡಬೂರ್ ಗ್ರಾಮದ ಅಹ್ಮದ್ ಷಾ ತಂದೆ ಮಹಿಬೂಬ್ ಷಾ (43) ಹಾಗೂ ಚಿತ್ತಾಪುರ ತಾಲ್ಲೂಕಿನ ನಾಲವಾರ್ ಸ್ಟೇಷನ್‌ನ ನಿವಾಸಿ ನಿಂಗಪ್ಪ ತಂದೆ ಚೌಡಪ್ಪ (36) ಎಂದು ಗುರುತಿಸಲಾಗಿದೆ.

ಅಹ್ಮದ್ ಷಾ ತಂದೆ ಮಹಿಬೂಬ್ ಕಳೆದ 2010ರ ಏಪ್ರಿಲ್ 29ರಂದು ಹಲಕರ್ಟಿ ಸೀಮಾಂತರದ ವಾಡಿ–ಯಾದಗಿರ ಮುಖ್ಯ ರಸ್ತೆಯ ಮೇಲೆ ದರೋಡೆ ಮಾಡಲು ಹೊಂಚು ಹಾಕಿದ ಪ್ರಕರಣದಲ್ಲಿ ಭಾಗಿಯಾದ ಸದರಿ ಆರೋಪಿತನು ಸುಮಾರು 8 ವರ್ಷಗಳಿಂದ ತಲೆಮರೆಸಿಕೊಂಡಿದ್ದ ಆರೋಪಿತನಾಗಿರುತ್ತಾನೆ.

ಅದೇ ರೀತಿ ನಿಂಗಪ್ಪ ತಂದೆ ಚೌಡಪ್ಪನು ಯಾವುದೆ ಪರವಾನಗೆ ಇಲ್ಲದೆ ಅಕ್ರಮ ಶಸ್ತ್ರಾಸ್ತ್ರ ತಯಾರಿಕೆ ಮಾಡುವ ಪ್ರಕರಣದಲ್ಲಿ ಭಾಗಿಯಾದ ಸುಮಾರು 08 ವರ್ಷಗಳಿಂದ ತಲೆಮರೆಸಿಕೊಂಡಿದ್ದ ಆರೋಪಿತನಾಗಿದ್ದು, ಸದರಿ ಆರೋಪಿತನನ್ನು ಪತ್ತೆ ಮಾಡಿ ನ್ಯಾಯಾಂಗ ಬಂಧನ ಕುರಿತು ಕಳಿಸಲಾಗಿದೆ. ಸದರಿ ಆರೋಪಿತರನ್ನು ಪತ್ತೆ ಮಾಡಿದ್ದು, ಇಬ್ಬರು ಆರೋಪಿತರು ಅತಿ ಮುಖ್ಯವಾದ ಪ್ರಕರಣಗಳಾದ ಡಕಾಯತಿ ಮಾಡಲು ಹೊಂಚು ಹಾಕಿದ ಮತ್ತು ಅಕ್ರಮ ಶಸ್ತ್ರಾಸ್ತ್ರ ಹಾಗೂ ಬಂದೂಕು ತಯಾರಿಸುವಂತಹ ಅತಿ ಪ್ರಮುಖ ಪ್ರಕರಣಗಳಲ್ಲಿ 8 ವರ್ಷಗಳಿಂದ ಯಾರಿಗೂ ಸಿಗದೆ ತಲೆಮರೆಸಿಕೊಂಡಿದ್ದರು ಎಂದು ತಿಳಿದುಬಂದಿದೆ.

# 371(ಜೆ) ಕಲಂ ದಿನ: ಪ್ರತಿ ವರ್ಷ ಆಚರಣೆಗೆ ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ದೀರ್ಘ ಕಾಲದ ಹೋರಾಟ ಮತ್ತು ರಾಜಕೀಯ ಇಚ್ಛಾಶಕ್ತಿಯಿಂದ 371ನೇ ಜೆ ಕಲಂ ಜನೆವರಿ 2013ರಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಜಾರಿಯಾಗಿದೆ. 371ನೇ ಜೇ ಕಲಂ ಅಸ್ತಿತ್ವ ಮತ್ತು ನಮ್ಮ ಹಕ್ಕು ಹಾಗೂ ಸಂವಿಧಾನದ ಬದ್ದ ಉಳಿಸಿಕೊಳ್ಳಲು ಹಾಗೂ ಈ ಐತಿಹಾಸಿಕ ದಿನಾಚರಣೆ ಆಚರಿಸಲು ಪ್ರತಿ ವರ್ಷ ಜನೆವರಿ 1ರಂದು 371ನೇ ಜೇ ಕಲಂ ಆಚರಣೆ ಮಾಡಲು ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಗೌರವಾಧ್ಯಕ್ಷ ಬಸವರಾಜ್ ದೇಶಮುಖ್ ಅವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ಸಮಿತಿಯ ಅಧ್ಯಕ್ಷ ಡಾ. ಲಕ್ಷ್ಮಣ ದಸ್ತಿಯವರು ಮಂಡಿಸಿದ ಪ್ರಸ್ತಾವನೆಗೆ ಸರ್ವಾನುಮತದಿಂದ ನಿರ್ಣಯ ಮಾಡಲಾಯಿತು.

ಅದೆ ರೀತಿಯಾಗಿ 371ನೇಜೇ ಕಲಂ ಸಾಧನೆ ಮತ್ತು ಸಮಸ್ಯೆಗಳ ಬಗ್ಗೆ ಗಂಭೀರ ಚರ್ಚೆಗಳು ನಡೆದು ಅನೇಕ ನಿರ್ಣಯಗಳನ್ನು ಕೈಗೊಳ್ಳಲಾಯಿತು. ಈ ಸಂದರ್ಭದಲ್ಲಿ ಶಿಕ್ಷಣ ಸಂಸ್ಥೆಗಳ ಪ್ರಮುಖರು ಮತ್ತು ಶಾಸಕರು ಆದ ಶಶೀಲ್ ನಮೋಶಿ, ಬಿ.ಜಿ. ಪಾಟೀಲ್, ಅಬ್ದುಲ್ ಹಮೀದ್, ಬೀದರಿನ ಡಾ. ರಜನೀಶ್ ವಾಲಿ, ಪಂಡಿತ್ ಚಿದ್ರಿ, ಡಾ. ಸನಾವುಲ್ಲಾ,ಪ್ರೊ. ಪ್ರತಾಪ್ ಸಿಂಗ್, ಕಲ್ಯಾಣ ಕರ್ನಾಟಕ ಕೈಗಾರಿಕೆ ಮತ್ತು ವಾಣಿಜ್ಯ ಮಂಡಳಿ ಅಧ್ಯಕ್ಷ ಶರಣು ಪಪ್ಪಾ, ಆರ್.ಕೆ. ಹುಡುಗಿ, ಸೆಂಟ್ ಮೇರಿ ಸಂಸ್ಥೆ ಸೇರಿದಂತೆ ಐವತ್ತಕ್ಕೂ ಹೆಚ್ಚು ಸಂಸ್ಥೆಗಳ ಪ್ರಮುಖರು, ಮೂವತ್ತು ಕಾಲೇಜುಗಳ, ವಿವಿಗಳ ಪ್ರಮುಖರು ಭಾಗವಹಿಸಿದ್ದರು.

# ರಾಷ್ಟ್ರೀಯ ವಿಚಾರ ಸಂಕಿರಣ: ವಿಶ್ವ ಪರಿಸರ ದಿನ ಆಚರಣೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್



ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಜಾಗತಿಕ ತಾಪಮಾನವನ್ನು ನಿಯಂತ್ರಿಸಲು ಹೆಚ್ಚು ಹೆಚ್ಚು ಗಿಡಗಳನ್ನು ಬೆಳೆಸುವ ಅಗತ್ಯವಿದೆ ಎಂದು ರಾಜ್ಯ ಹಿರಿಯ ನಾಗರಿಕರ ಪ್ರಶಸ್ತಿ ಪುರಸ್ಕೃತ ವೀರಭದ್ರಪ್ಪ ಉಪ್ಪಿನ ಕರೆ ನೀಡಿದರು.

ಆಂಧ್ರಪ್ರದೇಶದ ಅನಂತಪುರಂನಲ್ಲಿ ಅಖಿಲ ಭಾರತ ವಿಶ್ವವಿದ್ಯಾಲಯಗಳ ನೌಕರರ ಒಕ್ಕೂಟದ ರಾಷ್ಟ್ರೀಯ ವಿಚಾರ ಸಂಕಿರಣದ ಅಂಗವಾಗಿ ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿ ಅವರು ಮಾತನಾಡಿದರು. ರಾಜ್ಯದಲ್ಲಿ ತಾಪಮಾನವು ಗರಿಷ್ಠ 50 ಡಿಗ್ರಿ ಸೆಲ್ಸಿಯಸ್‌ವರೆಗೆ ದಾಖಲಾಗಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಏರಿಕೆಯಾಗುವ ಸಾಧ್ಯತೆ ಇದೆ. ಗಿಡ–ಮರಗಳ ಸಂಖ್ಯೆ ಹೆಚ್ಚಾದರೆ ತಾಪಮಾನ ನಿಯಂತ್ರಣ ಸಾಧ್ಯವಾಗುತ್ತದೆ ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಬೋಧ–ಕೇತರ ನೌಕರರ ಸಂಘದ ಅಧ್ಯಕ್ಷ ಎಂ. ತಿಮ್ಮಪ್ಪ ಮಾತನಾಡಿ, ವಿಶ್ವವಿದ್ಯಾಲಯದ ವಿಶಾಲ ಆವರಣವನ್ನು ಹಸಿರುಮಯಗೊಳಿಸಲು ದೀರ್ಘಾವಧಿಯ ಯೋಜನೆಗಳನ್ನು ರೂಪಿಸಲಾಗಿದೆ ಎಂದು ಹೇಳಿದರು. ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡದ ನೌಕರರ ಸಂಘದ ಅಧ್ಯಕ್ಷ ರಾಜೇಶ್ ಸವಣೂರ ಮಾತನಾಡಿ, ಪರಿಸರ ಜಾಗೃತಿ ವಿಷಯವನ್ನು ಎಲ್ಲಾ ತರಗತಿಗಳ ಪಠ್ಯಕ್ರಮದಲ್ಲಿ ಸೇರಿಸಬೇಕು ಹಾಗೂ ವಾರಕ್ಕೊಮ್ಮೆ ಶಾಲಾ ಮಕ್ಕಳಿಂದ ಗಿಡ–ಮರಗಳ ಸ್ವಚ್ಛತೆ ಮತ್ತು ನಿರ್ವಹಣೆ ಕಾರ್ಯ ನಡೆಸಬೇಕು ಎಂದು ಸಲಹೆ ನೀಡಿದರು. ಒಡಿಶಾದ ಉತ್ಕಲ್ ವಿಶ್ವವಿದ್ಯಾಲಯದ ನೌಕರರ ಸಂಘದ ಅಧ್ಯಕ್ಷ ಬಿರಾಂಚಿ ರಾಯ್ ಮಾತನಾಡಿ, ಪರಿಸರ ಉಳಿದರೆ ಮಾನವ ಕುಲ ಉಳಿಯುತ್ತದೆ. ಗಿಡ–ಮರಗಳ ಸಂರಕ್ಷಣೆ ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಪ್ರಧಾನ ಕಾರ್ಯದರ್ಶಿ ಎಸ್. ಮಾರುತಿ, ಸುಬ್ರಮಣ್ಯ ಸೇರಿದಂತೆ ಸಂಘದ ಅನೇಕ ಸದಸ್ಯರು ಭಾಗವಹಿಸಿದ್ದರು. ಪರಿಸರ ಜಾಗೃತಿ ಅಭಿಯಾನದ ಅಂಗವಾಗಿ ಹಾಜರಿದ್ದ ಪ್ರತಿಯೊಬ್ಬರೂ ತಲಾ ಒಂದು ಅಲಂಕಾರಿಕ ಗಿಡವನ್ನು ನೆಟ್ಟು, ಪರಿಸರ ಸಂರಕ್ಷಣೆಯ ಪ್ರತಿಜ್ಞೆ ಸ್ವೀಕರಿಸಿದರು.

# ಸಬ್ ಕಾ ಸಾಥ್–ಸಬ್ ಕಾ ವಿಕಾಸ್ ಮೋದಿ ಸರ್ಕಾರ್

• ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ



ಕೇಂದ್ರ ಸರ್ಕಾರದ 12 ವರ್ಷದ ಆಡಳಿತದ ಸಾಧನೆಗಳು, ದೇಶದ ಅಭಿವೃದ್ಧಿಗೆ ಕೈಗೊಂಡ ನಿರ್ಧಾರಗಳು ಹಾಗೂ ವಿದೇಶಾಂಗ ನೀತಿಗಳ ಕುರಿತು ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಮುಖಂಡ ರಾಜ್ಯ ವಿಧಾನ ಪರಿಷತ್ ಸದಸ್ಯ ಕೇಶವ ಪ್ರಸಾದ್ ವಿವರಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,ಸಬ್ ಕಾ ಸಾಥ್, ಸಬ್ ಕಾ ವಿಶ್ವಾಸ್, ಸಬ್ ಕಾ ವಿಕಾಸ್ ಎಂಬ ಧ್ಯೇಯದೊಂದಿಗೆ ಕಳೆದ 12 ವರ್ಷಗಳಿಂದ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಜನಪರ ಆಡಳಿತ ನೀಡುತ್ತಿದ್ದು, ದೇಶದ ಜನರ ಮೆಚ್ಚುಗೆಗೆ ಪಾತ್ರವಾಗಿದೆ ಎಂದು ಸರ್ಕಾರದ ಜನಪ್ರಿಯತೆ ಗಣನೀಯವಾಗಿ ಹೆಚ್ಚಿದ್ದು, ರೈತರು ಮತ್ತು ಮಹಿಳೆಯರ ಅಭಿವೃದ್ಧಿಗೆ ವಿಶೇಷ ಯೋಜನೆಗಳು ಹಾಗೂ ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ ಎಂದು ತಿಳಿಸಿದರು.

ಮಹಿಳಾ ಸಬಲೀಕರಣ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಜನಕಲ್ಯಾಣ ಯೋಜನೆಗಳ ಮೂಲಕ ಸಮಾಜದ ಎಲ್ಲ ವರ್ಗಗಳಿಗೂ ಸರ್ಕಾರ ನೆರವಾಗುತ್ತಿದೆ ದೇಶದ ಪ್ರಗತಿಗೆ ಅಗತ್ಯವಾದ ದಿಟ್ಟ ನಿರ್ಧಾರಗಳನ್ನು ಕೇಂದ್ರ ಸರ್ಕಾರ ಕೈಗೊಂಡಿದ್ದು,ಅಭಿವೃದ್ಧಿಯ ದಿಕ್ಕಿನಲ್ಲಿ ಭಾರತವನ್ನು ಮುನ್ನಡೆಸುತ್ತಿದೆ ಎಂದು ಅಭಿಪ್ರಾಯಪಟ್ಟರು.

ಜಾಗತಿಕ ಮಟ್ಟದಲ್ಲಿ ಹಲವು ಸವಾಲುಗಳು ಮತ್ತು ಸಂಕಷ್ಟಗಳು ಎದುರಾದ ಸಂದರ್ಭದಲ್ಲೂ ಭಾರತ ಸ್ಥಿರತೆ ಕಾಪಾಡಿಕೊಂಡಿದ್ದು,ಅದಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವ ಮತ್ತು ವಿದೇಶಿ ರಾಷ್ಟಗಳೊಂದಿಗೆ ಉತ್ತಮ ಸಂಬಂಧಗಳು ಕಾರಣವಾಗಿವೆ ಎಂದು ಕೇಶವ ಪ್ರಸಾದ್ ಹೇಳಿದರು. ಅಂತರರಾಷ್ಟೀಯ ಮಟ್ಟದಲ್ಲಿ ಭಾರತಕ್ಕೆ ಉತ್ತಮ ಸ್ಥಾನಮಾನ ದೊರಕಿದ್ದು,ದೇಶದ ಸುರಕ್ಷತೆ ಮತ್ತು ಗೌರವ ಹೆಚ್ಚಾಗಿದೆ ಎಂದರು.

ಪ್ರಧಾನಿ ನರೇಂದ್ರ ಮೋದಿ ಅವರು ವೈಯಕ್ತಿಕ ವಿಚಾರಗಳಿಗಿಂತ ದೇಶ ಸೇವೆಗೆ ಆದ್ಯತೆ ನೀಡುತ್ತಿದ್ದು, ಗುಜರಾತ್‌ನಿಂದ ಆರಂಭವಾದ ಅವರ ಸಾರ್ವಜನಿಕ ಸೇವೆಯ ಪಯಣ ಇಂದಿಗೂ ನಿರಂತರವಾಗಿದೆ ಎಂದು ಹೇಳಿದರು.ಕಳೆದ 12 ವರ್ಷಗಳಲ್ಲಿ ಭಾರತವನ್ನು ಅಭಿವೃದ್ಧಿಯತ್ತ ಕೊಂಡೊಯ್ಯುವಲ್ಲಿ ಅವರ ಪಾತ್ರ ಮಹತ್ವದ್ದಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.ಮುಂದಿನ ಯುವ ಪೀಳಿಗೆಯ ಅಗತ್ಯಗಳನ್ನು ಮನಗಂಡು ವಿವಿಧ ಕ್ಷೇತ್ರಗಳಲ್ಲಿ ಯೋಜನೆಗಳನ್ನು ರೂಪಿಸಲಾಗುತ್ತಿದ್ದು,ಜಾಗತಿಕ ವೇದಿಕೆಯಲ್ಲಿ ಭಾರತವನ್ನು ಪ್ರತಿನಿಧಿಸುತ್ತಿರುವುದು ದೇಶದ ಹೆಮ್ಮೆಯ ಸಂಗತಿ ಎಂದು ವಿಧಾನ ಪರಿಷತ್ ಸದಸ್ಯ ಕೇಶವ ಪ್ರಸಾದ್ ತಿಳಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಸೀಕಲ್ ರಾಮಚಂದ್ರಗೌಡ ಮಾತನಾಡಿ ಎರಡು ಸಂಸದರ ಬಲದಿಂದ ಆರಂಭವಾದ ಬಿಜೆಪಿ ಇಂದು ದೇಶದ ಅಗ್ರ ರಾಜಕೀಯ ಪಕ್ಷವಾಗಿ ಬೆಳೆದಿರುವುದಕ್ಕೆ ಅದರ ಸಂಘಟನಾ ಶಕ್ತಿ,ದೇಶಭಕ್ತಿ ಹಾಗೂ ಸಾಮಾನ್ಯ ಕಾರ್ಯಕರ್ತರಿಗೆ ಅವಕಾಶ ನೀಡುವ ಸಂಸ್ಕೃತಿಯೇ ಕಾರಣ ಎಂದು ಹೇಳಿದರು.ಬಿಜೆಪಿ ಆರಂಭದಿಂದಲೂ ಸಾಮಾನ್ಯ ಜನರ ಪಕ್ಷವಾಗಿದ್ದು,ಸಾಮಾನ್ಯ ಕಾರ್ಯಕರ್ತನಿಗೂ ಉನ್ನತ ಹುದ್ದೆ ಸಿಗುವ ಅವಕಾಶವಿದೆ ಎಂದು ತಿಳಿಸಿದರು. ಗುಜರಾತ್‌ನಲ್ಲಿ ನಾಲ್ಕು ಬಾರಿ ಮುಖ್ಯಮಂತ್ರಿ ಆಗಿ ಕಾರ್ಯನಿರ್ವಹಿಸಿದ್ದ ಪ್ರಧಾನಿ ನರೇಂದ್ರ ಮೋದಿ ಅವರ ಆಡಳಿತ ಮಾದರಿ ದೇಶದ ಗಮನ ಸೆಳೆದಿತ್ತು.ಅವರು ಕೇವಲ ಗುಜರಾತ್‌ಗೆ ಸೀಮಿತವಾಗಬಾರದು,ಇಡೀ ರಾಷ್ಟ್ರಕ್ಕೆ ನಾಯಕತ್ವ ನೀಡಬೇಕು ಎಂಬ ಜನರ ಆಶಯದಿಂದ ಸತತವಾಗಿ ಮೂರು ಬಾರಿ ಪ್ರಧಾನಿಯಾಗಿ ಆಯ್ಕೆಯಾಗಿದ್ದಾರೆ ಎಂದು ಹೇಳಿದರು. ಇನ್ನೂ ಕೋಲಾರ ಹಾಗೂ ಚಿಕ್ಕಬಳ್ಳಾಪುರ ಭಾಗದ ನೀರಾವರಿ ಸಮಸ್ಯೆ ಕುರಿತು ಮಾತನಾಡಿದ ಅವರು, ಎತ್ತಿನಹೊಳೆ ಯೋಜನೆಯಿಂದ ನೀರು ಬರುವ ಕುರಿತು ಅನುಮಾನವಿದ್ದು,ಹೆಚ್.ಎನ್. ವ್ಯಾಲಿ ಯೋಜನೆಯಡಿ ಸರಬರಾಜಾಗುತ್ತಿರುವ ನೀರಿನ ಗುಣಮಟ್ಟದ ಬಗ್ಗೆ ಸಹ ಪ್ರಶ್ನೆಗಳು ಉದ್ಭವಿಸಿದೆ ಹೆಚ್ ಎನ್ ವ್ಯಾಲಿ ನೀರನ್ನು ಮೂರನೇ ಹಂತದ ಶುದ್ಧೀಕರಣ ವ್ಯವಸ್ಥೆ ಜಾರಿಗೆ ಹಲವು ಬಾರಿ ಒತ್ತಾಯಿಸಿದರೂ ಸರ್ಕಾರ ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿದರು.

ಈ ಹಿನ್ನೆಲೆಯಲ್ಲಿ ಕೃಷ್ಣಾ ನದಿಯಿಂದ ಚಿಕ್ಕಬಳ್ಳಾಪುರ ಜಿಲ್ಲೆಗೆ ನೀರು ತರುವ ವಿಚಾರದಲ್ಲಿ ಬಿಜೆಪಿ ಯಾವುದೇ ಹೋರಾಟಕ್ಕೂ ಸಿದ್ಧವಿದ್ದು, ವಈ ಕುರಿತು ಈಗಾಗಲೇ ಚರ್ಚೆಗಳು ನಡೆದಿವೆ ಜಿಲ್ಲೆಯ ಜನರಿಗೆ ಗುಣಮಟ್ಟದ ಕುಡಿಯುವ ನೀರು ಒದಗಿಸಲು ಪ್ರಾಮಾಣಿಕ ಪ್ರಯತ್ನ ನಡೆಸುವುದಾಗಿ ಭರವಸೆ ನೀಡಿದ ಅವರು ಶುದ್ಧ ನೀರು ದೊರೆಯದಿದ್ದರೆ ಮುಂದಿನ ದಿನಗಳಲ್ಲಿ ಜನರು ಗಂಭೀರ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಆದ್ದರಿಂದ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಅಗತ್ಯವಾಗಿದೆ ಎಂದು ಹೇಳಿದರು.ಇನ್ನೂ 2028ರ ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬರುವುದು ಖಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದ ಅವರು,ಮಹಿಳೆಯರು,ರೈತರು ಹಾಗೂ ಯುವಕರ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಬಿಜೆಪಿ ಕೆಲಸ ಮಾಡಲಿದೆ ಎಂದು ಹೇಳಿದರು.ಸುದ್ದಿಗೋಷ್ಠಿಯಲ್ಲಿ ಮಾಜಿ ಶಾಸಕ ರಾಜಣ್ಣ, ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ರಾಮಲಿಂಗಪ್ಪ,ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮುರಳೀಧರ, ಕೋಂಡೇನಹಳ್ಳಿ ಮುರಳಿ,ಚಿಂತಾಮಣಿ ವೇಣುಗೋಪಾಲ್,ಸೀಕಲ್ ಆನಂದ್ ಗೌಡ,ಲಕ್ಷ್ಮೀನಾರಾಯಣ ಗುಪ್ತ,ಅಶೋಕ್,ಬಾಗೇಪಲ್ಲಿ ಪ್ರತಾಪ್,ಇತರರು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)